# ಬೆಳಗಾವಿ ವರದಿ

ಗಡಿ ಜಿಲ್ಲೆಯ ಧ್ವನಿ...

VOL. 04 ISSUE. 828 ₹ 4. WEDNESDAY, 3 JANUARY 2024 NEWSBELAGAVI@GMAIL.COM 9900332089 RNI. KARKAN/2020/79084


## ರಾಜ್ಯದಲ್ಲಿ ಕೋವಿಡ್ ವ್ಯಾಕ್ಸಿನೇಷನ್ ಆರಂಭ




ಬೆಂಗಳೂರು: ಕೋವಿಶೀಲ್ಡ್ ಅಥವಾ ಕೊವ್ಯಾಕ್ಸಿನ್ 2ನೇ ಲಸಿಕೆ ಪಡೆದವರಿಗೆ ನೀಡಲು ಕೇಂದ್ರ ಸರ್ಕಾರವು ರಾಜ್ಯಕ್ಕೆ 30,000 ಡೋಸ್ ಕಾರ್ಬೆವ್ಯಾಕ್ಸ್ ಲಸಿಕೆಯನ್ನು ಸರಬರಾಜು ಮಾಡಿದೆ.

ಈ ಲಸಿಕೆಯನ್ನು ವಿಜಾತಿ (ಹೆಟೆರೊಲಾಗಸ್) ಮುನ್ನೆಚ್ಚರಿಕೆಯಾಗಿ ನೀಡಬಹುದು. ತಾಂತ್ರಿಕ ಸಲಹಾ ಸಮಿತಿಯ ಶಿಫಾರಸಿನಂತೆ ಕೋವಿಶೀಲ್ಡ್ ಅಥವಾ ಕೋವ್ಯಾಕ್ಸಿನ್ ಲಸಿಕೆಯ 2ನೇ ಡೋಸ್ ಪಡೆದು ಆರು ತಿಂಗಳು ಅಥವಾ 26 ತಿಂಗಳು ಪೂರೈಸಿದ ಬಳಿಕವೂ ಮುನ್ನೆಚ್ಚರಿಕೆ ಡೋಸ್ ಪಡೆಯದವರಿಗೆ ಈ ಲಸಿಕೆ ನೀಡಬಹುದು.

60 ವರ್ಷ ದಾಟಿದವರು, ರೋಗ ನಿರೋಧಕ ಶಕ್ತಿ ಕಡಿಮೆ ಇರುವವರು ಈ ಲಸಿಕೆಯನ್ನು ಪಡೆಯಬಹುದು. ಕೋವಿಡ್–19 ಲಸಿಕಾಕರಣದ ಮಾರ್ಗಸೂಚಿಯಂತೆಯೇ ಈ ಲಸಿಕೆಯನ್ನು ನೀಡಲಾಗುವುದು. ಜಿಲ್ಲಾ ಆಸ್ಪತ್ರೆಗಳು ಮತ್ತು ಜಿಲ್ಲಾ ಮಟ್ಟದಲ್ಲಿ ನಿರ್ಣಯಿಸಲಾದ ತಾಲೂಕು ಆಸ್ಪತ್ರೆಗಳಿಗೆ ಮಾತ್ರ ಹಂಚಿಕೆ ಮಾಡಿ ಲಸಿಕಾಕರಣ ಹಮ್ಮಿಕೊಳ್ಳಲಾಗಿದೆ.

## ನಾನು ಇವತ್ತಿಗೂ-ಯಾವತ್ತಿಗೂ ಬಸವಾದಿ ಶರಣರ ಅನುಯಾಯಿ

### ಸಿದ್ದೇಶ್ವರ ಸ್ವಾಮೀಜಿಗಳ ಬದುಕೇ ನಮಗೆ ಆದರ್ಶ: ಮುಖ್ಯಮಂತ್ರಿ ಸಿದ್ದರಾಮಯ್ಯ

ವಿಜಯಪುರ: ಸಿದ್ದೇಶ್ವರ ಸ್ವಾಮೀಜಿಗಳ ಬದುಕೇ ನಮಗೆ ಆದರ್ಶ. ಅವರ ಜೀವನದ ಆಶಯದಂತೆ ಬದುಕುವುದೇ ಅವರಿಗೆ ಸಲ್ಲಿಸುವ ದೊಡ್ಡ ಗೌರವ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಿದ್ದೇಶ್ವರ ಸ್ವಾಮೀಜಿಗಳಿಗೆ ಗುರುನಮನ ಸಲ್ಲಿಸಿದರು.

ವಿಜಯಪುರದ ಜ್ಞಾನಯೋಗಾಶ್ರಮದಲ್ಲಿ ಸಿದ್ದೇಶ್ವರ ಮಹಾ ಸ್ವಾಮೀಜಿಗಳ ಗುರುನಮನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ನಾನು ಇವತ್ತಿಗೂ–ಯಾವತ್ತಿಗೂ ಬಸವಾದಿ ಶರಣರ ಅನುಯಾಯಿ. ಸಿದ್ದೇಶ್ವರ ಸ್ವಾಮೀಜಿ ಬಸವಣ್ಣನವರ ರೀತಿಯಲ್ಲೇ ಜಾತಿ ಮತ್ತು ವರ್ಗ ರಹಿತ ಸಮ ಸಮಾಜಕ್ಕಾಗಿ ಶ್ರಮಿಸಿದವರು ಎಂದು ತಮ್ಮ ಒಳಹನ್ನು ತೆರೆದಿಟ್ಟರು.

ಸಿದ್ದೇಶ್ವರ ಸ್ವಾಮಿಗಳು ಜ್ಞಾನ ಸಂಪಾದಿಸಿದರು. ಆ ಜ್ಞಾನವನ್ನು ಜನಮಾನಸಕ್ಕೆ ಹಂಚಿದರು. ದ್ವೇಷ, ಅಹಂಕಾರದಿಂದ ಬಿಡುಗಡೆ ಹೊಂದಿದ ಅತ್ಯುನ್ನತ ಮನುಷ್ಯತ್ವದ ಸೃಷ್ಟಿಗೆ ಶ್ರಮಿಸಿದವರು. ಇವರ ಬದುಕು ಮತ್ತು ಸಾಧನೆಯನ್ನು ವರ್ಣಿಸಲು ಪದಗಳೇ ಇಲ್ಲ.



ಅಷ್ಟು ಸರಳತೆ ಅವರ ಬದುಕು ಮತ್ತು ವ್ಯಕ್ತಿತ್ವದಲ್ಲಿ ಬೆರೆತಿತ್ತು ಎಂದು ವಿವರಿಸಿದರು.

ಧರ್ಮಾತೀತವಾಗಿ ಪ್ರತಿಯೊಬ್ಬರೂ ಬಾಳಬೇಕು ಎನ್ನುವುದು ಸಿದ್ದೇಶ್ವರ ಸ್ವಾಮಿಗಳ ಆಶಯವಾಗಿತ್ತು. ಸಮಾಜದ ಜಾತಿ ಮೈಲಿಗೆಯನ್ನು ಸೋಕಿಸಿಕೊಳ್ಳದೆ ದೂರ ಉಳಿದಿದ್ದ ದಾರ್ಶನಿಕರು. ಸಮಾಜದಲ್ಲಿ ದೂರದರ್ಶಿತ್ವ ಇಟ್ಟುಕೊಂಡು ಮನುಷ್ಯ ಸಮಾಜವನ್ನು ತಿದ್ದುವ ಗುರಿ ಹೊಂದಿದ್ದ ಕಾರಣಕ್ಕೇ ಇವರು ದಾರ್ಶನಿಕರಾಗಿದ್ದರು ಎಂದು ವಿವರಿಸಿದರು.

ಜಿಲ್ಲೆಯ ಸಚಿವರು ಮತ್ತು ಸಂತರು ಹೇಳಿದ ರೀತಿಯಲ್ಲಿ ಸಿದ್ದೇಶ್ವರ ಶ್ರೀಗಳ ಬದುಕಿನ ಸಂದೇಶ ಮತ್ತು ಆದರ್ಶಗಳನ್ನು ಕಾಪಾಡುವ ಸ್ಮರಣಾರ್ಥ ಕಾರ್ಯ ಮಾಡಲು ಸರ್ಕಾರ ಸಿದ್ದವಿದೆ ಎಂದು ಭರವಸೆ ನೀಡಿದರು. ಸಿದ್ದೇಶ್ವರ ಸ್ವಾಮಿಗಳಿಗೆ ಗುರುನಮನ ಸಲ್ಲಿಸುವುದಕ್ಕಾಗಿಯೇ ನಾನು ಇಲ್ಲಿಗೆ ಬಂದಿದ್ದೇನೆ. ಸಿದ್ದೇಶ್ವರ ಸ್ವಾಮಿಗಳ ಬಗ್ಗೆ ನನಗೆ ವಿಶೇಷ ಗೌರವ ಮತ್ತು ಪ್ರೀತಿ. ಸಿದ್ದಗಿರಿ ಕನ್ನೇರಿಮಠ ಕೊಲ್ಲಾಪುರದ ಅದೃಶ್ಯ ಕಾಡಸಿದ್ದೇಶ್ವರ ಮಹಾ ಸ್ವಾಮೀಜಿಗಳು, ಸಿರಿಗೆರೆಯ ಸುತ್ತೂರು ಮಠದ ಶಿವರಾತ್ರಿ ದೇಶೀಕೇಂದ್ರ ಮಹಾಸ್ವಾಮಿಗಳು, ಶಿವಮೂರ್ತಿ ಶಿವಾಚಾರ್ಯ ಮಹಾ ಶ್ರೀಗಳು, ಜ್ಞಾನಯೋಗಾಶ್ರಮದ ಬಸವಲಿಂಗ ಮಹಾಸ್ವಾಮೀಜಿಗಳು ಮತ್ತು ಹಲವು ಸಿದ್ದ ಸಂತರ ಸಾನ್ನಿಧ್ಯದಲ್ಲಿ ಲಕ್ಷಾಂತರ ಅನುಯಾಯಿಗಳ ಸಮ್ಮುಖದಲ್ಲಿ ಗುರುನಮನ ಕಾರ್ಯಕ್ರಮ ಉದ್ಘಾಟನೆಯಾಯಿತು.

ಜಿಲ್ಲಾ ಉಸ್ತುವಾರಿ ಸಚಿವರಾದ ಎಂ.ಬಿ.ಪಾಟೀಲ್ ಮತ್ತು ಸಚಿವರಾದ ಎಚ್.ಕೆ.ಪಾಟೀಲ್, ಶಿವಾನಂದ ಪಾಟೀಲ್, ಮಾಜಿ ಸಚಿವರಾದ ಶಾಸಕ ವಿನಯ್ ಕುಲಕರ್ಣಿ ಮತ್ತು ಶಾಸಕರಾದ ಸಿ.ಎಸ್.ನಾಡಗೌಡ, ಪ್ರಮುಖರು ಗುರುನಮನಕ್ಕೆ ಸಾಕ್ಷಿಯಾದರು.

## ಬಿಜೆಪಿಗೆ ಟಾಂಗ್ ಕೊಟ್ಟ ಸವದಿ

### ರಾಮ ಮಂದಿರಕ್ಕೆ ನನ್ನ ದುಡ್ಡು ಬೇಕು, ಆಮಂತ್ರಣ ಮಾತ್ರ ಇಲ್ಲವೆಂದ ಲಕ್ಷ್ಮಣ



ಬೆಂಗಳೂರು: ರಾಮ ಜನ್ಮಭೂಮಿಯಲ್ಲಿ ರಾಮ ಮಂದಿರ ನಿರ್ಮಾಣಕ್ಕೆ ಹಣ ಸಂಗ್ರಹ ಮಾಡುವಾಗ ಎಲ್ಲರೂ ನೆನಪಾದರು. ಈಗ ರಾಮ ಮಂದಿರ ಸಿದ್ಧವಾದ ಮೇಲೆ ಯಾರೂ ನೆನಪಿಗೆ ಬರುವುದಿಲ್ಲ. ನಾನು ಕೂಡಾ ರಾಮ ಮಂದಿರನಿರ್ಮಾಣಕ್ಕೆ 10 ಲಕ್ಷ ರೂಪಾಯಿ ಕೊಟ್ಟಿದ್ದೇನೆ. ಸ್ಥಳೀಯ ಆರ್‌ಎಸ್‌ಎಸ್ ನಾಯಕರು ಹಣ ತೆಗೆದುಕೊಂಡು ಹೋಗಿದ್ದರು. ಆದರೆ, ಈಗ ಯಾವುದಕ್ಕೂ ಆಹ್ವಾನ ನೀಡಿಲ್ಲ. ಬಿಜೆಪಿಯಲ್ಲಿ ಇತ್ತೀಚೆಗೆ ಒನ್ ಮ್ಯಾನ್ ಆರ್ಮಿ ರೀತಿ ಆಗಿದೆ ಎಂದು ಮಾಜಿ ಡಿಸಿಎಂ, ಕಾಂಗ್ರೆಸ್ ಮುಖಂಡ ಲಕ್ಷ್ಮಣ ಸವದಿ ಹೇಳಿದರು.

ವಿಕಾಸಸೌಧದಲ್ಲಿ ಮಾತನಾಡಿದ ಲಕ್ಷ್ಮಣ ಸವದಿ, ರಾಮ ಮಂದಿರಕ್ಕಾಗಿ ಬಿಜೆಪಿ ಹಿರಿಯ ನಾಯಕ ಲಾಲ್ ಕೃಷ್ಣ ಆಡ್ವಾಣಿ ಅವರು ರಥಯಾತ್ರೆ ಮಾಡಿದ್ದರು. ಆದರೆ, ಅವರೇ ಈಗ ರಾಮ ಮಂದಿರ ಉದ್ಘಾಟನೆಗೆ ಬರಬಾರದು ಅಂತ ಸಂದೇಶ ಕೊಡೋದು ಎಷ್ಟು ಸರಿ? ರಾಮ ಮಂದಿರ ಆಗೋಕೆ ಆಡ್ವಾಣಿ ಕಾರಣ. ಈಗ ಅವರನ್ನೇ ಬರಬಾರದು ಎಂದು ಹೇಳುವ ಬಿಜೆಪಿಯವರಿಗೆ ಎಲ್ಲಿ ನೈತಿಕತೆ ಇದೆ? ಎಂದು ಪ್ರಶ್ನೆ ಮಾಡಿದರು.

ಆಡ್ವಾಣಿ ಅವರನ್ನೇ ಬರಬೇಡಿ ಎಂದು ಹೇಳಿದ ಮೇಲೆ ಇನ್ನು ಸಿಎಂ ಸಿದ್ದರಾಮಯ್ಯ ಅವರಿಗೆ ಆಹ್ವಾನ ಕೊಡದೇ ಇರುವ ವಿಷಯ ದೊಡ್ಡದು ಅಲ್ಲ. ಬಿಜೆಪಿ ಅವರು ಮೊದಲು ಹಿಂದು ಹಿಂದು ಎಂದು ಹೇಳುತ್ತಾರೆ. ಯಾವಾಗ ಅಧಿಕಾರ ಬರುತ್ತದೋ ಆಗ ನಾವು ಮುಂದು, ನೀವು ಹಿಂದೆ ಅಂತಾರೆ ಎಂದು ಲಕ್ಷ್ಮಣ ಸವದಿ ಟೀಕಿಸಿದರು.

## ಕಾಂಗ್ರೆಸ್ ಸರಕಾರದ ವಿರುದ್ಧ ರಾಜ್ಯಾದ್ಯಂತ ಪ್ರತಿಭಟನೆ: ವಿಜಯೇಂದ್ರ

ಬೆಂಗಳೂರು: ರಾಜ್ಯದ ಕಾಂಗ್ರೆಸ್ ಪಕ್ಷದ್ದು ಹಿಂದೂ ವಿರೋಧಿ ಸರಕಾರ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ತೀವ್ರವಾಗಿ ಆಕ್ಷೇಪಿಸಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ "ಜಗನ್ನಾಥ ಭವನ"ದಲ್ಲಿ ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ತಾನು ಹಿಂದೂ ವಿರೋಧಿ ಎಂಬುದನ್ನು ಈ ಸರಕಾರವು ರಾಜ್ಯ ಮತ್ತು ದೇಶದ ಜನತೆಗೆ ಪದೇಪದೇ ನೆನಪು ಮಾಡುವ ಕೆಲಸ ಮಾಡುತ್ತಿದೆ. ನಿನ್ನೆ ಹುಬ್ಬಳ್ಳಿಯಲ್ಲಿ 31 ವರ್ಷದ ಹಳೆಯ ಕೇಸನ್ನು ರೀ ಓಪನ್ ಮಾಡಿ ಹಿಂದೂ ಕಾರ್ಯಕರ್ತ ಶ್ರೀಕಾಂತ ಪೂಜಾರಿಯವರನ್ನು ಬಂಧಿಸಿದ್ದನ್ನು ಬಿಜೆಪಿ ಬಲವಾಗಿ ಖಂಡಿಸುತ್ತದೆ ಎಂದು ತಿಳಿಸಿದರು.

ಜನವರಿ 22ರಂದು ಅಯೋಧ್ಯೆಯಲ್ಲಿ ಭಗವಾನ್ ಶ್ರೀರಾಮನ ಪ್ರತಿಷ್ಠಾಪನೆ ಆಗುವ ಶುಭ ಸಂದರ್ಭದಲ್ಲಿ ಇಡೀ ರಾಜ್ಯ ಮಾತ್ರವಲ್ಲದೆ ದೇಶದಾದ್ಯಂತ ಕೋಟ್ಯಂತರ ಹಿಂದೂ ಕಾರ್ಯಕರ್ತರು ಸಂತಸದಲ್ಲಿದ್ದಾರೆ; ದೇಶದೆಲ್ಲೆಡೆ ಸಂಭ್ರಮದ ವಾತಾವರಣ ಇದೆ. ಇಂಥ ಸಂದರ್ಭವನ್ನು ಆಯ್ಕೆ ಮಾಡಿಕೊಂಡು ಕೈಗೊಂಡ ಕ್ರಮದ ಮೂಲಕ ತಮ್ಮದು ಹಿಂದೂ ವಿರೋಧಿ ಸರಕಾರ ಎಂದು ದೇಶಕ್ಕೇ ತೋರಿಸಿಕೊಟ್ಟಿದ್ದಾರೆ ಎಂದು ಟೀಕಿಸಿದರು.

ರಾಮನ ಪ್ರತಿಮೆಯನ್ನು ಮೈಸೂರಿನ ಶಿಲ್ಪಿ ಕೆತ್ತನೆ ಮಾಡಿದ್ದಾಗಿ ನಿನ್ನೆ ಸಂಭ್ರಮದಿಂದ ಇದ್ದೆವು. ರಾಜ್ಯದ ಪ್ರತಿಯೊಬ್ಬರು ಹೆಮ್ಮೆ ಪಡುವ ಸಂದರ್ಭದಲ್ಲಿ ಕಾಂಗ್ರೆಸ್ ಸರಕಾರವು, ಹಳೆಯ ಕೇಸನ್ನು ಮತ್ತೆ ಓಪನ್ ಮಾಡಿ ಶ್ರೀಕಾಂತ ಪೂಜಾರಿಯವರನ್ನು ಬಂಧಿಸಿರುವುದು ಖಂಡನೀಯ. ಹಿಂದೂ ವಿರೋಧಿ ಕಾಂಗ್ರೆಸ್ ಸರಕಾರದ ವಿರುದ್ಧ ನಾಳೆ ಇಡೀ ರಾಜ್ಯಾದ್ಯಂತ ಹೋರಾಟ ಮಾಡಲು ಕರೆ ನೀಡುತ್ತಿದ್ದೇವೆ. ಬೆಂಗಳೂರಿನ ಫ್ರೀಡಂ ಪಾರ್ಕ್ ಮಾತ್ರವಲ್ಲದೆ, ಎಲ್ಲ ಜಿಲ್ಲಾ ಕೇಂದ್ರಗಳಲ್ಲಿ ಬೃಹತ್ ಪ್ರತಿಭಟನೆ ನಡೆಸುತ್ತೇವೆ ಎಂದು ಪ್ರಕಟಿಸಿದರು.

ಹಿಂದೂ ವಿರೋಧಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ಧ ಹೋರಾಟ



ನಡೆಯಲಿದೆ. ಪದೇಪದೇ ಅಲ್ಪಸಂಖ್ಯಾತರನ್ನು ಓಲೈಸುವ ರಾಜ್ಯದ ಕಾಂಗ್ರೆಸ್ ಸರಕಾರ, ಬರಗಾಲದ ಸಂದರ್ಭದಲ್ಲಿ ಅಲ್ಪಸಂಖ್ಯಾತರ ತುಷ್ಟೀಕರಣ ಮಾಡುತ್ತಿದೆ. ಇಡೀ ದೇಶದಲ್ಲಿ ಸಂಭ್ರಮ ಇರುವಾಗ ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ಸರಕಾರವು ಹಿಂದೂಗಳ ಭಾವನೆಗೆ ಧಕ್ಕೆ ತರುವ ರೀತಿಯಲ್ಲಿ ನಡೆದುಕೊಂಡಿದೆ. ಇದಕ್ಕೆ ತಕ್ಕ ಶಾಸ್ತಿಯನ್ನು ಮತದಾರರು ಮುಂದಿನ ದಿನಗಳಲ್ಲಿ ಮಾಡುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಅಯೋಧ್ಯೆಯ ಮಂತ್ರಾಕ್ಷತೆಯನ್ನು ರಾಜ್ಯ ಮಾತ್ರವಲ್ಲದೆ, ದೇಶಾದ್ಯಂತ ಪ್ರತಿ ಮನೆಗೂ ತಲುಪಿಸುತ್ತಿದ್ದಾರೆ. ಅಲ್ಲಿ ಕೂಡ ಕಾಂಗ್ರೆಸ್ ಸರಕಾರ ಅಡ್ಡಿ ಮಾಡುತ್ತಿದೆ. ಪುಡಾರಿತನ ಮಾಡುತ್ತಿದೆ ಎಂದು ಗೊತ್ತಾಗಿದೆ. ಇದನ್ನೆಲ್ಲ ಗಮನಿಸಿ ಹೋರಾಟಕ್ಕೆ ಮುಂದಾಗಿದ್ದೇವೆ ಎಂದು ತಿಳಿಸಿದರು.

**ದುಸ್ಸಾಹಸಕ್ಕೆ ಕೈಹಾಕಿದ ಸಿಎಂ.**

ದೇಶವೇ ಸಂಭ್ರಮದಲ್ಲಿ ಇರುವಾಗ ರಾಮಭಕ್ತನನ್ನು ಬಂಧಿಸುವುದಾದರೆ ನಿಮಗೆಷ್ಟು ಧೈರ್ಯ? ಕಾನೂನು– ಸುವ್ಯವಸ್ಥೆಗೆ ಭಂಗ ತರುವ ದುಸ್ಸಾಹಸಕ್ಕೆ ಮುಖ್ಯಮಂತ್ರಿಗಳೇ ಕೈ ಹಾಕುತ್ತಿದ್ದಾರೆ ಎಂದು ವಿಜಯೇಂದ್ರ ಅವರು ಆಕ್ಷೇಪ ಸೂಚಿಸಿದರು.

ರಾಜ್ಯ ಸರಕಾರಕ್ಕೆ ಆದ್ಯತೆ ಯಾವುದು? ಸಂದರ್ಭ ಮತ್ತು ನಿಮ್ಮ ಉದ್ದೇಶ ಏನು? ತಪ್ಪು ಮಾಡಿದ್ದಾರೆ ಅಥವಾ ಇಲ್ಲವೇ ಎಂದು ನೀವು ತೀರ್ಮಾನ ಮಾಡುವುದಲ್ಲ; 31 ವರ್ಷ ಹಳೆಯ ಕೇಸನ್ನು ಈಗಲೇ ರೀ ಓಪನ್ ಮಾಡಬೇಕಿತ್ತೇ ಎಂದು ಅವರು ಪತ್ರಕರ್ತರ ಪ್ರಶ್ನೆಗೆ ಉತ್ತರವಾಗಿ ತಿಳಿಸಿದರು. ಗೃಹ ಸಚಿವರಿಗೆ ಹಳೆಯ ಕೇಸುಗಳ ಬಗ್ಗೆ ಬಹಳ ಕಾಳಜಿ ಇದೆ; ತುಂಬ ಸಂತೋಷ. ಆದರೆ, ಮುಂದೆ ನಡೆಯುವ ಘಟನೆಗೆ ಮುಖ್ಯಮಂತ್ರಿಗಳು ಮತ್ತು ಗೃಹ ಸಚಿವರೇ ಹೊಣೆಗಾರರಾಗುತ್ತಾರೆ ಎಂದು ತಿಳಿಸಿದರು.

ಸಿಎಂ ಕ್ರಮವನ್ನು ಪಕ್ಷಾತೀತವಾಗಿ ಎಲ್ಲರೂ ಖಂಡಿಸುತ್ತಿದ್ದಾರೆ. ರಾಜ್ಯದ ಕಾಂಗ್ರೆಸ್ ಸರಕಾರದ ದಬ್ಬಾಳಿಕೆ ಮತ್ತು ಪ್ರತೀಕಾರ ಮನೋಭಾವವನ್ನು ಖಂಡಿಸಬೇಕಾಗಿದೆ ಎಂದು ಎಚ್ಚರಿಸಿದರು. ಕಾಂಗ್ರೆಸ್ಸಿಗರು ನಾಲಿಗೆ ಮತ್ತು ಮಾತುಗಳು ಅವರ ಸಂಸ್ಕೃತಿಯನ್ನು ತೋರಿಸುತ್ತದೆ. ಅಯೋಧ್ಯೆ ಎಂಬುದು ಒಂದು ಭಾವನಾತ್ಮಕ ಸಂಬಂಧದ ವಿಚಾರ. ಶ್ರೀರಾಮನ ಜನ್ಮಸ್ಥಳವದು. ಕಾಂಗ್ರೆಸ್ಸಿಗರು ಹುಚ್ಚುಚ್ಚು ಹೇಳಿಕೆಗಳಿಗೆ ನಾವು ಉತ್ತರ ಕೊಡಬೇಕಿಲ್ಲ ಎಂದು ಇನ್ನೊಂದು ಪ್ರಶ್ನೆಗೆ ಉತ್ತರಿಸಿದರು.

ಹಿಂದೂಗಳು, ಹಿಂದೂ ಕಾರ್ಯಕರ್ತರ ಭಾವನೆಗೆ ಧಕ್ಕೆ ತರುವುದರಲ್ಲಿ ಇವರು ನಿಸ್ಸೀಮರು. ಹಿಂದೂಗಳಿಗೆ ನೋವು ಕೊಡುವುದರಲ್ಲಿ ಕಾಂಗ್ರೆಸ್ಸಿಗರಿಗೆ ಎಲ್ಲಿಲ್ಲದ ಸಂತೋಷ ಎಂದು ಟೀಕಿಸಿದರು.

## ವರ್ಷದ 1ನೇ ದಿನವೇ ಬಿಎಂಟಿಸಿಗೆ 4.37 ಕೋಟಿ ಆದಾಯ



ಬೆಂಗಳೂರು: ಹೊಸ ವರ್ಷದ ಮೊದಲ ದಿನವೇ ಬಿಎಂಟಿಸಿಗೆ ಭರ್ಜರಿ ಪ್ರತಿಕ್ರಿಯೆ ಸಿಕ್ಕಿದ್ದು, ಜ.1 ರಂದು ಬಿಎಂಟಿಸಿಯಲ್ಲಿ 27,09, 659 ಮಂದಿ ಪ್ರಯಾಣಿಕರು ಸಂಚರಿಸಿದ್ದಾರೆ.

ಹೊಸ ವರ್ಷದ ಆಚರಣೆಯಲ್ಲಿ ಭಾಗಿಯಾಗಿದ್ದವರಿಗೆ ಬಿಎಂಟಿಸಿ ಹೆಚ್ಚುವರಿ ಬಸ್ ಓಡಿಸಿತ್ತು. ಪರಿಣಾಮ ಸೋಮವಾರ ಒಂದೇ ದಿನ ಬಿಎಂಟಿಸಿಗೆ 4,37,70,000 ರೂ. ಆದಾಯ ಬಂದಿದೆ.

ನ್ಯೂ ಇಯರ್ ವೆಲ್‌ಕಮ್ ಗೆ ಬೆಂಗಳೂರಿನ ವಿವಿಧೆಡೆ ಕಾರ್ಯಕ್ರಮ ಆಯೋಜನೆ ಮಾಡಲಾಗಿತ್ತು. ಪ್ರಯಾಣಿಕರ ಅನುಕೂಲಕ್ಕೆ ಮಧ್ಯರಾತ್ರಿ 2 ಗಂಟೆವರೆಗೂ ಬಿಎಂಟಿಸಿ ಹೆಚ್ಚುವರಿ ಬಸ್ ಸೇವೆ ಇತ್ತು. ಎಂ.ಜಿ.ರೋಡ್, ಬ್ರಿಗೇಡ್ ರೋಡ್, ಇಂದಿರಾನಗರ, ಕೋರಮಂಗಲ, ಶಾಂತಿನಗರ, ಯಲಹಂಕ ಸೇರಿ ಹಲವು ನಿಲ್ದಾಣದಿಂದ ಬಸ್ ಸೇವೆಯನ್ನು ಬಿಎಂಟಿಸಿ ಕಲ್ಪಿಸಿತ್ತು. ಪ್ರಯಾಣಿಕರ ಬೇಡಿಕೆಗೆ ಅನುಗುಣವಾಗಿ ಹೆಚ್ಚುವರಿ ಬಸ್‌ಗಳ ಸೇವೆ ನಿಯೋಜಿಸಿದ ಪರಿಣಾಮ ಬಿಎಂಟಿಸಿ ಒಂದೇ ದಿನದಲ್ಲಿ4.37 ಕೋಟಿ ರೂ.ಆದಾಯಗಳಿಸಿದೆ.

## ಹುರಕಡ್ಲಿ ಅಜ್ಜನವರ ಪುಣ್ಯಾಶ್ರಮ ಅಭಿವೃದ್ಧಿಗೆ 5 ಕೋಟಿ ರೂ. ಯೋಜನೆ : ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಭರವಸೆ



ನವಲಗುಂದ: ಇಲ್ಲಿಯ ಹುರಕಡ್ಲಿ ಅಜ್ಜನವರ ಪುಣ್ಯಾಶ್ರಮ ಅಭಿವೃದ್ಧಿಗೆ 5 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಯೋಜನೆ ಸಿದ್ಧಪಡಿಸಿಕೊಟ್ಟರೆ ಮುಖ್ಯಮಂತ್ರಿಗಳಿಂದ ಅನುಮೋದನೆ ಕೊಡಿಸುವುದಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಭರವಸೆ ನೀಡಿದ್ದಾರೆ.

ಮಂಗಳವಾರ ಹುರಕಡ್ಲಿ ಅಜ್ಜನವರ 34ನೇ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಶಾಸಕ ಕೋನರಡ್ಡಿಯವರು ಪುಣ್ಯಾಶ್ರಮ ಅಭಿವೃದ್ಧಿ ಯೋಜನೆ ಸಿದ್ಧಪಡಿಸಿದರೆ ಖಂಡಿತ ನಾವೆಲ್ಲ ಸೇರಿ ಆ ಕಾರ್ಯವನ್ನು ನೆರವೇರಿಸುತ್ತೇವೆ. ಅಜ್ಜನವರು ನನ್ನಿಂದ ಈ ಕಾರ್ಯ ಆಗಬೇಕೆಂದು ಬಯಸಿದರೆ ಅದು ಖಂಡಿತ ನೆರವೇರುತ್ತದೆ. 5 ಕೋಟಿ ರೂ. ಮಿತಿಯಲ್ಲಿ ಖಂಡಿತ ಪುಣ್ಯಾಶ್ರಮ ಕಟ್ಟಡ ನಿರ್ಮಾಣ ಮಾಡಲಾಗುವುದು ಎಂದು ಸಚಿವರು ತಿಳಿಸಿದರು.

ಹುರಕಡ್ಲಿ ಅಜ್ಜನವರು ಸದಾ ದೇವಿಯ ಪಾರಾಯಣ ಮಾಡುತ್ತಿದ್ದರು. ದೇವಿ ಅವರಿಗೆ ಒಲಿದಿದ್ದಳು. ಯಾವ ಭೇದವಿಲ್ಲದೆ ಎಲ್ಲರನ್ನೂ ಒಂದೇ ದೃಷ್ಟಿಯಲ್ಲಿ ಅವರು ನೋಡುತ್ತಿದ್ದರು. ನಮ್ಮ ಕುಟುಂಬದವರು ಈ ಪುಣ್ಯಾಶ್ರಮಕ್ಕೆ ಸದಾ ನಡೆದುಕೊಳ್ಳುತ್ತೇವೆ. ಈ ಪುಣ್ಯ ಭೂಮಿಯಲ್ಲಿರುವ ಇಲ್ಲಿಯ ಜನರು ಭಾಗ್ಯವಂತರು ಎಂದು ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಡಾ.ನೀಲಮ್ಮ ತಾಯಿ ಅಸುಂಡಿ ಸಾನ್ನಿಧ್ಯವಹಿಸಿದ್ದರು. ಶಾಸಕ ಎನ್.ಎಚ್.ಕೋನರಡ್ಡಿ, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಸದಾನಂದ ಡಂಗನವರ್, ಬಿ.ಎಂ. ಹುರಕಡ್ಲಿ, ಎಂ.ಎಸ್.ಶಿರಿಯಣ್ಣವರ್, ಎ.ಎಸ್.ಬಾಗಿ ಮೊದಲಾದವರು ಇದ್ದರು.

## ಕೆಎಸ್ ಡಿಎಲ್: ಮಾರ್ಜಕಗಳ ಮಾರಾಟದಲ್ಲಿ 40 ವರ್ಷಗಳಲ್ಲೇ ದಾಖಲೆ ವಹಿವಾಟು

ಬೆಂಗಳೂರು: ಸರಕಾರಿ ಸ್ವಾಮ್ಯದ ಕರ್ನಾಟಕ ಸಾಬೂನು ಮತ್ತು ಮಾರ್ಜಕಗಳ ನಿಯಮಿತ (ಕೆಎಸ್ ಡಿಎಲ್) 2023ರ ಡಿಸೆಂಬರ್ ತಿಂಗಳೊಂದರಲ್ಲೇ 123.42 ಕೋಟಿ ರೂ. ಮೊತ್ತದ ಮಾರ್ಜಕಗಳನ್ನು (ಡಿಟರ್ಜೆಂಟ್ಸ್) ಮಾರಾಟ ಮಾಡಿದ್ದು, ಕಳೆದ 40 ವರ್ಷಗಳ ವಹಿವಾಟಿನ ಇತಿಹಾಸದಲ್ಲಿ ಇದೊಂದು ದಾಖಲೆಯಾಗಿದೆ ಎಂದು ಸಂಸ್ಥೆ ಅಧ್ಯಕ್ಷರೂ ಆದ ಭಾರೀ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಹೇಳಿದ್ದಾರೆ.

ಈ ಬಗ್ಗೆ ಮಂಗಳವಾರ ಪತ್ರಿಕಾ ಪ್ರಕಟಣೆ ನೀಡಿರುವ ಅವರು, 'ಕಳೆದ ತಿಂಗಳು ಕೆಎಸ್ಡಿಎಲ್ 852 ಟನ್ ಮಾರ್ಜಕಗಳನ್ನು ತಯಾರಿಸಿ, ಮಾರುಕಟ್ಟೆಗೆ ಬಿಡುಗಡೆ ಮಾಡುವ ಸಾರ್ವಕಾಲಿಕ ದಾಖಲೆ ಸೃಷ್ಟಿಸಿದೆ. 2022ರ ಸೆಪ್ಟೆಂಬರ್



ತಿಂಗಳಲ್ಲಿ 775 ಟನ್ ಮಾರ್ಜಕಗಳನ್ನು ಉತ್ಪಾದಿಸಿದ್ದು ಇದುವರೆಗಿನ ದಾಖಲೆಯಾಗಿತ್ತು. ಅದನ್ನೀಗ ಮುರಿದು, ವಹಿವಾಟಿನಲ್ಲೂ ವಿಕ್ರಮ ಸಾಧಿಸಲಾಗಿದೆ' ಎಂದಿದ್ದಾರೆ.

ಕೆಎಸ್ಡಿಎಲ್ ನಲ್ಲಿ ಇದುವರೆಗೆ ಮಾರ್ಜಕಗಳ ಉತ್ಪಾದನಾ ವಿಭಾಗದಲ್ಲಿ ಒಂದು ಪಾಳಿಯ ಕೆಲಸದ ವ್ಯವಸ್ಥೆ ಇತ್ತು. ಅದನ್ನೀಗ ಮೂರು ಪಾಳಿಗಳಿಗೆ ವಿಸ್ತರಿಸಲಾಗಿದೆ. ಜೊತೆಗೆ, ಈವರೆಗೆ ಸಂಸ್ಥೆಯಲ್ಲಿ ಮಾರ್ಜಕಗಳ ತಯಾರಿಕೆಗೆ ಕೇವಲ ಒಂದು ಯಂತ್ರ ಮಾತ್ರವಿತ್ತು.

ಸರಕಾರಿ ಉದ್ದಿಮೆಗಳು ಖಾಸಗಿ ವಲಯದಂತೆಯೇ ಲಾಭ ಗಳಿಸಬೇಕೆಂಬ ಉದ್ದೇಶದಿಂದ ಈಗ ಈ ವಿಭಾಗದಲ್ಲಿ ಮೂರು ಯಂತ್ರಗಳನ್ನು ಅಳವಡಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಸಂಸ್ಥೆಯು ಮೊದಲಿನಿಂದಲೂ ಸಾಬೂನು ತಯಾರಿಕೆಗೆ ಹೆಸರುವಾಸಿಯಾಗಿದ್ದು, ಮಾರುಕಟ್ಟೆ ಕೂಡ ಅದರ ಸುತ್ತಲೇ ಕೇಂದ್ರೀಕೃತವಾಗಿತ್ತು. ಇತ್ತೀಚೆಗೆ ಮಾರ್ಜಕಗಳ ಮಾರಾಟಕ್ಕೂ ಹೆಚ್ಚಿನ ಗಮನ ಹರಿಸುವ ತೀರ್ಮಾನ ಕೈಗೊಳ್ಳಲಾಗಿತ್ತು. ಅದು ಈಗ ಫಲ ನೀಡಿದೆ.

ಮುಂದಿನ ದಿನಗಳಲ್ಲಿ ಖಾಸಗಿ ಕಂಪನಿಗಳ ಮಾರ್ಜಕಗಳಿಗೆ ಸಡ್ಡು ಹೊಡೆಯುವ ರೀತಿಯಲ್ಲಿ ಮಾರುಕಟ್ಟೆ ಜಾಲವನ್ನು ಅಖಿಲ ಭಾರತ ಮಟ್ಟದಲ್ಲಿ ವಿಸ್ತರಿಸಲಾಗುವುದು ಎಂದು ಅವರು ಭರವಸೆ ವ್ಯಕ್ತಪಡಿಸಿದ್ದಾರೆ.

ಹೋದ ವರ್ಷಕ್ಕೆ ಹೋಲಿಸಿದರೆ ಪ್ರಸ್ತುತ 2023–24ನೇ ಹಣಕಾಸು ವರ್ಷದಲ್ಲಿ ಡಿಸೆಂಬರ್ ಅಂತ್ಯದವರೆಗೆ ಸಾಬೂನು, ಮಾರ್ಜಕ ಮತ್ತು ಕಾಸ್ಮೆಟಿಕ್ಸ್ ಉತ್ಪಾದನೆ ನಿಗದಿತ ಗುರಿಗಿಂತ ಹೆಚ್ಚಾಗಿದೆ. ಸಂಸ್ಥೆಯು ಹೋದ ಸಾಲಿನಲ್ಲಿ 118 ಕೋಟಿ ರೂ. ಲಾಭ ಗಳಿಸಿತ್ತು. ಈ ಹಣಕಾಸು ಸಾಲಿನ ಮೊದಲ ಒಂಬತ್ತು ತಿಂಗಳಲ್ಲಿ ಸಂಸ್ಥೆಯು 1,171 ಕೋಟಿ ರೂ. ಮೊತ್ತದಷ್ಟು ವಹಿವಾಟು ನಡೆಸಿದೆ.

ಈ ವರ್ಷಕ್ಕೆ ಒಟ್ಟು 1,404 ಕೋಟಿ ರೂ. ವಹಿವಾಟು ನಿಗದಿ ಪಡಿಸಲಾಗಿದ್ದು, ಇದನ್ನು ಮೀರುವುದರಲ್ಲಿ ಅನುಮಾನವಿಲ್ಲ ಎಂದು ಎಂ ಬಿ ಪಾಟೀಲ ಹೇಳಿದ್ದಾರೆ.

## ಲಂಚ ಸ್ವೀಕರಿಸುವ ವೇಳೆ ಲೋಕಾಯುಕ್ತ ಬಲೆಗೆ ಬಿದ್ದ ನಗರಸಭೆ ಸದಸ್ಯ

ಚಿತ್ರದುರ್ಗ: ನಗರಸಭಾ ಸದಸ್ಯರೊಬ್ಬರು ಲಂಚ ಸ್ವೀಕರಿಸುವ ವೇಳೆ ಲೋಕಾಯುಕ್ತ ಬಲೆಗೆ ಬಿದ್ದ ಘಟನೆ ಚಿತ್ರದುರ್ಗ ಜಿಲ್ಲೆಯಲ್ಲಿ ನಡೆದಿದೆ. ಜಿಲ್ಲೆಯ ಹಿರಿಯೂರು ನಗರಸಭೆ ಪಕ್ಷೇತರ ಸದಸ್ಯ ಎಂ.ಡಿ.ಸಣ್ಣಪ್ಪ ಲೋಕಾಯುಕ್ತ ಬಲೆಗೆ ಬಿದ್ದ ವ್ಯಕ್ತಿಯಾಗಿದ್ದು, ಜೊತೆಗೆ ನಗರಸಭೆ (ಎಸ್‌ಡಿಸಿ) ಕ್ಲರ್ಕ್ ರಮೇಶ್ ಕೂಡ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ.

ನಗರಸಭೆ ಸದಸ್ಯ ಎಂಡಿ ಸಣ್ಣಪ್ಪ ಅವರು ಇ–ಸ್ವತ್ತು ಮಾಡಿಸಿಕೊಡಲು ವ್ಯಕ್ತಿಯೊಬ್ಬರ ಬಳಿ 5 ಸಾವಿರ ರೂಪಾಯಿ ಲಂಚ ಕೇಳಿದ್ದರು. ಇವರು ಲಂಚ ಸ್ವೀಕಾರದ ವೇಳೆ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ ಎಂದು ತಿಳಿದುಬಂದಿದೆ. ಪಿ.ನಟರಾಜು ಮನೆಯ ಇ–ಸ್ವತ್ತಿಗಾಗಿ ಲಂಚಕ್ಕೆ ಬೇಡಿಕೆ ಇಟ್ಟಿದ್ದರು. ಲೋಕಾಯುಕ್ತ ಎಸ್ಪಿ ವಾಸುದೇವರಾಮ್, ಡಿವೈಎಸ್ಪಿ ಮೃತ್ಯುಂಜಯ ನೇತೃತ್ವದಲ್ಲಿ ದಾಳಿ ನಡೆಸಿದ್ದರು. ಹಿರಿಯೂರು ಬಸ್ ನಿಲ್ದಾಣದ ಬಳಿ ನಗರಸಭೆ ಸದಸ್ಯ ಸಣ್ಣಪ್ಪ, ಕ್ಲರ್ಕ್ ರಮೇಶ್ ಲಂಚ ಸ್ವೀಕಾರ ಮಾಡುತ್ತಿದ್ದಾಗ ಲೋಕಾಯುಕ್ತ ಬಲೆಗೆ ಬಿದ್ದಿರುವ ಘಟನೆ ನಡೆದಿದೆ.

## ಗುತ್ತಿಗೆ ನೌಕರರಿಗೂ ಗ್ರಾಚ್ಯುಟಿ ಅನ್ವಯ: ಹೈಕೋರ್ಟ್ ಮಹತ್ವದ ಆದೇಶ



ಬೆಂಗಳೂರು: ಗುತ್ತಿಗೆ ನೌಕರರಿಗೂ ಗ್ರಾಚ್ಯುಟಿ ಅನ್ವಯವಾಗಲಿದೆ ಎಂದು ಹೈಕೋರ್ಟ್ ಆದೇಶ ನೀಡಿದೆ. ಕಾಯಂ ನೌಕರ, ಗುತ್ತಿಗೆ ನೌಕರರ ನಡುವೆ ತಾರತಮ್ಯ ಮಾಡುವಂತಿಲ್ಲ ಎಂದು ಸ್ಪಷ್ಟನೆ ನೀಡಿದೆ. ಸರ್ಕಾರಿ ಸೇವೆ ಕಾಯಂ ಆಗುವ ಮೊದಲು ನೌಕರ ದಿನದ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸಿದ್ದಲ್ಲಿ ಗುತ್ತಿಗೆ ಅವಧಿಗೂ ಸರ್ಕಾರ ಗ್ರಾಚ್ಯುಟಿ ಪಾವತಿಸಬೇಕು ಎಂದು ಹೈಕೋರ್ಟ್ ಆದೇಶ ನೀಡಿದೆ.

ಮಂಡ್ಯ ಜಿಲ್ಲೆ ನಾಗಮಂಗಲ ತಾಲೂಕಿನ ನಿವೃತ್ತ ಸರ್ಕಾರಿ ಶಾಲೆ ಶಿಕ್ಷಕ ಬಸವೇಗೌಡ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ಹೈಕೋರ್ಟ್ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಪೀಠ ಈ ಆದೇಶ ನೀಡಿದೆ. ಗ್ರಾಚ್ಯುಟಿ ಪಾವತಿ ಕಾಯ್ದೆ–1972ರ ನಿಯಮಗಳ ಪ್ರಕಾರ ಗ್ರಾಚ್ಯುಟಿ ವಿಚಾರದಲ್ಲಿ ಕಾಯಂ ಸರ್ಕಾರಿ ನೌಕರ ಹಾಗೂ ಗುತ್ತಿಗೆ ನೌಕರರ ನಡುವೆ ಯಾವುದೇ ವ್ಯತ್ಯಾಸ ಆಗುವುದಿಲ್ಲ. ಹೀಗಾಗಿ 75 ವರ್ಷದ ನಿವೃತ್ತ ಸರ್ಕಾರಿ ನೌಕರರಾಗಿರುವ ಅರ್ಜಿದಾರರಿಗೆ ಅವರು ದಿನ ಗುತ್ತಿಗೆ ನೌಕರರಾಗಿ ದುಡಿದ 10 ವರ್ಷಗಳ ಅವಧಿಗೆ ಗ್ರಾಚ್ಯುಟಿ ಮೊತ್ತವನ್ನು 4 ವಾರಗಳಲ್ಲಿ ನೀಡಬೇಕು. 4 ವಾರದಲ್ಲಿ ಹಣ ಪಾವತಿಸಲು ಆಗದಿದ್ದರೆ ವಿಳಂಬ ಮಾಡಿದ ಪ್ರತಿದಿನಕ್ಕೆ ಒಂದು ಸಾವಿರ ರೂ. ದಂಡ ಪಾವತಿಸಬೇಕು ಎಂದು ಸರ್ಕಾರಕ್ಕೆ ನಿರ್ದೇಶನ ನೀಡಿದೆ.

## ಜನ ಔಷಧಿ ಕೇಂದ್ರದ ಒಳಗೆ ನುಗ್ಗಿದ ಆ್ಯಂಬುಲೆನ್ಸ್




ಉಡುಪಿ: ಚಾಲಕನ ನಿಯಂತ್ರಣ ತಪ್ಪಿ ಆ್ಯಂಬುಲೆನ್ಸ್‌ವೊಂದುಜನ ಔಷಧಿ ಕೇಂದ್ರದ ಒಳಗೆ ನುಗ್ಗಿದ ಘಟನೆ ಉಡುಪಿ ತಾಲೂಕಿನ ಲಕ್ಷ್ಮೀಂದ್ರ ನಗರದಲ್ಲಿ ನಡೆದಿದೆ.

ನಸುಕಿನ ಜಾವ ಘಟನೆ ನಡೆದಿದೆ. ಜನೌಔಷಧಿ ಕೇಂದ್ರ ಮುಚ್ಚಿದ್ದ ಹಿನ್ನೆಲೆಯಲ್ಲಿ ಅನಾಹುತ ತಪ್ಪಿದೆ. ಘಟನೆಯಲ್ಲಿ ಆಂಬುಲೆನ್ಸ್ ಚಾಲಕನಿಗೆ ಗಂಭೀರ ಗಾಯವಾಗಿದೆ. ಮಣಿಪಾಲ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಜ.17, 18 ರಂದು ಸಂಗೊಳ್ಳಿ ಉತ್ಸವ: ಶಾಸಕ ಮಹಾಂತೇಶ ಕೌಜಲಗಿ

ಬೆಳಗಾವಿ: ಈ ಬಾರಿ ಸಂಗೊಳ್ಳಿ ಉತ್ಸವವನ್ನು ಜ.17 ಹಾಗೂ 18 ರಂದು ಅದ್ದೂರಿಯಾಗಿ ಆಚರಿಸಲು ನಿರ್ಧರಿಸಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಭಾಗವಹಿಸಲಿದ್ದಾರೆ ಎಂದು ಶಾಸಕ ಮಹಾಂತೇಶ ಕೌಜಲಗಿ ತಿಳಿಸಿದರು.

ಸಂಗೊಳ್ಳಿ ರಾಯಣ್ಣ ಸ್ಮಾರಕ ಕಲ್ಯಾಣ ಮಂಟಪದಲ್ಲಿ ಇಂದು ನಡೆದ ಸಂಗೊಳ್ಳಿ ರಾಯಣ್ಣ ಉತ್ಸವದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಈ ಬಾರಿಯ ಉತ್ಸವಕ್ಕೆ ಸರಕಾರ ಒಂದು ಕೋಟಿ ರೂಪಾಯಿ ಬಿಡುಗಡೆ ಮಾಡಲಿದೆ. ಉತ್ಸವದ ಸಂದರ್ಭದಲ್ಲಿ ರಾಕ್ ಗಾರ್ಡನ್, ರಸ್ತೆ ಸೇತುವೆ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೂಡ ಉದ್ಘಾಟಿಸಲಿದ್ದಾರೆ ಎಂದು ತಿಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಂಗೊಳ್ಳಿ ಸೈನಿಕ ಶಾಲೆ, ರಾಕ್ ಗಾರ್ಡನ್ ಸೇರಿದಂತೆ ಅನೇಕ ಕೊಡುಗೆಗಳನ್ನು ನೀಡಿರುತ್ತಾರೆ. ಉತ್ಸವದಲ್ಲಿ ಅವರು ಭಾಗವಹಿಸಲಿದ್ದಾರೆ.ಆದ್ದರಿಂದ ಈ ಬಾರಿ ಅಚ್ಚುಕಟ್ಟಾಗಿ ಉತ್ಸವ ಆಚರಿಸಲು ಎಲ್ಲರೂ ಸಹಕರಿಸಬೇಕು ಎಂದು ಮಹಾಂತೇಶ ಕೌಜಲಗಿ ಹೇಳಿದರು. ಅದ್ದೂರಿ ಉತ್ಸವ ಆಚರಣೆ: ಬೈಲಹೊಂಗಲ ಶಾಸಕರಾದ ಮಹಾಂತೇಶ ಕೌಜಲಗಿ ಅವರ ಪ್ರಯತ್ನದ ಫಲವಾಗಿ ಈ ಬಾರಿ ಒಂದು ಕೋಟಿ ರೂಪಾಯಿ ಅನುದಾನ ಲಭಿಸಿದೆ.

ಇದರಿಂದ ಹೊಸ ಹೊಸ ಕ್ರೀಡೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು




ಸಾಧ್ಯವಾಗಲಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಹೇಳಿದರು. ಪ್ರತಿವರ್ಷದಂತೆ ಅದ್ದೂರಿಯಾಗಿ ಮತ್ತು ಅಚ್ಚುಕಟ್ಟಾಗಿ ಉತ್ಸವವನ್ನು ಆಚರಿಸಲಾಗುವುದು.

ಉತ್ಸವದ ಯಶಸ್ಸಿಗಾಗಿ ಒಟ್ಟಾರೆ 13 ಉಪ ಸಮಿತಿಗಳನ್ನು ರಚಿಸಲಾಗುವುದು. ಸಮಿತಿಯಲ್ಲಿ ಹೆಸರು ನೋಂದಾಯಿಸಲು ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಅವಕಾಶ ಕಲ್ಪಿಸಲಾಗುವುದು ಎಂದು ತಿಳಿಸಿದರು. ಸಾನ್ನಿಧ್ಯ ವಹಿಸಿ ಮಾತನಾಡಿದ ಗುರುಲಿಂಗ ಶಿವಾಚಾರ್ಯ, ಕಿತ್ತೂರು ಚನ್ನಮ್ಮ, ಸಂಗೊಳ್ಳಿ ರಾಯಣ್ಣ, ಅಮಟೂರು ಬಾಳಪ್ಪ ಸೇರಿದಂತೆ ಎಲ್ಲರೂ ಜಾತ್ಯಾತೀತವಾಗಿ ಗುರುತಿಸಲ್ಪಡುವಂತವರು.ಈ ಬಾರಿ ಉತ್ಸವಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆಗಮಿಸುತ್ತಿರುವುದು ಸಂತಸಕರ ಸಂಗತಿ ಎಂದರು.

ಮುಂಬರುವ ವರ್ಷಗಳಲ್ಲಿ ಜನವರಿ 12 ಹಾಗೂ 13 ರಂದೇ ನಿಯಮಿತವಾಗಿ ಸಂಗೊಳ್ಳಿ ಉತ್ಸವವನ್ನು ಆಚರಿಸಬೇಕು ಎಂದು ಸಲಹೆ ನೀಡಿದರು.

ಉತ್ಸವದ ಸಂದರ್ಭದಲ್ಲಿ ಸಂಗೊಳ್ಳಿ ರಾಯಣ್ಣನ ಕುರಿತು ಏರ್ಪಡಿಸಲಾಗುವ ವಿಚಾರಸಂಕಿರಣದಲ್ಲಿ ಯುವ ಸಮುದಾಯ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಶಿವಾಚಾರ್ಯರು ಕರೆ ನೀಡಿದರು.

ಮುಖ್ಯಮಂತ್ರಿಗಳಿಗೆ ಉತ್ಸವದಲ್ಲಿ ಪೌರಸನ್ಮಾನ ನೀಡಬೇಕು; ಹೆಚ್ಚುವರಿ ಬಸ್ ಸೌಲಭ್ಯ ಕಲ್ಪಿಸಬೇಕು; ಉತ್ತಮ ಕಲಾತಂಡಗಳನ್ನು ಆಹ್ವಾನಿಸಬೇಕು ಹಾಗೂ ಕುಸ್ತಿ ಸ್ಪರ್ಧೆ ಆಯೋಜಿಸಬೇಕು ಎಂದು ಸಾರ್ವಜನಿಕರು ಸಲಹೆಗಳನ್ನು ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಭೀಮಾಶಂಕರ್ ಗುಳೇದ, ಉಪ ವಿಭಾಗಾಧಿಕಾರಿ ಪ್ರಭಾವತಿ ಫಕೀರಪುರ, ಸಂಗೊಳ್ಳಿ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ಮಲ್ಲೇಶ ಹೊರಪೇಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕರಾದ ವಿದ್ಯಾವತಿ ಭಜಂತ್ರಿ, ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆಯ ಜಂಟಿ ನಿರ್ದೇಶಕರಾದ ಶ್ರೀಶೈಲ್ ಕಂಕಣವಾಡಿ, ಯುವಜನ ಸೇವಾ ಹಾಗೂ ಕ್ರೀಡಾ ಇಲಾಖೆಯ ಉಪ ನಿರ್ದೇಶಕರಾದ ಶ್ರೀನಿವಾಸ್, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರಾದ ಸತ್ಯನಾರಾಯಣ ಭಟ್ ಮತ್ತಿತರರು ಉಪಸ್ಥಿತರಿದ್ದರು.

## ವೈದ್ಯಕೀಯ ಇಲಾಖಾ ಅಧಿಕಾರಿಗಳ ಜೊತೆ ಮಹತ್ವದ ಸಭೆ

# ರೂಪಾಂತರ ಜೆ.ಎನ್–1 ಸೋಂಕಿನ ಬಗ್ಗೆ ಆತಂಕ ಬೇಡ ಎಂದ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣ್ ಪ್ರಕಾಶ್ ಪಾಟೀಲ್

ಬೆಂಗಳೂರು: ರಾಜ್ಯದಲ್ಲಿ ಹೊಸದಾಗಿ ಕಾಣಿಸಿಕೊಂಡಿರುವ ರೂಪಾಂತರ ಜೆ.ಎನ್–1 ಸೋಂಕು ಕಾಣಿಸಿಕೊಂಡಿದ್ದರೂ ಜನತೆ ಅನಗತ್ಯವಾಗಿ ಆತಂಕಕ್ಕೇ ಒಳಪಡದೆ, ಕೆಲವು ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣ್ ಪ್ರಕಾಶ್ ಪಾಟೀಲ್ ಸಲಹೆ ಮಾಡಿದ್ದಾರೆ.



ಮಂಗಳವಾರ ಬೆಂಗಳೂರಿನ ವಿಕಾಸಸೌಧದಲ್ಲಿ ವೈದ್ಯಕೀಯ ಶಿಕ್ಷಣ ಇಲಾಖಾ ವ್ಯಾಪ್ತಿಗೆ ಒಳಪಡುವ ವಿವಿಧ ಆಸ್ಪತ್ರೆಗಳ ಮುಖ್ಯಸ್ಥರು, ಕೋವಿಡ್ ತಾಂತ್ರಿಕ ಸಲಹಾ ಸಮಿತಿ ಅಧ್ಯಕ್ಷರು, ಸದಸ್ಯರ ಜೊತೆ ನಡೆಸಿದ ಅವರು, ಪ್ರಸ್ತುತ ರಾಜ್ಯದಲ್ಲಿ ಕೋವಿಡ್ –19 ನಿಯಂತ್ರಣ ಹಾಗೂ ಪೂರ್ವ ಸಿದ್ದತೆಗಳ ಕುರಿತು ಮಾಹಿತಿ ಪಡೆದುಕೊಂಡರು.

ರೂಪಾಂತರ ಜೆ.ಎನ್–1 ಸೋಂಕು ಕಾಣಿಸಿಕೊಂಡಿದ್ದರೂ ಇದು ಮನುಷ್ಯರ ಆರೋಗ್ಯದ ಮೇಲೆ ಹೆಚ್ಚಿನ ಪರಿಣಾಮ ಬೀರುವ ಸಾಧ್ಯತೆ ಇಲ್ಲ ಎಂದು ವಿಶ್ವ ಆರೋಗ್ಯ ಸಂಸ್ಥೆ, ಹಾಗೂ ತಜ್ಞರೇ ಹೇಳಿದ್ದಾರೆ.ಆದರೂ ಇದರ ಬಗ್ಗೆ ಮೈ ಮರೆಯದೆ, ಕೆಲವು ಮುಂಜಾಗ್ರತ ಕ್ರಮಗಳನ್ನು ತೆಗೆದುಕೊಳ್ಳುವ ಕುರಿತು ಜನಜಾಗೃತಿ ಮೂಡಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವ ಡಾ. ಶರಣ್ ಪ್ರಕಾಶ್ ಪಾಟೀಲ್ ಪ್ರಸ್ತುತ ಕೇಂದ್ರ ಸರ್ಕಾರ ರಾಜ್ಯಕ್ಕೆ 30 ಸಾವಿರ ಕೋವಿಡ್ ವ್ಯಾಕ್ಸಿನ್ ಬಂದಿದೆ. ಇದರ ಕೊರತೆಯಾಗದಂತೆ ಎಲ್ಲ ಮುಂಜಾಗ್ರತಾ ಕ್ರಮವನ್ನು ತೆಗೆದುಕೊಂಡಿದ್ದೇವೆ ಎಂದು ತಿಳಿಸಿದರು.

ರಾಜ್ಯದಲ್ಲಿ ಪ್ರತಿಯೊಬ್ಬ ಅರ್ಹರಿಗೆ ಕೋವಿಡ್ ಲಸಿಕೆ ನೀಡುವ ಅಗತ್ಯವಿಲ್ಲ 60 ವರ್ಷ ಹಾಗೂ ದೀರ್ಘವ್ಯಾಧಿಯಿಂದ ಬಳಲುತ್ತಿರುವವರು ಬುಧವಾರದಿಂದಲೇ ಜಿಲ್ಲಾಸ್ಪತ್ರೆಗಳಲ್ಲಿ ಕೋವಿಡ್ ವಾಕ್ಸಿನ್ ತೆಗೆದುಕೊಳ್ಳಬಹುದು. ಒಂದು ಮತ್ತು 2ನೇ ಕೋವಿಡ್ ಸಂದರ್ಭದಲ್ಲಿ ಯಾವ ಲಸಿಕೆಯನ್ನು ನೀಡಲಾಗಿತ್ತೋ ಅದೇ ಲಸಿಕೆಯನ್ನು ನೀಡಲಿದ್ದೇವೆ. ಹೊಸ ಲಸಿಕೆ ನೀಡುವಂತೆ ಕೇಂದ್ರ ಸರ್ಕಾರದಿಂದ ನಮಗೆ ಯಾವುದೇ ನಿರ್ದೇಶನ ಬಂದಿಲ್ಲ ಎಂದು ಪ್ರಶ್ನೆಯೊಂದಕ್ಕೆ ಸ್ಪಷ್ಟನೆ ನೀಡಿದರು.

ಪ್ರಸ್ತುತ ರಾಜ್ಯದಲ್ಲಿ ಕಾಣಿಸಿಕೊಂಡಿರುವ ಜೆಎನ್–1 ರೂಪಾಂತರ ಸೋಂಕು ಬಹುಬೇಗನೆ ಹರಡುವ ಸಾಧ್ಯತೆ ಇದೆ. ಮುಂದಿನ ದಿನಗಳಲ್ಲಿ ಇದು ಇನ್ನಷ್ಟು ಹರಡಬಹುದೆಂದು ತಜ್ಞರು ಹೇಳಿದ್ದಾರೆ. ಒಂದು ವೇಳೆ ಹಬ್ಬಿದರೂ ಮನುಷ್ಯನ ಆರೋಗ್ಯದ ಮೇಲೆ ಪರಿಣಾಮ ಬೀರುವ ಸಾಧ್ಯತೆಗಳು ಕಡಿಮೆ ಎಂಬ ಮಾಹಿತಿ ಇದೆ. ಸಾರ್ವಜನಿಕರು ಅನಗತ್ಯವಾಗಿ ಆತಂಕ ಪಡಬಾರದೆಂದು ಮನವಿ ಮಾಡಿದರು.

ಜನದಟ್ಟಣೆ ಮತ್ತಿತರ ಕಡೆ ಅಗತ್ಯ ಇರುವವರು ಮುಂಜಾಗ್ರತಾ ಕ್ರಮವಾಗಿ ಮಾಸ್ಕ್‌ಗಳನ್ನು ಧರಿಸುವುದು ಉತ್ತಮ. ಆದರೆ ಕಡ್ಡಾಯವಾಗಿ ಮಾಸ್ಕ್‌ಗಳನ್ನು ಧರಿಸಲೇಬೇಕೆಂಬ ಆದೇಶವನ್ನು ಹೊರಡಿಸುವುದಿಲ್ಲ. ಹಾಗಂತ ಜನರು ಮೈ ಮರೆಬಾರದೆಂದು ಸಲಹೆ ಮಾಡಿದರು.

ಆಕ್ಸಿಜನ್ ಬೆಡ್, ಐಸಿಯು, ವೆಂಟಿಲೇಟರ್, ಔಷಧಗಳು, ಸೇರಿದಂತೆ ಲಭ್ಯವಿರುವ ಉಪಕರಣಗಳ ಬಗ್ಗೆ ಮಾಹಿತಿ ಪಡೆಯಲಾಗಿದೆ ಎಂದರು.

ಕೆಲವು ಆಸ್ಪತ್ರೆಗಳಲ್ಲಿ ಸಿಬ್ಬಂದಿ ನೇಮಕ, ಉಪಕರಣಗಳ ಖರೀದಿಸುವ ಬಗ್ಗೆ ನನ್ನ ಗಮನಕ್ಕೆ ತಂದಿದ್ದಾರೆ. ಹಣಕಾಸು ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುತ್ತೇವೆ. ಕೋವಿಡ್ ಸಂಬಂಧ ಔಷಧಗಳನ್ನು ಖರೀದಿಸಲು ಹಣಕಾಸಿನ ಕೊರತೆ ಇಲ್ಲ ಎಂದು ಸಚಿವರು ಸ್ಪಷ್ಟನೆ ನೀಡಿದರು.

ರಾಜ್ಯದಲ್ಲಿ ಇತ್ತೀಚೆಗೆ 10 ಮಂದಿ ಸಾವನ್ನಪ್ಪಿದ್ದರು. ಇದು ಕೋವಿಡ್ ಕಾರಣದಿಂದಾಗಿ ಮೃತಪಟ್ಟಿಲ್ಲ .ಅವರು ವಿವಿಧ ವ್ಯಾಧಿಗಳಿಂದ ಬಳಲುತ್ತಿದ್ದರು. ಹೀಗಾಗಿ ಸಾವನ್ನಪ್ಪಿದ್ದಾರೆ ಎಂದು ಸಚಿವ ಶರಣಪ್ರಕಾಶ್ ಪಾಟೀಲ್ ಸ್ಪಷ್ಟಪಡಿಸಿದರು.

ಮೃತಪಟ್ಟ 10 ಮಂದಿಯಲ್ಲಿ 9 ಮಂದಿ ಬೇರೆ ಬೇರೆ ಅಂದರೆ ಹೃದಯ ಸಂಬಂಧಿ, ಕಿಡ್ನಿ ಹೀಗೆ ಹಲವಾರ ಕಾಯಿಲೆಗಳಿಂದ ಬಳಲುತ್ತಿದ್ದರು. ಇವರ ಸಾವಿಗೂ ಕೋವಿಡ್ಗೂ ಸಂಬಂಧವೇ ಇಲ್ಲ ಎಂದು ಹೇಳಿದರು.

ಅವರಿಗೆ ಸೋಂಕಿನ ಜೊತೆಗೆ ಇತರ ಬೇರೆ ಬೇರೆ ಆರೋಗ್ಯದ ಸಮಸ್ಯೆಗಳಿದ್ದವು. ಮೃತಪಟ್ಟವರಲ್ಲಿ ಮಂಗಳೂರಿನ ವ್ಯಕ್ತಿಯೊಬ್ಬರು ಕೋವಿಡ್ ಲಸಿಕೆ ತೆಗೆದುಕೊಂಡಿರಲಿಲ್ಲ. ಮದ್ಯಪಾನದ ವ್ಯಸನಕ್ಕೆ ತುತ್ತಾಗಿದ್ದರು ಎಂದು ತಿಳಿಸಿದರು.

**ಮುಖ್ಯಾಂಶಗಳು**

*ಪ್ರತಿ ಜಿಲ್ಲಾ ಆಸ್ಪತ್ರೆಗಳಲ್ಲಿ ಕೋವಿಡ್ ರೋಗಿಗಳಿಗೆ 50 ಬೆಡ್ಗಳನ್ನು ಮೀಸಲಿಡಬೇಕೆಂದು ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

*ವೈದ್ಯಕೀಯ ಕಾಲೇಜಿನಲ್ಲಿ 18,141 ಸರ್ಕಾರಿ ಆಸ್ಪತ್ರೆಗಳಲ್ಲಿ 10 ಸಾವಿರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಬರುವ ಆಸ್ಪತ್ರೆಗಳಲ್ಲಿ 11,500 ಹಾಸಿಗೆಗಳು ಇವೆ.

*ಕೇರಳದಲ್ಲಿ ಕಾಣಿಸಿಕೊಂಡ ರೂಪಾಂತರ ಜೆಎನ್–1 ಸೋಂಕು ಕ್ರಮೇಣವಾಗಿ ಕಡಿಮೆಯಾಗುತ್ತಿದೆ. ರಾಜ್ಯದಲ್ಲೂ ಒಂದು ವೇಳೆ ಹಬ್ಬಿದರೆ ಏನೆಲ್ಲ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಬೇಕೋ ಅದೆಲ್ಲವನ್ನು ತೆಗೆದುಕೊಂಡಿದ್ದೇವೆ.

*ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇದನ್ನು ಸಮರ್ಪಕವಾಗಿ ನಿರ್ವಹಿಸಲು ಸೂಚನೆ ನೀಡಿದ್ದಾರೆ. ಅದರಂತೆ ಇಲಾಖೆಯಲ್ಲಿರುವ ಕೋವಿಡ್ ವಾರಿಯರ್ಸ್ಗಳು ಫ್ಲೂ–ಲಸಿಕೆಯನ್ನು ಪಡೆಯಬೇಕು.

*ಎಲ್ಲಾ ಜಿಲ್ಲಾ ಕೇಂದ್ರಗಳಲ್ಲೂ ಪರೀಕ್ಷಾ ಸಾಮರ್ಥ್ಯವನ್ನೂ ಹೆಚ್ಚಿಸಲಾಗುತ್ತಿದೆ. ಜೊತೆಗೆ ಆರೋಗ್ಯ ಸೌಲಭ್ಯಗಳ ಕಾರ್ಯ ಸಿದ್ಧತೆ ನಡೆಸಲಾಗಿದೆ.

*ಸಭೆಯಲ್ಲಿ 99 ಮೆಡಿಕಲ್ ಕಾಲೇಜುಗಳು, 10 ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳ ನಿರ್ದೇಶಕರ ಜೊತೆ ಚರ್ಚೆ ನಡೆಸಲಾಗಿದೆ.

*ಎಲ್ಲಾ ಸರ್ಕಾರಿ ಕಾಲೇಜುಗಳಲ್ಲೂ ಪ್ರತ್ಯೇಕವಾದ ಆಕ್ಸಿಜನ್ ಬೆಡ್ ಮತ್ತು ಐಸಿಯು ವ್ಯವಸ್ಥೆ ಮಾಡಲಾಗಿದೆ. ಅಗತ್ಯ ಮಾನವ ಸಂಪನ್ಮೂಲಕ್ಕಾಗಿ ಪ್ರಸ್ತಾವನೆ ಸಲ್ಲಿಸಲಾಗಿದೆ.

*30 ಸಾವಿರ ಲಸಿಕೆಗಳು ಲಭ್ಯವಿದ್ದು, ಈವರೆಗೂ ಲಸಿಕೆ ಪಡೆಯದೇ ಇದ್ದವರೂ ಮತ್ತು ಮುಂಜಾಗ್ರತಾ ಲಸಿಕೆಯನ್ನಾಗಿ ತೆಗೆದುಕೊಳ್ಳುವವರು ಈ ಸೌಲಭ್ಯ ಪಡೆದುಕೊಳ್ಳಬಹುದು.

ಸಭೆಯಲ್ಲಿ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್, ವೈದ್ಯಕೀಯ ಶಿಕ್ಷಣ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಜಾವೇದ್ ಅಖ್ತರ್ , ವೈದ್ಯಕೀಯ ಶಿಕ್ಷಣ ಇಲಾಖೆಯ ನಿರ್ದೇಶಕಿ ಡಾ.ಸುಜಾತ್ರ್ಯಾಟ್, ಜಯದೇವ ಹೃದ್ರೋಗ ಸಂಸ್ಥೆಯ ನಿರ್ದೇಶಕ ತಾಂತ್ರಿಕ ಸಲಹಾ ಸಮಿತಿ ಅಧ್ಯಕ್ಷ ಡಾ.ರವಿ ಸೇರಿದಂತೆ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

## ನಮ್ಮೂರ ಬಾನುಲಿಯ ವಿಶೇಷ ಕಾರ್ಯಕ್ರಮ

ಬೆಳಗಾವಿ ಜಿಲ್ಲೆಯಲ್ಲಿ 2023 – 24 ನೇ ಸಾಲಿನ ಎಸ್ಎಸ್ಎಲ್ಸಿ ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶವನ್ನು ಉನ್ನತ ಶ್ರೇಣಿಗೆ ಕೊಂಡೊಯ್ಯುವ ದೃಷ್ಟಿಯಿಂದ ಹಾಗೂ ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳನ್ನು ಉತ್ತೇಜಿಸಿ ಪರೀಕ್ಷೆಯಲ್ಲಿ ಹೆಚ್ಚಿನ ಅಂಕಗಳೊಂದಿಗೆ ಉತ್ತೀರ್ಣರಾಗುವಂತೆ ಮಾಡುವ ಉದ್ದೇಶದಿಂದ ರೇಡಿಯೋ ಪಾಠಗಳನ್ನು ನಮ್ಮೂರ ಬಾನುಲಿ ಆಪ್ ರೇಡಿಯೋ ಹಾಗೂ ಯೌಟ್ಯೂಬ್ ಚಾನೆಲ್ ಮೂಲಕ ಪ್ರಸಾರ ಮಾಡಲಾಗುತ್ತಿದೆ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ಹೆಚ್ಚಿಸಿದ ರೇಡಿಯೋ ಪಾಠ ಇದೊಂದು ವಿಶೇಷ ಕಾರ್ಯಕ್ರಮವಾಗಿದ್ದು ವಿದ್ಯಾರ್ಥಿಗಳಿಗೆ ಈಗಾಗಲೇ ಆಯಾಯ ಶಾಲೆಯ ವೀಕ್ಷಕರು ಮಾರ್ಗದರ್ಶನ ನೀಡುತ್ತಿದ್ದರೂ, ಮತ್ತೊಂದು ಶಾಲೆಯ ನುರಿತ ಶಿಕ್ಷಕರು ನೀಡುವ ಸಲಹೆಗಳನ್ನೂ ಈ ಮಾಧ್ಯಮದ ಮೂಲಕ ಕೇಳಿಸಿಕೊಳ್ಳುವುದರಿಂದ ಮತ್ತಷ್ಟು ಮನದಟ್ಟು ಮಾಡಿಕೊಳ್ಳಲು ಮಕ್ಕಳಿಗೆ ಸಹಾಯವಾಗುತ್ತಿದೆ ಜೊತೆಗೆ ಯೂಟ್ಯೂಬ್ ಚಾನೆಲ್ ನಲ್ಲಿ ಕಾರ್ಯಕ್ರಮಗಳು ಇರುವುದರಿಂದ ಮಕ್ಕಳು ಮತ್ತೆ ಮತ್ತೆ ನೋಡಿ ತಿಳಿದುಕೊಳ್ಳುವ ಮೂಲಕ ಆತ್ಮವಿಶ್ವಾಸವನ್ನು ಹೆಚ್ಚಿಸಿಕೊಳ್ಳಬಹುದಾಗಿದೆ.

ಈ ಕಾರ್ಯಕ್ರಮದ ಕುರಿತು ತಿಳಿದುಕೊಳ್ಳಲು ಹಾಗೂ ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ 7090908908.

## ತಾಕತ್ತಿದ್ದರೆ ಎಲ್ಲ ರಾಮ ಕರಸೇವಕರನ್ನು ಬಂಧಿಸಿ: ಸುನೀಲ್ ಕುಮಾರ್ ಸವಾಲು

ಬೆಂಗಳೂರು: ನಿಮ್ಮ ಸರಕಾರಕ್ಕೆ ಮತ್ತು ನಿಮಗೆ ತಾಕತ್ತಿದ್ದರೆ ರಾಜ್ಯದ ಎಲ್ಲ ರಾಮ ಕರಸೇವಕರನ್ನು ಬಂಧನ ಮಾಡಿ ನೋಡಿ ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಮತ್ತು ಮಾಜಿ ಸಚಿವ ಸುನೀಲ್ ಕುಮಾರ್ ಅವರು ಸಿದ್ದರಾಮಯ್ಯನವರಿಗೆ ಸವಾಲು ಹಾಕಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ "ಜಗನ್ನಾಥ ಭವನ"ದಲ್ಲಿ ಇಂದು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ಕೇವಲ ಹುಬ್ಬಳ್ಳಿಯ ಕಾರ್ಯಕರ್ತರನ್ನು ಬಂಧಿಸುವುದಲ್ಲ. 92ರ ಕರಸೇವೆಯಲ್ಲಿ ನಾನೂ ಭಾಗವಹಿಸಿದ್ದೆ. ಕರಸೇವಕರನ್ನು ಬಂಧನ ಮಾಡುವ ಮೂಲಕ ಹಿಂದುತ್ವ ವಿಚಾರವನ್ನು ಹತ್ತಿಕ್ಕಬಹುದೆಂಬ ಯೋಚನೆಯನ್ನು ಬಿಟ್ಟು ಬಿಡಿ. ರಾಜ್ಯದ ಎಲ್ಲ ಕರಸೇವಕರ ಪಟ್ಟಿಯನ್ನು ಕೊಡುವೆ. ನಿಮ್ಮ ಸರಕಾರಕ್ಕೆ ಮತ್ತು ನಿಮಗೆ ತಾಕತ್ತಿದ್ದರೆ ಎಲ್ಲ ರಾಮಕರಸೇವಕರನ್ನು ಬಂಧನ ಮಾಡಿ ನೋಡಿ ಎಂದು ಆಗ್ರಹಿಸಿದರು.

ಇನ್ನೂ ಕಾಲ ಮಿಂಚಿಲ್ಲ; ಆಹ್ವಾನ ಕೊಟ್ಟಿಲ್ಲ; ನೋಡೋಣ ಬರೋಣ ಎಂಬ ಮಾತನ್ನು ಬಿಟ್ಟು ಬಿಡಿ. ಯಾವುದೋ ಸ್ನೇಹಿತರ, ಕುಟುಂಬಸ್ಥರ ಮದುವೆಗೆ ಆಹ್ವಾನ ಕೊಟ್ಟಿಲ್ಲ ಎಂದಾಗ ಪಿಳ್ಳೆನೆವವನ್ನು ಕೆಲವರು ಮುಂದಿಡುತ್ತಾರೆ. ರಾಷ್ಟ್ರಮಟ್ಟದ ಈ ಕಾರ್ಯಕ್ರಮಕ್ಕೆ ಯಾವ ಆಹ್ವಾನವೂ ಬೇಡ. ನಿಮಗೆ ಬದ್ಧತೆ, ಹಿಂದುತ್ವದ ಬಗ್ಗೆ ನೈಜ ಕಳಕಳಿ ಇದ್ದರೆ ಚುನಾವಣೆಯ ಹಿಂದೂ ಆಗದೆ, ನೈಜ ಹಿಂದೂ ಎಂದು ಪ್ರಕಟ ಮಾಡಬೇಕಿದ್ದರೆ



22ರಂದು ರಾಜ್ಯದ ಎಲ್ಲ ಮುಜರಾಯಿ ದೇವಾಲಯಗಳಲ್ಲಿ ಪೂಜೆ ಮಾಡಿಸಲು ಸೂಚಿಸಿ. 100 ದೇವಾಲಯಗಳಿಗೆ ತಲಾ 100 ಕೋಟಿ ಅನುದಾನವನ್ನು ಮುಂದಿನ 3 ವರ್ಷಗಳಲ್ಲಿ ಕೊಡುವ ಪ್ರಯತ್ನವನ್ನು ಈ ಸರಕಾರ ಮಾಡಲಿ ಎಂದು ಒತ್ತಾಯಿಸಿದರು.

ದತ್ತಪೀಠ ಸೇರಿ ರಾಜ್ಯದ 100 ದೇವಾಲಯಗಳನ್ನು ಈ ಸರಕಾರ ಆಯ್ಕೆ ಮಾಡಿಕೊಳ್ಳಲಿ ಎಂದು ಸವಾಲು ಹಾಕಿದರು. ಅಯೋಧ್ಯೆಯಲ್ಲಿ ಶ್ರೀರಾಮಮಂದಿರದ ನಿರ್ಮಾಣ, ಸಾವಿರಾರು ಕೋಟಿ ರೂಪಾಯಿಯ ಅಭಿವೃದ್ಧಿ ಕಾರ್ಯ ನಡೆದಿದೆ. ಕಾಶಿ ವಿಶ್ವನಾಥನ ಕ್ಷೇತ್ರದಲ್ಲಿ ಕಾರಿಡಾರ್ ನಿರ್ಮಾಣ ನಡೆದು ಲಕ್ಷಾಂತರ ಜನರು ಅಲ್ಲಿಗೆ ಹೋಗುತ್ತಿದ್ದಾರೆ. ಮಧ್ಯಪ್ರದೇಶದ ಉಜ್ಜೈನಿಯಲ್ಲಿ ದೊಡ್ಡ ಪ್ರಮಾಣದ ಮಂದಿರ ನಿರ್ಮಾಣವಾಗಿ ಅಲ್ಲಿ ಲಕ್ಷಾಂತರ ಜನ ಭಕ್ತರು ಹೋಗುತ್ತಿದ್ದಾರೆ. ಟೆಂಪಲ್ ಟೂರಿಸಂ ಮತ್ತು ಆಧ್ಯಾತ್ಮಿಕ ಭಾವನೆಗಳು ಈ ದೇಶದ ಅಡಿಗಲ್ಲು. ಆ ಹಿನ್ನೆಲೆಯಲ್ಲಿ ಕರ್ನಾಟಕದ ದೇವಸ್ಥಾನಗಳನ್ನೂ ಅಭಿವೃದ್ಧಿ ಮಾಡಿ ಎಂದು ಒತ್ತಾಯಿಸಿದರು.

ರಾಮಮಂದಿರದಲ್ಲಿ ಪ್ರಾಣ ಪ್ರತಿಷ್ಠಾಪನೆಯ ಸಂದರ್ಭದಲ್ಲಿ ದೇಶದಲ್ಲಿ ಮಂಗಳಕರ ವಾತಾವರಣವಿದೆ. ಆದರೆ, ಅಪಶಕುನ ಸೃಷ್ಟಿಗೆ ಸಿದ್ದರಾಮಯ್ಯನವರು ಮುಂದಾಗಿದ್ದಾರೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

32 ವರ್ಷಗಳ ಹಿಂದೆ ಕರಸೇವೆಯಲ್ಲಿ ಭಾಗವಹಿಸಿದ್ದ ಹುಬ್ಬಳ್ಳಿಯ ಕಾರ್ಯಕರ್ತರನ್ನು ಬಂಧನ ಮಾಡಿ ರಾವಣ ಮಾತ್ರ ರಾಮವಿರೋಧಿಯಲ್ಲ; ತಾನು ಕೂಡ ರಾಮವಿರೋಧಿ ಎಂಬುದನ್ನು ಕಾಂಗ್ರೆಸ್ ಸರಕಾರ ಸಿದ್ಧಗೊಳಿಸಿದೆ ಎಂದು ಟೀಕಿಸಿದರು.

ಅಯೋಧ್ಯೆಯಲ್ಲಿ ರಾಮಮಂದಿರದಲ್ಲಿ ಪ್ರಾಣ ಪ್ರತಿಷ್ಠಾಪನೆಯ ದಿನಗಳು ಹತ್ತಿರ ಬರುತ್ತಿದೆ. ರಾಮಮಂದಿರದ ಮೂಲಕ ರಾಷ್ಟ್ರ ಮಂದಿರ ನಿರ್ಮಾಣಕ್ಕಾಗಿ ನಾವೆಲ್ಲರೂ ಕೆಲಸ ಮಾಡುತ್ತಿದ್ದೇವೆ ಎಂದು ವಿವರಿಸಿದರು.

## ಶಾರ್ಟ್ ಸರ್ಕೀಟ್ ನಿಂದ ಮನೆ ಭಸ್ಮ

### ಭೇಟಿ ನೀಡಿದ ಎಂಎಲ್‌ಸಿ ಚನ್ನರಾಜ ಹಟ್ಟಿಹೊಳಿ

ಬೆಳಗಾವಿ: ವಿದ್ಯುತ್ ಶಾರ್ಟ್ ಸರ್ಕ್ಯೂಟ್ ನಿಂದ ಮನೆ ಭಸ್ಮವಾದ ಹಿನ್ನೆಲೆಯಲ್ಲಿ ಬೆಳಗಾವಿ ಗ್ರಾಮೀಣ ಕ್ಷೇತ್ರದ ಬೆಂಡಿಗೇರಿ ಗ್ರಾಮಕ್ಕೆ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಮಂಗಳವಾರ ಭೇಟಿ ನೀಡಿದ್ದರು.

ಜ್ಯೋತಿಬಾ ಸಾಮಾಯಿ ಎನ್ನುವವರ ಮನೆ ಸುಟ್ಟಿರುವ ಹಿನ್ನೆಲೆಯಲ್ಲಿ ಅವರ ಮನೆಗೆ ಭೇಟಿ ನೀಡಿದ ಚನ್ನರಾಜ, ಅವರಿಗೆ ಧೈರ್ಯ ತುಂಬಿ ಆರ್ಥಿಕ ನೆರವು ನೀಡಿದರು.

ಈ ಸಮಯದಲ್ಲಿ ಗ್ರಾಮದ ಪ್ರಮುಖರು, ತಹಶಿಲ್ದಾರ ಬಸವರಾಜ ನಾಗರಾಳ, ಹಿರೇಬಾಗೇವಾಡಿ ಸಿಪಿಐ



ಮುಂತಾದವರು ಉಪಸ್ಥಿತರಿದ್ದರು.

## ವಿದ್ಯಾರ್ಥಿನಿ ಜತೆ ಬಸ್ ಚಾಲಕ ಆತ್ಮಹತ್ಯೆ ಕೇಸ್: ಖಾಸಗಿ ಶಾಲೆ ವಿರುದ್ಧ ಪೋಕ್ಸೋ ಪ್ರಕರಣ ದಾಖಲು

ಚಿಕ್ಕಮಗಳೂರು: 8ನೇ ತರಗತಿ ವಿದ್ಯಾರ್ಥಿನಿ ಜೊತೆ ಬಸ್ ಚಾಲಕ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಖಾಸಗಿ ಶಾಲಾ ಆಡಳಿತ ಮಂಡಳಿ ವಿರುದ್ಧ ಪೋಕ್ಸೋ ಪ್ರಕರಣ ದಾಖಲಾಗಿದೆ.



ಚಿಕ್ಕಮಗಳೂರು ಜಿಲ್ಲೆ ಅಜ್ಜಂಪುರ ತಾಲೂಕಿನ ಬಂಕನಕಟ್ಟೆಯಲ್ಲಿ ಚಲಿಸುತ್ತಿದ್ದ ರೈಲಿಗೆ ಬಿದ್ದು ಶಾಲಾ ಬಸ್ ಚಾಲಕ ಹಾಗೂ ವಿದ್ಯಾರ್ಥಿನಿ ಆತ್ಮಹತ್ಯೆ ಮಾಡಿಕೊಂಡಿದ್ದರು. ರುಂಡ ಮುಂಡ ಬೇರ್ಪಟ್ಟ ಸ್ಥಿತಿಯಲ್ಲಿ ಶವ ಪತ್ತೆಯಾಗಿತ್ತು. ಅಜ್ಜಂಪುರ ತಾಲೂಕಿನ ಗಿರಿಯಾಪುರ ಗ್ರಾಮದ ಜ್ಞಾನದೀಪ ಖಾಸಗಿ ಶಾಲೆಯಲ್ಲಿ ವಿದ್ಯಾರ್ಥಿನಿ ಓದುತ್ತಿದ್ದಳು, ಸಂತೋಷ್ ಮೂರು ವರ್ಷಗಳಿಂದ ಅದೇ ಶಾಲೆಯಲ್ಲಿ ಬಸ್ ಚಾಲಕನಾಗಿ ಕೆಲಸ ಮಾಡುತ್ತಿದ್ದನು. ನಿನ್ನೆ ವಿದ್ಯಾರ್ಥಿನಿಯನ್ನು ಸಂತೋಷ್ ತನ್ನೊಂದಿಗೆ ಕರೆದುಕೊಂಡು ಹೋಗಿ ಮಧ್ಯರಾತ್ರಿ ರೈಲಿಗೆ ಬಿದ್ದು ಆತ್ಮಹತ್ಯೆ ಮಾಡಿಕೊಂಡಿದ್ದನು. ಪ್ರಕರಣ ಸಂಬಂಧ ಖಾಸಗಿ ಶಾಲಾ ಆಡಳಿತ ಮಂಡಳಿ ವಿರುದ್ಧ ಪೋಕ್ಸೋ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

## ದಿ. 4 ರಂದು ವಾಮನ ವಾಗೂಕರ ಶ್ರದ್ಧಾಂಜಲಿ

ಬೆಳಗಾವಿ: ಸಂಗೀತ ಕಲಾಕಾರ ಸಂಘ, ಬಿ.ವಿ. ಕಡ್ಲಾಸ್ಕರ ಬುವಾ ಮೆಮೋರಿಯಲ್ ಟ್ರಸ್ಟ್, ಆರ್ಟ ಸರ್ಕಲ್ ಬೆಳಗಾವಿ, ಹರಿಕಾಕಾ ಭಜನಾ ಮಂಡಲ, ಸ್ವರ ಮಲ್ಹಾರ ಇನ್ಸಿಟ್ಯೂಟ್, ರಂಗ ಸಂಪದ, ಸರಸ್ವತಿ ವಾಚನಾಲಯ, ಸಂಗೀತ ಕಲಾ ಮಂಚದವರು, ಅಭಿಮಾನಿಗಳು, ನಗರದ ಭಜನಾ ಮಂಡಳದವರು ಸೇರಿಕೊಂಡು ಇದೇ ದಿ. 4 ಗುರುವಾರದಂದು ಸಾಯಂಕಾಲ 5–30 ಕ್ಕೆ ಶಹಪೂರದ ಕೋರೆಬೀದಿಯಲ್ಲಿರುವ ಸರಸ್ವತಿ ವಾಚನಾಲಯ ಸಭಾಭವನದಲ್ಲಿ ಇತ್ತೀಚೆಗೆ ನಿಧನರಾದ ಖ್ಯಾತ ಹಾರ್ಮೋನಿಯಂ ವಾದಕ ವಾಮನ ವಾಗೂಕರ ಅವರ ಶ್ರದ್ಧಾಂಜಲಿ ಸಭೆಯನ್ನು ಕರೆದಿದ್ದಾರೆ.

## ಹಿಟ್ ಆಂಡ್ ರನ್ ಕೇಸ್ ಮಾಡಿ ಪರಾರಿಯಾದರೆ 10 ವರ್ಷ ಜೈಲು; ಎಲ್ಲ ರೀತಿಯ ವಾಹನಗಳಿಗೂ ಅನ್ವಯ



### ಎಚ್.ಮಾರುತಿ

ಹಿಟ್ ಅಂಡ್ ರನ್ ಕೇಸ್ ಮಾಡಿ ಪರಾರಿಯಾದರೆ 10 ವರ್ಷ ಜೈಲು ಮತ್ತು 7 ಲಕ್ಷ ರೂಪಾಯಿಗಳ ದಂಡ ಕೇವಲ ಟ್ರಕ್ ಮತ್ತು ಲಾರಿಗಳಿಗೆ ಅನ್ವಯಿಸುವುದಿಲ್ಲ. ಸರ್ಕಾರಿ ಬಸ್, ಸರ್ಕಾರಿ ವಾಹನ, ದ್ವಿಚಕ್ರ ವಾಹನ, ಕಾರು, ಸರಕು ಸಾಗಾಣೆ ಲಾರಿ ಟ್ರಕ್ ಸೇರಿದಂತೆ ಎಲ್ಲ ರೀತಿಯ ವಾಹನಗಳಿಗೆ ಅನ್ವಯಿಸುತ್ತದೆ. ಆದರೆ ಭಾರಿ ಗಾತ್ರದ ವಾಹನಗಳಿಗೆ ಮಾತ್ರ ಅನ್ವಯಿಸುತ್ತದೆ ಎಂದು ಸಾರ್ವಜನಿಕರು ತಪ್ಪು ಗ್ರಹಿಕೆ ಹೊಂದಿದ್ದಾರೆ.

ಈ ಹೊಸ ಕಾನೂನಿಗೆ ಲಾರಿ ಮತ್ತು ಟ್ರಕ್ ಮಾಲೀಕರ ಸಂಘಗಳು ದೇಶಾದ್ಯಂತ ವಿರೋಧ ವ್ಯಕ್ತಪಡಿಸಿವೆ. ಈಗಾಗಲೇ ವಿಶೇಷವಾಗಿ ಉತ್ತರ ಭಾರತದಲ್ಲಿ ಈ ಕಾನೂನಿಗೆ ಆಕ್ರೋಶ ವ್ಯಕ್ತಪಡಿಸಿರುವ ಚಾಲಕರು ಮತ್ತು ವಾಹನಗಳ ಮಾಲೀಕರು ಮುಷ್ಕರ ಆರಂಭಿಸಿದ್ದಾರೆ.

ಈ ಸಂಬಂಧ ದೆಹಲಿಯಲ್ಲಿ ಎಲ್ಲಾ ರಾಜ್ಯಗಳ ಲಾರಿ ಮತ್ತು ಟ್ರಕ್ ಮಾಲೀಕರ ಸಂಘಗಳ ಮುಖಂಡರ ಸಭೆ ನಡೆದಿದೆ.

ರಾಜ್ಯದಲ್ಲೂ ಪ್ರತಿಭಟನೆ ನಡೆಸಲಾಗುತ್ತದೆ. ಪ್ರತಿಭಟನೆಯ ಸ್ವರೂಪ ಕುರಿತು ಬುಧವಾರ ಬೆಂಗಳೂರಿನಲ್ಲಿ ಸಭೆ ನಡೆಯಲಿದ್ದು, ತೀರ್ಮಾನಿಸಲಾಗುತ್ತದೆ ಎಂದು ಲಾರಿ ಮಾಲೀಕರು ತಿಳಿಸಿದ್ದಾರೆ.

ರಾಜ್ಯದಲ್ಲಿ ಸುಮಾರು 7.5 ಲಕ್ಷ ಸರಕು ಸಾಗಾಣೆ ವಾಹನಗಳಿವೆ. ಇದರಲ್ಲಿ 4.50 ಲಕ್ಷದಷ್ಟು ಲಘು ಸರಕು ಸಾಗಾಣೆ ಮತ್ತು 3 ಲಕ್ಷ ಭಾರಿ ಸರಕು ಸಾಗಾಣೆ ವಾಹನಗಳಿವೆ.

ಕೇಂದ್ರ ಸಕಾರ ಜಾರಿಗೊಳಿಸಿರುವ ಹೊಸ ಕಾನೂನು ಕುರಿತು ಬೆಂಗಳೂರು ಲಾರಿ ಮಾಲೀಕರು ಮತ್ತು ಬಳಕೆದಾರರ ಸೊಸೈಟಿ ಕಾರ್ಯದರ್ಶಿ ವಿಶ್ವನಾಥ್ ಎಚ್ ಟಿ ಜೊತೆಯಲ್ಲಿ ಮಾತನಾಡಿದ್ದಾರೆ. ಕೇವಲ ಲಾರಿ ಮತ್ತು ಟ್ರಕ್ ಗಳಿಗೆ ಮಾತ್ರ ಈ ಕಾನೂನು

ಅನ್ವಯಿಸುತ್ತದೆ ಎನ್ನುವುದು ತಪ್ಪು ಗ್ರಹಿಕೆ. ಈ ಕಾನೂನು ಸರ್ಕಾರಿ ಬಸ್, ಸರ್ಕಾರಿ ವಾಹನ, ಖಾಸಗಿ ಕಾರು ಸೇರಿದಂತೆ ಎಲ್ಲ ರೀತಿಯ ವಾಹನಗಳಿಗೆ ಅನ್ವಯಿಸುತ್ತದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ದೇಶದಲ್ಲಿ ನಡೆಯುವ ಎಲ್ಲ ಅಪಘಾತಗಳಿಗೂ ಲಾರಿಗಳೇ ಕಾರಣ ಎಂದು ಬಿಂಬಿಸುತ್ತಿರುವುದು

ಸರಿಯಲ್ಲ. ಬೆಂಗಳೂರಿನಲ್ಲಿ ಅಪಘಾತಗಳು



ನಡೆಯುವುದಿಲ್ಲವೇ? ಈ ಅಪಘಾತಗಳಲ್ಲಿ

ಸಾರ್ವಜನಿಕರು ಮರಣ ಹೊಂದುತ್ತಿಲ್ಲವೇ ಎಂದು ಪ್ರಶ್ನಿಸುತ್ತಾರೆ.

ರಾಷ್ಟ್ರೀಯ ಹೆದ್ದಾರಿಗಳಲ್ಲಿ ಮಾತ್ರ ಲಾರಿ ಮತ್ತು ಟ್ರಕ್ ಗಳು ಸಂಚರಿಸುತ್ತವೆ. ಅಲ್ಲೊಂದು ಇಲ್ಲೊಂದು ಅಪಘಾತಗಳು ಸಂಭವಿಸುತ್ತವೆ. ಇಲ್ಲ ಎಂದು ಹೇಳುವುದಿಲ್ಲ. ಎಲ್ಲ ಪ್ರಕರಣಗಳಲ್ಲಿಯೂ ಲಾರಿ ಚಾಲಕರ ತಪ್ಪು ಇರುವುದಿಲ್ಲ. ಪಾದಾಚಾರಿಗಳು, ಅಕ್ಕ ಪಕ್ಕ ಮತ್ತು ಎದುರು ಬರುವ ವಾಹನಗಳ ತಪ್ಪೂ ಇರಬಹುದಲ್ಲವೇ ಅವರ ತಪ್ಪಿನಿಂದಲೇ ಅಪಘಾತ ಸಂಭವಿಸುತ್ತದೆಯಲ್ಲವೇ ಎಂದು ಸರಣಿ ಪ್ರಶ್ನೆಗಳನ್ನು ಕೇಳುತ್ತಾರೆ.

ಬೆಂಗಳೂರಿನಲ್ಲಿ 1 ಕೋಟಿ ಮತ್ತು ರಾಜ್ಯದಲ್ಲಿ 3 ಕೋಟಿ ವಾಹನಗಳಿವೆ. ಆದರೆ ರಾಜ್ಯ ರಾಜಧಾನಿ ಬೆಂಗಳೂರಿನ ರಸ್ತೆಗಳು ಕೇವಲ 9–10 ಲಕ್ಷ ವಾಹನಗಳು ಮತ್ತು ಇಡೀ ರಾಜ್ಯದ ರಸ್ತೆಗಳ ಸಾಮರ್ಥ್ಯ ಅಬ್ಬಬ್ಬಾ ಎಂದರೆ 25 ಲಕ್ಷ ವಾಹನಗಳ ಭಾರವನ್ನು ತಡೆದುಕೊಳ್ಳಬಹುದು ಎಂದು ಅಂಕಿ ಅಂಶ ನೀಡುತ್ತಾರೆ.

ಸರ್ಕಾರ ಮೊದಲು ರಸ್ತೆಗಳ ಸಾಮರ್ಥ್ಯವನ್ನು ಹೆಚ್ಚಿಸಬೇಕು. ರಸ್ತೆಗಳ ಅಗಲೀಕರಣ ಮಾಡಬೇಕು. ಸ್ವಂತ ವಾಹನಗಳನ್ನು ಚಲಾಯಿಸುವವರಿಗೆ ರಸ್ತೆ ಶಿಸ್ತು ಕಲಿಸಬೇಕು ಎಂದು ವಿಶ್ವನಾಥ್ ಆಗ್ರಹಪಡಿಸುತ್ತಾರೆ.

ಬೆಂಗಳೂರು– ಮೈಸೂರು ರಸ್ತೆ ಆರಂಭವಾದಾಗ ನಡೆದ ನಿರಂತರ ಅಪಘಾತಗಳಿಗೆ ಯಾರು ಕಾರಣ? ಲಾರಿ ಮಾಲೀಕರಿಂದ ಒಂದೂ ಅಪಘಾತ ನಡೆದಿಲ್ಲ ಎಂದು ಅವರು ಹೇಳುತ್ತಾರೆ.

ಈಗಾಗಲೇ ವಾಹನ ಚಾಲಕರ ಕೊರತೆ ಇದೆ. ಯಾರೂ ಈ ಉದ್ಯೋಗಕ್ಕೆ ಬರುತ್ತಿಲ್ಲ. ರಾಜ್ಯದಲ್ಲಿ ಶೇ.25ರಷ್ಟು ಚಾಲಕರ ಕೊರತೆ ಇದೆ. ಕೋಟಿ ಕೋಟಿ ಬಂಡವಾಳ ಹೂಡಿ ಮಾಲೀಕರಾದ ನಮಗೆ ನಿದ್ದೆ ಬರುತ್ತಿಲ್ಲ. ಸಮಯಕ್ಕೆ ಸರಿಯಾಗಿ ಸರಕುಗಳನ್ನು ತಲುಪಿಸುವ ಜವಬ್ದಾರಿ ಇರುತ್ತದೆ. ಎಂದು ಹೇಳುತ್ತಾರೆ.

ಸರ್ಕಾರ ಕೂಡಲೇ ಈ ಕಾನೂನನ್ನು ಹಿಂದಕ್ಕೆ ಪಡೆಯಬೇಕು. ಇಲ್ಲವಾದಲ್ಲಿ ರಾಜ್ಯವ್ಯಾಪಿ

ಮುಷ್ಕರ ಕುರಿತು ನಿರ್ಧಾರ ಕೈಗೊಳ್ಳುತ್ತೇವೆ. ನಮ್ಮ ಹೋರಾಟಕ್ಕೆ ಸಾರ್ವಜನಿಕರು ಬೆಂಬಲ ಸೂಚಿಸಬೇಕು ಎಂದು ಅವರು ಆಗ್ರಹಪಡಿಸುತ್ತಾರೆ.

ಒಂದು ವೇಳೆ ರಾಜ್ಯದಲ್ಲೂ ಮುಷ್ಕರ ಆರಂಭವಾದರೆ ಡೀಸೆಲ್, ಪೆಟ್ರೋಲ್, ಅಗತ್ಯ ವಸ್ತುಗಳ ಸಾಗಾಣೆಗೆ ಧಕ್ಕೆ ಎದುರಾಗಲೂಬಹುದು. ಅಷ್ಟರೊಳಗೆ ಸಾರ್ವಜನಿಕರ ಹಿತದೃಷ್ಟಿಯಿಂದ ಸರ್ಕಾರ ಸೂಕ್ತ ನಿರ್ಧಾರಕ್ಕೆ ಬರುವುದು ಕ್ಷೇಮ.

ಹಿಟ್ ಆಂಡ್ ರನ್ ಕೇಸ್ ಗಳಲ್ಲಿ ಅಪಘಾತ ನಡೆಸಿ ಪರಾರಿಯಾಗುವ ಪ್ರಕರಣಗಳಿಗೆ ಸಂಬಂಧಿಸಿದಂತೆ ಜಾರಿಯಾಗಲಿರುವ ಹೊಸ ಭಾರತೀಯ ದಂಡ ಸಂಹಿತೆ ಕಾನೂನು ವಿರೋಧಿಸಿ ದೇಶಾದ್ಯಂತ ಟ್ರಕ್ ಚಾಲಕರು ಮುಷ್ಕರ ಆರಂಭಿಸಿದ್ದಾರೆ.

ಇಂತಹ ಅಪಘಾತಗಳಲ್ಲಿ ಪ್ರತಿ ವರ್ಷ 50 ಸಾವಿರ ಅಮಾಯಕರು ಪ್ರಾಣ ಕಳೆದುಕೊಳ್ಳುತ್ತಿದ್ದು, ಸರ್ಕಾರ ಈ ಕಾನೂನನ್ನು ಸಮರ್ಥಿಸಿಕೊಂಡಿದೆ. ಅಪಘಾತ ನಡೆದಿರುವ ಬಗ್ಗೆ ಮಾಹಿತಿ ನೀಡಿದರೆ ಶಿಕ್ಷೆ ಮತ್ತು ದಂಡದಲ್ಲಿ ರಿಯಾಯಿತಿ ತೋರಿಸಲಾಗುತ್ತದೆ ಎಂದು ಸದನದಲ್ಲಿ ಗೃಹ ಸಚಿವ ಅಮಿತ್ ಷಾ ತಿಳಿಸಿದ್ದರು. ಆದರೆ ಅಪಘಾತ ನಡೆದಾಗ ಚಾಲಕ ಸಂಬಂಧಪಟ್ಟ ಇಲಾಖೆಗೆ ಹೇಗೆ ಮಾಹಿತಿ ತಲುಪಿಸಬೇಕು ಎಂಬ ಬಗ್ಗೆ ಸ್ಪಷ್ಟತೆ ಇಲ್ಲ.

ಇದಕ್ಕೂ ಮುನ್ನ ಬ್ರಿಟಿಷರ ಕಾಲದ ಐಪಿಸಿಯ ವಿವಿಧ ಸೆಕ್ಷನ್‌ಗಳಲ್ಲಿದ್ದ ಹಿಟ್ ಆಂಡ್ ರನ್ ಕೇಸ್‌ಗಳಿಗೆ 2 ವರ್ಷದವರೆಗೆ ಶಿಕ್ಷೆ ವಿಧಿಸುವ ಅವಕಾಶ ಮಾತ್ರ ಇತ್ತು.

ಯಾರೊಬ್ಬರೂ ಉದ್ದೇಶ ಪೂರ್ವಕವಾಗಿ ಅಪಘಾತ ಮಾಡುವುದಿಲ್ಲ. ಅಕಸ್ಮಾತ್ ಅಪಘಾತ ನಡೆದಾಗ ಅಲ್ಲಿ ಸೇರುವ ಜನರ ಗುಂಪು ಕೊಲ್ಲುವ ಸಾಧ್ಯತೆಗಳಿರುವುದರಿಂದ ತಪ್ಪಿಸಿಕೊಳ್ಳಲು ಪರರಿಯಗಬೇಕಾಗುತ್ತದೆ.

ಒಂದು ವೇಳೆ ಹೊಸ ಕಾನೂನು ಜಾರಿಯಾದರೆ ಭಯದಿಂದ ಚಾಲಕ ಹುದ್ದೆಯನ್ನು ತೊರೆಯುವ ಸಾಧ್ಯತೆಗಳೇ ಹೆಚ್ಚು ಮತ್ತು ಹೊಸದಾಗಿ ಈ ಉದ್ಯೋಗಕ್ಕೆ ಯಾರೂ ಸೇರುವುದಿಲ್ಲ ಎಂದು ಆಪಾದಿಸುತ್ತಾರೆ.

ಕೇವಲ ಚಾಲಕರು ಮಾತ್ರ ಅಪಘಾತಗಳಿಗೆ ಕಾರಣರಾಗುವುದಿಲ್ಲ. ಚಾಲಕರ ನಿಯಂತ್ರಣವನ್ನು ಮೀರಿದ ಕಾರಣಗಳಿರುತ್ತವೆ. ಮಂಜು ಮುಸುಕಿದ ವಾತಾವರಣದಲ್ಲಿ ಅಪಘಾತ ನಡೆದರೆ ಚಾಲಕ ಜೈಲು ಶಿಕ್ಷೆ ಅನುಭವಿಸಬೇಕೇ ಎಂದು ಪ್ರಶ್ನಿಸುತ್ತಾರೆ.

ಆದ್ದರಿಂದ ಈ ಹೊಸ ಕಾನೂನನ್ನು ಹಿಂದಕ್ಕೆ ಪಡೆಯಬೇಕು ಎಂದು ಈಗಾಗಲೇ ವಿವಿಧ ರಾಜ್ಯಗಳಲ್ಲಿ ಪ್ರತಿಭಟನೆಗಳು ಆರಂಭವಾಗಿವೆ.

ಹೊಸ ಕಾನೂನು ವಿರೋಧಿಸಿ ಮಧ್ಯ ಪ್ರದೇಶ, ಛತ್ತೀಸಗಡ, ಮಹಾರಾಷ್ಟ್ರ, ಗುಜರಾತ್ ಸೇರಿದಂತೆ ವಿವಿಧ ರಾಜ್ಯಗಳಲ್ಲಿ ವಾಣಿಜ್ಯ ವಾಹನ, ಟ್ರಕ್, ಟ್ಯಾಂಕರ್‌ಗಳ ಚಾಲಕರು ಸೋಮವಾರ ಪ್ರತಿಭಟನೆ ನಡೆಸಿದ್ದಾರೆ.

ಇವರಿಗೆ ಖಾಸಗಿ ಬಸ್ ಚಾಲಕರು, ಕ್ಯಾಬ್ ಡ್ರೈವರ್ ಗಳು ಮತ್ತು ಕೆಲವು ಭಾಗಗಳಲ್ಲಿ ಸರ್ಕಾರಿ ಬಸ್ ಚಾಲಕರು ಕೈ ಜೋಡಿಸಿದ್ದಾರೆ.

ಪ್ರತಿಭಟನಕಾರರು ಮುಂಬೈ, ಭೋಪಾಲ್, ನಾಸಿಕ್, ರಾಯಪುರ ಸೇರಿದಂತೆ ಹಲವು ನಗರಗಳಲ್ಲಿ ರಸ್ತೆ ಬಂದ್ ನಡೆಸಿ ಟೈರ್ ಗಳನ್ನು ಸುಟ್ಟು ಕಿಡಿ ಕಾರಿದ್ದಾರೆ.

ಮುಂಬೈನಲ್ಲಿ ಬೆಂಗಳೂರು ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿದ್ದಾರೆ. ಇವರನ್ನು ಚದುರಿಸಲು ಮುಂದಾದ ಪೊಲೀಸ್ ಸಿಬ್ಬಂದಿ ಮೇಲೆ ಚಾಲಕರು ಹಲ್ಲೆ ನಡೆಸಿದ್ದಾರೆ ಎಂದು ತಿಳಿದು ಬಂದಿದೆ.

ಕೆಲವು ನಗರಗಳಲ್ಲಿ ಚಾಲಕರು ಕಲ್ಲು ಮತ್ತು ಬೆತ್ತಗಳೊಂದಿಗೆ ದಾಳಿ ನಡೆಸಿದ್ದು, ಈ ಕೃತ್ಯದಲ್ಲಿ ಭಾಗಿಯಾಗಿದ್ದ ಚಾಲಕರನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಛತ್ತೀಸಗಡದಲ್ಲಿ ಖಾಸಗಿ ಬಸ್‌ಗಳ ಚಾಲಕರು ಸೇರಿದಂತೆ 1 ಲಕ್ಷ ಚಾಲಕರು ಕೆಲಸ ಸ್ಥಗಿತಗೊಳಿಸಿ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದಾರೆ. ವಿವಿಧ ಜಿಲ್ಲಾ ಕೇಂದ್ರಗಳಲ್ಲಿ ಚಾಲಕರು ಪ್ರತಿಭಟನೆಗಳಲ್ಲಿ ಭಾಗಿಯಾಗಿದ್ದಾರೆ.

ರಾಜ್ಯದ ಸುಮಾರು 12 ಸಾವಿರ ಖಾಸಗಿ ಬಸ್‌ಗಳ ಚಾಲಕರು ಸೇರಿದಂತೆ ಒಟ್ಟು 1 ಲಕ್ಷ ಚಾಲಕರು ಕೆಲಸ ಸ್ಥಗಿತಗೊಳಿಸಿ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು ಎಂದು ಛತ್ತೀಸಗಡ ರಾಜ್ಯ ವಾಹನ ಚಾಲಕರ ಸಂಘದ ಸಂಚಾಲಕ ಜಿತೇಂದ್ರ ಶುಕ್ಲಾ ತಿಳಿಸಿದ್ದಾರೆ.

ಭೋಪಾಲದ ಲಾಲ್‌ಘಾಟಿಯಲ್ಲಿ ಪ್ರತಿಭಟಿಸುತ್ತಿದ್ದ ಚಾಲಕರು ನಗರ ಸಾರಿಗೆ ಸಂಸ್ಥೆ ಬಸ್‌ಗಳು ಮತ್ತು ವಾಹನಗಳ ಸಂಚಾರಕ್ಕೆ ಅಡ್ಡಿಪಡಿಸಿದ್ದಾರೆ.

ಇತ್ತೀಚೆಗೆ ಮುಗಿದ ಚಳಿಗಾಲದ ಅಧಿವೇಶನದಲ್ಲಿ ಕೇಂದ್ರ ಸರ್ಕಾರ ಭಾರತೀಯ ನ್ಯಾಯ ಸಂಹಿತೆ –2023 ಮತ್ತು ಭಾರತೀಯ ನಾಗರಿಕ ಸುರಕ್ಷಾ –2023 ಜಾರಿಗೊಳಿಸುವ ಮೂಲಕ ಕಠಿಣ ಶಿಕ್ಷೆಗೆ ಅವಕಾಶ ಕಲ್ಪಿಸಿದೆ.

ಹಿಟ್ ಆಂಡ್ ರನ್ ಕೇಸ್ ಗಳಲ್ಲಿ 2019 ರಲ್ಲಿ 47,530 ಅಪಘಾತಗಳು ನಡೆದಿದ್ದು, 52,540 ಮಂದಿ ಬಲಿಯಾಗಿದ್ದಾರೆ. 2021 ರಲ್ಲಿ 47,530 ಅಪಘಾತಗಳು ಸಂಭವಿಸಿದ್ದು, 43499 ಮಂದಿ ಜೀವ ತೆತ್ತಿದ್ದಾರೆ. 2022 ರಲ್ಲಿ 47506 ಅಪಘಾತಗಳು ನಡೆದಿದ್ದು, 50,315 ಮಂದಿ ಬಲಿಯಾಗಿದ್ದಾರೆ.

**ದಿನ ನಿತ್ಯದ ಪೂರೈಕೆ ಮೇಲೆ ಪರಿಣಾಮ:**

ಚಾಲಕರ ಮುಷ್ಕರವು ದಿನ ನಿತ್ಯದ ಅಗತ್ಯ ವಸ್ತುಗಳ ಪೂರೈಕೆ ಮೇಲೆ ಪರಿಣಾಮ ಬೀರಬಹುದು ಎಂದು ಭಾವಿಸಲಾಗಿದೆ. ಅದರಲ್ಲೂ ಪೆಟ್ರೋಲ್ ಮತ್ತು ಡೀಸೆಲ್ ಪೂರೈಕೆ ವ್ಯತಿರಿಕ್ತವಾದರೆ ಕಷ್ಟವಾಗುತ್ತದೆ.

ದೊಡ್ಡ ದೊಡ್ಡ ವಿತರಕರು ಮತ್ತು ಪೆಟ್ರೋಲ್ ಪಂಪ್ ಮಾಲೀಕರು 3–4 ದಿನಗಳವರೆಗೆ ಹೆಚ್ಚುವರಿ ಸ್ಟಾಕ್ ಇಟ್ಟು ಕೊಳ್ಳುತ್ತಾರೆ. ಆದರೆ ಸಣ್ಣ ವಿತರಕರಿಗೆ ಇದು ಸಾಧ್ಯವಾಗುವುದಿಲ್ಲ ಎಂದು ಮಾರಾಟಗಾರರು ಅಭಿಪ್ರಾಯಪಡುತ್ತಾರೆ.

ದೇಶದಲ್ಲಿ ಶೇ.27ರಷ್ಟು ಟ್ರಕ್ ಡ್ರೈವರ್‌ಗಳ ಕೊರತೆಯಿದೆ. ಈ ಕಾನೂನು ಜಾರಿಯಾದರೆ ಸಮಸ್ಯೆ ಮತ್ತಷ್ಟು ಬಿಗಡಾಯಿಸುತ್ತಿದೆ ಎಂದು ಟ್ರಕ್ ಮಾಲೀಕರ ಸಂಘ ಆತಂಕ ವ್ಯಕ್ತಪಡಿಸಿದೆ.

# ಪೌರಕಾರ್ಮಿಕರಿಗೆ ನೇಮಕಾತಿ ಆದೇಶ ಪತ್ರ ವಿತರಣಾ ಸಮಾರಂಭ

## ಶೀಘ್ರದಲ್ಲಿ ಬಾಕಿ ಪೌರಕಾರ್ಮಿಕರ ನೇಮಕಾತಿ ಆದೇಶ: ಸಚಿವ ರಹೀಂ ಖಾನ್



ಬೆಳಗಾವಿ: ನಗರದ ಸ್ವಚ್ಛತೆ ಕಾಪಾಡಿ, ಹಿರಿಮೆ ಹೆಚ್ಚಿಸಲು ಪೌರ ಕಾರ್ಮಿಕರ ಪಾತ್ರ ಬಹಳಷ್ಟಿದೆ. ಅವರ ಹಿತ ಕಾಪಾಡುವುದು ಸರ್ಕಾರದ ಜವಾಬ್ದಾರಿಯಾಗಿದೆ. ರಾಜ್ಯದಲ್ಲಿ ಶೇಕಡಾ 70% ರಷ್ಟು ಪೌರ ಕಾರ್ಮಿಕರನ್ನು ಈಗಾಗಲೇ ಖಾಯಂಗೊಳಿಸಲಾಗಿದೆ. ಮುಂದಿನ ದಿನಗಳಲ್ಲಿ ಸರ್ಕಾರದ ಮಾರ್ಗಸೂಚಿ ಅನ್ವಯ ಹಂತ ಹಂತವಾಗಿ ಖಾಯಂಗೊಳಿಸಿ ನೇಮಕಾತಿ ಆದೇಶ ನೀಡಲಾಗುವುದು ಎಂದು ಪೌರಾಡಳಿತ ಹಾಗೂ ಹಜ್ ಸಚಿವ ರಹೀಂ ಖಾನ್ ಅವರು ಹೇಳಿದರು.

ನಗರಾಭಿವೃದ್ಧಿ ಇಲಾಖೆ, ಪೌರಾಡಳಿತ ನಿರ್ದೇಶನಾಲಯ ಬೆಂಗಳೂರು ಹಾಗೂ ಜಿಲ್ಲಾಡಳಿತ ಇವರ ಸಂಯುಕ್ತಾಶ್ರಯದಲ್ಲಿ ನಡೆದ ಬೆಳಗಾವಿ ಜಿಲ್ಲೆಯ ವಿವಿಧ ನಗರ ಸ್ಥಳೀಯ ಸಂಸ್ಥೆಗಳಲ್ಲಿ ನೇಮಕವಾದ ಪೌರಕಾರ್ಮಿಕರಿಗೆ ನೇಮಕಾತಿ ಆದೇಶ ಪತ್ರ ವಿತರಣಾ ಕಾರ್ಯಕ್ರಮದಲ್ಲಿ ಪೌರಕಾರ್ಮಿಕರ ನೇಮಕಾತಿ ಆದೇಶಪತ್ರಗಳನ್ನು ವಿತರಿಸಿ, ಅವರು ಮಾತನಾಡಿದರು.

ಜಿಲ್ಲೆಯಲ್ಲಿ ನಡೆದ ಚಳಿಗಾಲದ ಅಧಿವೇಶನ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಪೌರ ಕಾರ್ಮಿಕರ ಖಾಯಂಗೊಳಿಸಿರುವ ನೇಮಕಾತಿ ವಿತರಣೆ ಕಾರ್ಯಕ್ರಮದ ಆಯೋಜನೆ ಮಾಡಲು ದಿನಾಂಕ ನಿಗದಿ ಮಾಡಲಾಗಿತ್ತು. ಕಾರಣಾಂತರಗಳಿಂದ ಅದು ಸಾಧ್ಯವಾಗಲಿಲ್ಲ. ಆದರೆ ಇಂದು ಕೂಡ ಅತ್ಯುತ್ತಮವಾಗಿ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ ಎಂದು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇದಕ್ಕಿಂತ ಮುಂಚೆಯ ಅಧಿಕಾರದ ಅವಧಿಯಲ್ಲಿ ಮುಖ್ಯಮಂತ್ರಿ ಸ್ಥಾನದಲ್ಲಿದ್ದಾಗ ಈಶ್ವರ್ ಖಂಡ್ರೆ ಅವರು ಪೌರಾಡಳಿತ ಸಚಿವರಿದ್ದರು. ಅಂದಿನ ದಿನಗಳಲ್ಲಿ ಪೌರ ಕಾರ್ಮಿಕರನ್ನು ಖಾಯಂಗೊಳಿಸಲು ಸೂಚಿಸಿದ್ದರು. ಅದರಂತೆ ಸಿಂ ಸಿದ್ದರಾಮಯ್ಯ ಅವರು ಎಲ್ಲ ಪೌರಕಾರ್ಮಿಕರನ್ನು ಖಾಯಂಗೊಳಿಸಲು ಆದೇಶ ಹೊರಡಿಸಿದ್ದಾರೆ ಎಂದು ಹೇಳಿದರು.

ಶೀಘ್ರದಲ್ಲಿ ಎ -ಖಾತಾ, ಬಿ- ಖಾತಾ ಪ್ರಾರಂಭ: ಸುಮಾರು ಜನರು ಅನುಮತಿ, ಖಾತಾ, ಯೋಜನೆ ಇಲ್ಲದೆ ಮನೆಗಳನ್ನು ನಿರ್ಮಾಣ ಮಾಡಿದ್ದಾರೆ. ಅದರಿಂದ ಯಾವುದೇ ರೀತಿಯ ಆದಾಯ ತೆರಿಗೆ ಇಲ್ಲದಂತಾಗಿದೆ. ಅಂತಹ ಮನೆಗಳಿಗೆ ರಸ್ತೆ, ಚರಂಡಿ, ಕುಡಿಯುವ ನೀರು ಸೇರಿದಂತೆ ಮೂಲಭೂತ ಸೌಕರ್ಯ ಒದಗಿಸಬೇಕಿದೆ. ಈ ಕುರಿತು ವಿವಿಧ ಸಚಿವರ ಕಮಿಟಿ ರಚಿಸಲಾಗಿದೆ. ಈಗಾಗಲೇ ನಾಲ್ಕು ಬಾರಿ ನಡೆದ ಸಭೆಗಳಲ್ಲಿ ಎ ಖಾತಾ ಬಿ ಖಾತಾ ನೀಡಲು ತೀರ್ಮಾನಿಸಲಾಗಿದೆ. ಮುಂದಿನ ದಿನಗಳಲ್ಲಿ ಇಡೀ ರಾಜ್ಯದಲ್ಲಿ ಎ-ಖಾತಾ ಬಿ-ಖಾತ ನೀಡಲು ಪ್ರಾರಂಭಿಸಲಾಗುವುದು ಎಂದು ಪೌರಾಡಳಿತ ಮತ್ತು ಹಜ್ ಸಚಿವ ರಹೀಂ ಖಾನ್ ಅವರು ತಿಳಿಸಿದರು.

ಜಿಲ್ಲೆಯ ಪೌರ ಕಾರ್ಮಿಕರಿಗೆ ನೇರ ನೇಮಕಾತಿ ಆದೇಶ ನೀಡುತ್ತಿರುವುದು ಸಂತಸದ ವಿಷಯ. ಬಹಳ ದಿನಗಳಿಂದ ಪೌರ ಕಾರ್ಮಿಕರ ಖಾಯಂ ಗೊಳಿಸುವ ಕುರಿತು ಹೋರಾಟಗಳನ್ನು ನೋಡಿದ್ದೇವೆ. ಅವರ ಬೇಡಿಕೆಗಳನ್ನು ಈಡೇರಿಸುವ ಭಾಗ್ಯ ಇಂದು ನಮ್ಮದಾಗಿದೆ ಎಂದು ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ತಿಳಿಸಿದರು.

ಜಗತ್ತು ಎಷ್ಟೇ ಮುಂದುವರಿದರೂ ಪೌರಕಾರ್ಮಿಕರು ಚರಂಡಿಗಳ ಸ್ವಚ್ಛತೆಗೆ ಇಳಿದಿರುವುದನ್ನು ನಾವು ನೋಡಿದ್ದೇವೆ. ಬರುವ ದಿನಗಳಲ್ಲಿ ಸರ್ಕಾರ ಇದರಿಂದ ಮುಕ್ತಗೊಳಿಸುವ ನಿಟ್ಟಿನಲ್ಲಿ ಸೂಕ್ತ ಕ್ರಮ ತೆಗೆದುಕೊಳ್ಳಲಿದೆ. ಪೌರಕಾರ್ಮಿಕರ ಯಾವುದೇ ಸಮಸ್ಯೆಗೆ ಸ್ಪಂದಿಸಲು ಸರ್ಕಾರ ಜಿಲ್ಲಾಡಳಿತ ಸಿದ್ಧವಿದೆ. ಜಿಲ್ಲೆಯಲ್ಲಿ ಇನ್ನೂ ಸುಮಾರು 400 ಕ್ಕಿಂತ ಹೆಚ್ಚು ಪೌರಕಾರ್ಮಿಕರನ್ನು ಖಾಯಂಗೊಳಿಸಿ ಆದೇಶ ನೀಡಬೇಕಿದೆ. ನ್ಯಾಯಾಲಯದ ತಡೆಯಾಜ್ಞೆ ಆಗಿರುವ ಕಾರಣ ಸ್ವಲ್ಪ ವಿಳಂಬವಾಗಿದೆ. ಆದರೆ ಸರ್ಕಾರ ಇದರ ಕಡೆಗೆ ಗಮನಹರಿಸಿ ನ್ಯಾಯ ಒದಗಿಸುವ ಕಾರ್ಯ ಮಾಡಲಿದೆ ಎಂದು ಭರವಸೆ ನೀಡಿದರು.

ಹೆಚ್ಚಿನ ಸುರಕ್ಷಾ ಪರಿಕರಗಳ ಅಗತ್ಯ: ದೇಶದ ಜನತೆಯ ಆರೋಗ್ಯ, ನಗರ ಸೌಂದರ್ಯ ಕಾಪಾಡುವಲ್ಲಿ ಪೌರ ಕಾರ್ಮಿಕರು ಸಲ್ಲಿಸುತ್ತಿರುವ ಸೇವೆ ಶ್ಲಾಘನೀಯ. ಮುಂದಿನ ದಿನಗಳಲ್ಲಿ ಸರ್ಕಾರರಿಂದ ಅಗತ್ಯ ಸುರಕ್ಷಾ ಪರಿಕರಗಳು, ಸಮವಸ್ತ್ರ ಸೇರಿದಂತೆ ಇನ್ನೂ ಬಹಳಷ್ಟು ಸೌಲಭ್ಯ ಪೌರ ಕಾರ್ಮಿಕರಿಗೆ ನೀಡಲಾಗುವುದು ಎಂದು ಸಚಿವ ಜಾರಕಿಹೊಳಿ ಅವರು ಹೇಳಿದರು.

ಈ ವೇಳೆ ಮಾತನಾಡಿದ ಬೆಳಗಾವಿ ಉತ್ತರ ವಿಧಾನ ಸಭಾ ಮತ ಕ್ಷೇತ್ರದ ಶಾಸಕ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಸಕ ಆಸಿಫ್(ರಾಜು) ಸೇಠ್ ಅವರು ನಗರ ಪ್ರದೇಶದಲ್ಲಿ ಸ್ವಚ್ಛತೆಯನ್ನು ಕಾಪಾಡುವ ಪೌರಕಾರ್ಮಿಕರು ಸ್ವಚ್ಛತಾ ಸೈನಿಕರಾಗಿ ಕಾರ್ಯನಿರ್ವಹಿಸುತ್ತಾರೆ. ಸರ್ಕಾರ ನಿರಂತರ ನಿಮ್ಮ ಪರವಾಗಿದೆ. ಪೌರ ಕಾರ್ಮಿಕರಿಗೆ ಆಧಾರ ಕಲ್ಪಿಸಲು ಸರ್ಕಾರ ನೇಮಕಾತಿ ಆದೇಶ ನೀಡಿದೆ. ಪ್ರತಿ ಪೌರಕಾರ್ಮಿಕರು ತಮ್ಮ ಆರೋಗ್ಯ ಕಾಪಾಡಿಕೊಂಡು ಸುರಕ್ಷಾ ಸಾಧನಗಳನ್ನು ಬಳಸಿ ಕಾರ್ಯನಿರ್ವಹಿಸಬೇಕು. ಸಮಾಜದ ಸ್ವಾಸ್ಥ್ಯ ಕಾಪಾಡುವ ನಿಮ್ಮ ಕಾರ್ಯ ಶ್ಲಾಘನೀಯವಾಗಿದ್ದು, ನಿಮ್ಮ ವೈಯಕ್ತಿಕ ಆರೋಗ್ಯವನ್ನು ಸಧೃಡವಾಗಿಟ್ಟುಕೊಳ್ಳಬೇಕು. ಪೌರ ಕಾರ್ಮಿಕರ ಯಾವುದೇ ಸಮಸ್ಯೆ ಇದ್ದರೂ ತಕ್ಷಣ ಸ್ಪಂದಿಸಲಾಗುವುದು ಎಂದು ಶಾಸಕ ಆಸೀಫ್ (ರಾಜು) ಸೇಠ್ ಅವರು ಹೇಳಿದರು.

ನಿಗದಿತ ದಿನಾಂಕದೊಳಗೆ ವೇತನ ಪಾವತಿಸಿ: ವಿಧಾನ ಪರಿಷತ್ ಸದಸ್ಯ ಪ್ರಕಾಶ ಹುಕ್ಕೇರಿ ಅವರು ಮಾತನಾಡಿ ಪೌರ ಕಾರ್ಮಿಕರು ಸ್ವಚ್ಛತೆಗೆ ನಿರಂತರ ಶ್ರಮಿಸುತ್ತಿದ್ದಾರೆ. ಅವರಿಗೆ ಪ್ರತಿ ತಿಂಗಳು ನಿಗದಿತ ದಿನಾಂಕದೊಳಗೆ ವೇತನ ಪಾವತಿಸಬೇಕು ಈ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳು ಸಹಕಾರ ನೀಡಬೇಕು ಎಂದು ಹೇಳಿದರು.

ಸುಮಾರು 368 ಪೌರಕಾರ್ಮಿಕರಿಗೆ ನೇಮಕಾತಿ ಆದೇಶ ಪ್ರತಿ ನೀಡಲಾಗಿದೆ. ಜಿಲ್ಲೆಯ ಸ್ವಚ್ಛತೆ ಕಾಪಾಡುವುದರ ಜೊತೆಗೆ ಕೋವಿಡ್ ಸಮಯದಲ್ಲಿ ತಮ್ಮ ಜೀವ ಲೆಕ್ಕಿಸದೆ ಪೌರ ಕಾರ್ಮಿಕರು ಜನತೆಯ ಸೇವೆ ಮಾಡಿದ್ದಾರೆ. ಸರ್ಕಾರದ ಹೊಸ ಮಾರ್ಗಸೂಚಿಯಂತೆ ಎಲ್ಲಾ ಪೌರ ಕಾರ್ಮಿಕರಿಗೆ ಮತ್ತೆ ನೇಮಕಾತಿ ಆದೇಶ ಪತ್ರಗಳನ್ನು ನೀಡಲಾಗುವುದು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಹೇಳಿದರು.

ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಮಲ್ಲಿಕಾರ್ಜುನ ಕಲಾದಗಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

ನೇಮಕಾತಿ ಆದೇಶ ಪತ್ರಗಳ ವಿತರಣೆ: ಇದಕ್ಕೂ ಮುಂಚೆ ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ, ಪೌರಾಡಳಿತ ಮತ್ತು ಹಜ್ ಸಚಿವ ರಹೀಂ ಖಾನ್, ಬೆಳಗಾವಿ ಉತ್ತರ ವಿಧಾನ ಸಭಾ ಮತ ಕ್ಷೇತ್ರದ ಶಾಸಕ ಆಸೀಫ್ (ರಾಜು) ಸೇಠ್, ವಿಧಾನ ಪರಿಷತ್ ಸದಸ್ಯ ಪ್ರಕಾಶ ಹುಕ್ಕೇರಿ, ಚನ್ನರಾಮ ಹಟ್ಟಿಹೊಳಿ ಅವರು ಮಹಾನಗರ ಪಾಲಿಕೆ ಹಾಗೂ ಜಿಲ್ಲೆಯ ವಿವಿಧ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ನೇಮಕಾತಿ ಆದೇಶ ಪತ್ರಗಳನ್ನು ವಿತರಿಸಿದರು.

ಬೆಳಗಾವಿ ಮಹಾನಗರಪಾಲಿಕೆಯ 155 ಮತ್ತು ಬೆಳಗಾವಿ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ 213 ಜನ ಸೇರಿದಂತೆ ಒಟ್ಟು 368 ಪೌರಕಾರ್ಮಿಕರನ್ನು ಸರಕಾರಿ ನೌಕರರನ್ನಾಗಿ ನೇಮಕಾತಿ ಮಾಡಲಾದ ನೇಮಕಾತಿ ಆದೇಶಪತ್ರಗಳನ್ನು ವಿತರಿಸಲಾಯಿತು. ಅದೇ ರೀತಿಯಲ್ಲಿ ಪೌರ ಕಾರ್ಮಿಕರ ನಿವೇಶನ ಸ್ವಾಧೀನದ ಆದೇಶ ಪತ್ರಗಳನ್ನು ಕೂಡ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ನಿತೇಶ್ ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಭೀಮಾಶಂಕರ್ ಗುಳೇದ್, ಬೆಳಗಾವಿ ಮಹಾಪೌರರಾದ ಶೋಭಾ ಸೋಮನಾಚೆ, ಉಪ ಮಹಾಪೌರರಾದ ರೇಷ್ಮಾ ಪಾಟೀಲ, ಮಹಾನಗರ ಪಾಲಿಕೆ ಆಯುಕ್ತರಾದ ಅಶೋಕ ದುಡಗುಂಟಿ, ಉಪ ಆಯುಕ್ತೆ ರೇಷ್ಮಾ ತಾಳಿಕೋಟಿ, ಹಾಗೂ ನಗರ ಸೇವಕರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಲೋಕಾಯುಕ್ತ ಅಧಿಕಾರಿ ಹೆಸರಲ್ಲಿ ಹಣ ವಸೂಲಿ ಮಾಡುತ್ತಿದ್ದ ವಂಚಕ ಸೆರೆ



ಬೆಂಗಳೂರು: ಸಿನಿಮಾ ನೋಡಿ ಪ್ರೇರಣೆಗೊಂಡು ಲೋಕಾಯುಕ್ತ ಅಧಿಕಾರಿ ಎಂದು ಹೇಳಿ ಹಣಕ್ಕಾಗಿ ಬೇಡಿಕೆ ಇಟ್ಟು ಸರ್ಕಾರಿ ಅಧಿಕಾರಿಗಳು ಕೆಲಸ ಮಾಡದಂತೆ ಮಾನಸಿಕವಾಗಿ ತೊಂದರೆ ನೀಡುತ್ತಿದ್ದ ವ್ಯಕ್ತಿಯನ್ನು ಸಿಸಿಬಿ ಪೊಲೀಸರು ಬಂಧಿಸಿದ್ದಾರೆ.

ಆಂಧ್ರಪ್ರದೇಶ ಮೂಲದ ಶ್ರೀನಾಥ ರೆಡ್ಡಿ(34) ಬಂಧಿತ ವಂಚಕ. ಈತ 10ನೇ ತರಗತಿ ವ್ಯಾಸಂಗ ಮಾಡಿದ್ದು, ಆಂಧ್ರಪ್ರದೇಶದಲ್ಲೂ ಸರ್ಕಾರಿ ನೌಕರರಿಗೆ ಇದೇ ರೀತಿ ಕರೆ ಮಾಡಿ ಬೆದರಿಸಿ ಹಣ ವಸೂಲಿ ಮಾಡಿರುವುದು ತನಿಖೆಯಿಂದ ತಿಳಿದುಬಂದಿದೆ. ಅನಾ ಮಧೇಯ ವ್ಯಕ್ತಿಯೊಬ್ಬ ಸರ್ಕಾರಿ ಅಧಿಕಾರಿಯೊಬ್ಬರಿಗೆ ಮೊಬೈಲ್ನಿಂದ ಕರೆ ಮಾಡಿ ತಾನು ಲೋಕಾಯುಕ್ತ ಇನ್ಸ್ಪೆಕ್ಟರ್ ಚಂದ್ರಶೇಖರ್ ಮಾತನಾಡುತ್ತಿರುವುದಾಗಿ ಪರಿಚಯಿಸಿಕೊಂಡು, ನಮ್ಮ ಎಡಿಜಿಪಿ ಸಾಹೇಬರು ಮಾತನಾಡುತ್ತಾರೆಂದು ಹೇಳಿ ನಿಮ್ಮ ವಿರುದ್ಧ ಲೋಕಾಯುಕ್ತದಲ್ಲಿ ಪಿಟಿಶನ್ ಇರುತ್ತದೆ. ಅದನ್ನು ವಿಚಾರಣೆ ಮಾಡದೆ ಮುಕ್ತಾಯಗೊಳಿಸಬೇಕಾದರೆ ಹಣ ನೀಡಬೇಕಾಗುತ್ತದೆ ಎಂದು ಹೆದರಿಸಿದ್ದಾನೆ.

ನೀವು ಹಣ ಕೊಟ್ಟರೆ ಪಿಟಿಶನ್ನನ್ನು ನಮ್ಮ ಟೆಕ್ನಿಕಲ್ ಟೀಮ್ನಿಂದ ವಿಚಾರಣೆ ನಡೆಸಿ ಬಿ ರಿಪೋರ್ಟ್ ಸಲ್ಲಿಸಲಾಗುವುದು ಎಂದು ಹೇಳಿ ಹಣಕ್ಕಾಗಿ ಬೇಡಿಕೆ ಇಟ್ಟು ಸರ್ಕಾರಿ ಅಧಿಕಾರಿಗಳು ಕೆಲಸ ಮಾಡದಂತೆ ಮಾನಸಿಕವಾಗಿ ತೊಂದರೆ ನೀಡುತ್ತಿದ್ದನು. ಈ ಅನಾಮಧೇಯ ವ್ಯಕ್ತಿಯ ವಿರುದ್ಧ ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಸಿಸಿಬಿ ಪೊಲೀಸರು ತನಿಖೆಯನ್ನು ಮುಂದುವರೆಸಿ ಅನಾಮಧೇಯ ವ್ಯಕ್ತಿಯ ಬಗ್ಗೆ ಹಲವು ಮಾಹಿತಿಗಳನ್ನು ಕಲೆ ಹಾಕಿ ವಶಕ್ಕೆ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ. ಆರೋಪಿಯನ್ನು ವಿಚಾರಣೆಗೊಳಪಡಿಸಿದಾಗ, ತಾನು ಸಿನಿಮಾದಿಂದ ಪ್ರೇರಣೆಗೊಂಡು ಈ ರೀತಿಯ ಅಪರಾಧ ಕೃತ್ಯಗಳನ್ನು ಮಾಡಿದ್ದಾಗಿ ಒಪ್ಪಿಕೊಂಡಿದ್ದಾನೆ.

ಅಲ್ಲದೆ ಎಡಿಜಿಪಿ ಕೇಶವರಾವ್ ಅವರ ಹೆಸರಿನಲ್ಲಿ ಸರ್ಕಾರಿ ಅಧಿಕಾರಿಗಳಿಗೆ ಕರೆ ಮಾಡಿ ಬೆದರಿಸಿ ಹಣ ವಸೂಲಿ ಮಾಡಲು ಪ್ರಯತ್ನಿಸಿದ್ದಾಗಿ ವಿಚಾರಣೆ ವೇಳೆ ಬಾಯ್ಬಿಟ್ಟಿದ್ದಾನೆ. ಆರೋಪಿಯು ನಗರದ ಸಿದ್ದಾಪುರ, ಹೈಗ್ರೌಂಡ್ಸ್ ಮತ್ತು ಆಂಧ್ರಪ್ರದೇಶದ ಅನಂತಪುರ ಜಿಲ್ಲೆಯ ಟೂ ಟೌನ್ ಹಾಗೂ ರಾಜ್ ಮಂಡ್ರಿಯಾದ ತ್ರಿ ಟೌನ್ ಪೊಲೀಸ್ ಠಾಣೆಗಳಲ್ಲಿ ಲೋಕಾಯುಕ್ತ ಅಧಿಕಾರಿ ಎಂದು ಹೇಳಿಕೊಂಡು ಹಣ ವಸೂಲಿ ಮಾಡಿದ ಪ್ರಕರಣಗಳು ದಾಖಲಾಗಿರುತ್ತವೆ.

ಈತನ ವಿರುದ್ಧ ನಗರದಲ್ಲಿನ ಬೇಗೂರು, ಎಲೆಕ್ಟ್ರಾನಿಕ್ ಸಿಟಿ, ಅತ್ತಿಬೆಲೆ, ಹೆಬ್ಬಗೋಡಿ, ಜಿಗಣಿ, ಸೂರ್ಯಸಿಟಿ, ಕೋಲಾರ ಟೌನ್ಗಳಲ್ಲಿ ಮನೆ ಕಳವು ಪ್ರಕರಣಗಳು ದಾಖಲಾಗಿರುತ್ತವೆ. ಈ ಕಾರ್ಯಾಚರಣೆಯನ್ನು ಬೆಂಗಳೂರುನಗರ ಉಪಪೊಲೀಸ್ ಆಯುಕ್ತರು ಅಪರಾಧ-2 ಅವರ ಮಾರ್ಗದರ್ಶನದಲ್ಲಿ ಸಂಘಟಿತ ಅಪರಾಧ ದಳ(ಪೂರ್ವ) ಅಧಿಕಾರಿ ಮತ್ತು ಸಿಬ್ಬಂದಿಗಳು ಬೇಸುವಲ್ಲಿ ಯಶಸ್ವಿಯಾಗಿದ್ದಾರೆ.

# ಬೆಳಗಾವಿ: ಪ್ರೀತಿ ವಿಚಾರಕ್ಕೆ ಗಲಾಟೆ

## ಗ್ರಾಮಕ್ಕೆ ನುಗ್ಗಿ ಅಟ್ಟಹಾಸ ಮೆರೆದ 30 ಜನ



ಬೆಳಗಾವಿ: ಸಿನಿಮೀಯ ರೀತಿಯಲ್ಲಿ ಗ್ರಾಮಕ್ಕೆ ನುಗ್ಗಿ ಪುಂಡರು ಅಟ್ಟಹಾಸ ಮೆರೆದಿರುವ ಘಟನೆ ಬೆಳಗಾವಿ ತಾಲೂಕಿನ ನಾವಗೆ ಗ್ರಾಮದಲ್ಲಿ ಸೋಮವಾರ ರಾತ್ರಿ ನಡೆದಿದೆ.

ಪ್ರಕರಣ ಸಂಬಂಧ ಬೆಳಗಾವಿ ಗ್ರಾಮೀಣ ಠಾಣೆ ಪೊಲೀಸರು 6 ಕ್ಕೂ ಹೆಚ್ಚು ಆರೋಪಿಗಳನ್ನು ಬಂಧಿಸಿದ್ದಾರೆ. ಬಂದೂಕು, ತಲ್ವಾರ್, ರಾಡ್ಗಳ ಸಮೇತ ಬಂದಿದ್ದ 30ಕ್ಕೂ ಹೆಚ್ಚು ಮುಸುಕುಧಾರಿಗಳು ಗ್ರಾಮದ ನಾಲ್ಕು ಮನೆಗಳ ಮೇಲೆ ಕಲ್ಲು ತೂರಾಟ ನಡೆಸಿ ದಾಂಧಲೆ ಮಾಡಿದ್ದಾರೆ. ಇದರಿಂದ ಮನೆಯ ಕಿಟಕಿ ಗಾಜುಗಳು, ಗೋಡೆಗೆ ಅಂಟಿಸಿದ್ದ ಟೈಲ್ಸ್ ಪುಡಿ ಪುಡಿಯಾಗಿವೆ.

ಅಲ್ಲದೆ ಮನೆ ಮುಂದೆ ನಿಲ್ಲಿಸಿದ್ದ ಮೂರು ಕಾರು, ಆರು ಬೈಕ್ ಜಖಂಗೊಳಿಸಿದ್ದಾರೆ. ಈ ಮುಸುಕುಧಾರಿಗಳು ಮಾಜಿ ಮತ್ತು ಹಾಲಿ ಗ್ರಾಮ ಪಂಚಾಯತಿ ಸದಸ್ಯರ ಮನೆ ಮೇಲೂ ದಾಳಿ ಮಾಡಿದ್ದಾರೆ.

ಡಿ. 31ರ ರಾತ್ರಿ ಪ್ರೀತಿ ವಿಚಾರವಾಗಿ ಬಾದರವಾಡಿ ಮತ್ತು ನಾವಗೆ ಗ್ರಾಮದ ಯುವಕರ ನಡುವೆ ಗಲಾಟೆ ನಡೆದಿದೆ. ಈ ನಾವಗೆ ಗ್ರಾಮದ ಮುಖಂಡರು ಮತ್ತು ಪಂಚರು ಮಧ್ಯಪ್ರವೇಶಿಸಿ, ಯುವಕರಿಗೆ ಎರಡೇಟು ನೀಡಿ ಜಗಳ ಬಿಡಿಸಿದ್ದರು.

ಇದಾದ ಬಳಿಕ ನಾವಗೆ ಗ್ರಾಮದ ಯುವಕರು ಬಾದರವಾಡಿ ಯುವಕರಿಗೆ ನಿಮ್ಮನ್ನು ನೋಡಿಕೊಳ್ಳುವುದಾಗಿ ವಾರ್ನಿಂಗ್ ಮಾಡಿದ್ದರು. ಈ ಹಿನ್ನೆಲೆಯಲ್ಲಿ ಬಾದರವಾಡಿ ಗ್ರಾಮದ ಯುವಕರು ನಾವಗೆ ಗ್ರಾಮಕ್ಕೆ ನುಗ್ಗಿ ದಾಂದಲೆ ನಡೆಸಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ.

ಪುಂಡರ ಅಟ್ಟಹಾಸ ಕಂಡು ಗ್ರಾಮದ ಜನರು ಬೆಚ್ಚಿ ಬಿದ್ದಿದ್ದಾರೆ. ಬೆಳಗಾವಿ ಗ್ರಾಮೀಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ. ಸ್ಥಳಕ್ಕೆ ಡಿಸಿಪಿ ರೋಹನ್ ಜಗದೀಶ್, ಇಬ್ಬರು ಎಸಿಪಿ ಭೇಟಿ, ಪರಿಶೀಲನೆ ನಡೆಸಿದ್ದಾರೆ.

ಘಟನೆ ಸಂಬಂಧ ಡಿಸಿಪಿ ರೋಹನ್ ಜಗದೀಶ್ ಮಾತನಾಡಿ, ಸಂತ್ರಸ್ತರ ಮನೆಗಳಿಗೆ ಭೇಟಿ ನೀಡಿ ಘಟನೆ ಬಗ್ಗೆ ಮಾಹಿತಿ ಪಡೆದಿದ್ದೇವೆ. ಗಲಾಟೆ ಬಗ್ಗೆ ಗ್ರಾಮಸ್ಥರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಕೂಡಲೇ ನಮ್ಮ ಸಿಬ್ಬಂದಿ ಬಂದು ಪರಿಸ್ಥಿತಿ ನಿಯಂತ್ರಿಸಿದ್ದಾರೆ.

ಘಟನೆ ಬಗ್ಗೆ ಸಂಪೂರ್ಣ ಮಾಹಿತಿ ಸಂಗ್ರಹ ಮಾಡಿದ್ದೇವೆ. ಆರೋಪಿಗಳ ಪತ್ತೆಗೆ ಮೂರು ಪ್ರತ್ಯೇಕ ತಂಡ ರಚಿಸಲಾಗಿದೆ. ಗ್ರಾಮದಲ್ಲಿ ಕೆಎಸ್ಆರ್ಪಿ, ಸಿಎಆರ್ ತುಕಡಿ ನಿಯೋಜಿಸಲಾಗಿದೆ. ಗ್ರಾಮಸ್ಥರು ಯಾವುದೇ ಕಾರಣಕ್ಕೂ ಆತಂಕಪಡುವ ಅಗತ್ಯವಿಲ್ಲ. ಬೆಳಗಾವಿ ಗ್ರಾಮೀಣ ಠಾಣೆಯಲ್ಲಿ ದೂರು ದಾಖಲಿಸಿಕೊಂಡು ತನಿಖೆ ಮಾಡುತ್ತೇವೆ ಎಂದು ನಾವಗೆ ಗ್ರಾಮದಲ್ಲಿ ಹೇಳಿದರು.

# ಅಪ್ರೇಂಟಿಸ್ ಪೂರ್ಣಗೊಳಿಸದ ಅಭ್ಯರ್ಥಿಗಳು ಅಗತ್ಯ ದಾಖಲಾತಿ ಸಲ್ಲಿಸಲು ಸೂಚನೆ

ಬೆಳಗಾವಿ: ಬೆಳಗಾವಿ ಜಿಲ್ಲೆಯಲ್ಲಿರುವ ಉದ್ಯಮೆಗಳಲ್ಲಿ ಖ.ಖಿ.ಖ. ಮುಗಿಸಿದನಂತರ ಒಚಿಥಿ 2011 ರಿಂದ April 2018 ರವರೆಗೆ Apprentice ಮಾಡಿರುವ ಅಭ್ಯರ್ಥಿಗಳಿಗೆ ರಾಷ್ಟ್ರೀಯ ಶಿಶಿಕ್ಷು ಪ್ರಮಾಣ ಪತ್ರ (Apprentice Certificate) ತಯಾರಿಸಲು ಕೆಲವೊಂದು ಅಭ್ಯರ್ಥಿಗಳ (ತಾಯಿಯ ಹೆಸರು,ಜನ್ಮ ದಿನಾಂಕ ಇತ್ಯಾದಿ) ದಾಖಲಾತಿಗಳ ಅವಶ್ಯಕತೆ ಇದ್ದು, ಅವುಗಳು ಇಲಾಖೆಯಲ್ಲಿ ಲಭ್ಯವಿಲ್ಲದ್ದರಿಂದ ಜ. 06 2024 ರ ಒಳಗೆ ಸಲ್ಲಿಬೇಕು.

ಹೆಚ್ಚಿನ ಮಾಹಿತಿಗಾಗಿ ದೂ.ಸಂಖ್ಯೆ 9845843248, 9448907736 ಗೆ ಸಂಪರ್ಕಿಸಬಹುದು, ಒಂದು ವೇಳೆ ದಾಖಲೆಗಳನ್ನು ಸಲ್ಲಿಸದಿದ್ದರೆ ಇಲಾಖೆ ಅಥವಾ ಸಂಸ್ಥೆ ಜವಾಬ್ದಾರರಾಗಿರುವದಿಲ್ಲ ಎಂದು ಬೆಳಗಾವಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭೂ ಕಂದಾಯ ಬಾಕಿ ಪ್ರಕರಣ ಹರಾಜು ಪ್ರಕ್ರಿಯೆ

ಬೆಳಗಾವಿ: ಮಾನ್ಯ 4ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಬೆಳಗಾವಿ ಇವರಲ್ಲಿನ ಪರಶುರಾಮ ಅಲಿಯಸ ಪರಸಪ್ಪ. ಬಸಲಿಂಗಪ್ಪ ಜಂಗಳಿ ಸಾ:ಮಾಸ್ತಮರ್ಡಿ ಇವರಿಂದ 19,18,592 ರೂ. ಗಳ ಮೊತ್ತವು ಬಾಕಿ ಇರುವುದರಿಂದ ಮೊತ್ತವನ್ನು ಭೂ ಕಂದಾಯ ಬಾಕಿ ಎಂದು ಪರಿಗಣಿಸಿ, ವಸೂಲಿ ಮಾಡಲು ನ್ಯಾಯಾಲಯವು ಆದೇಶ ನೀಡಿರುತ್ತದೆ.

ಸದರಿ ಮೊತ್ತದ ವಸೂಲಾತಿಗಾಗಿ ಮಾಸ್ತಮರಡಿ ಗ್ರಾಮದ ಬಾಕೀದಾರರ ಮಾಕ್ಕಿಯ ಆಸ್ತಿಯನ್ನು ಜ.19 2024 ರಂದು ಬೆಳಿಗ್ಗೆ 11 ಘಂಟೆಗೆ ಬೆಳಗಾವಿ ತಹಸೀಲ್ದಾರ ಅಧಿಕಾರ ಪಡೆದ ಅಧಿಕಾರಿಯ ಸಮ್ಮುಖದಲ್ಲಿ ಬಹಿರಂಗ ಹರಾಜು ಮಾಡುವುದರ ಮೂಲಕ ವಸೂಲಾತಿ ಕೈಕೊಳ್ಳಲಾಗುವುದು ಆಸಕ್ತಿಯುಳ್ಳ ವ್ಯಕ್ತಿಗಳು ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಬೆಳಗಾವಿ ತಹಸೀಲ್ದಾರ ಕಾರ್ಯಾಲಯವನ್ನು ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ ಎಂದು ಬೆಳಗಾವಿ ತಹಸೀಲ್ದಾರ ಪ್ರಕಟಣೆಯಲ್ಲಿ ತಿಳಸಿದ್ದಾರೆ.

# ಬಸ್-ಜೀಪ್ ನಡುವೆ ಅಪಘಾತ: ನಾಲ್ವರು ಸಾವು



ಮೈಸೂರು: KSRTC ಬಸ್, ಜೀಪ್ ನಡುವೆ ಡಿಕ್ಕಿ ಸಂಭವಿಸಿದ್ದು, ಸ್ಥಳದಲ್ಲೇ ನಾಲ್ವರು ಸಾವನ್ನಪ್ಪಿದ ಘಟನೆ ಮೈಸೂರು ಜಿಲ್ಲೆಯ ಹುಣಸೂರಿನ RTO ಕಚೇರಿ ಬಳಿ ನಡೆದಿದೆ. ರಾಜೇಶ್, ಲೋಕೇಶ್, ಸೋಮೇಶ್ ಮತ್ತು ಕಾರು ಚಾಲಕ ಸಾವನ್ನಪ್ಪಿದ್ದಾರೆ. ಸಾರಿಗೆ ಬಸ್ ವಿರಾಜಪೇಟೆಯಿಂದ ಬೆಂಗಳೂರಿನ ಕಡೆಗೆ ಬರುತ್ತಿತ್ತು. ಅತ್ತ ಜೀಪ್ನಲ್ಲಿದ್ದವರು ಶುಂಠಿ ಕೀಳಲು ಹೋಗುತ್ತಿದ್ದರು. ಈ ವೇಳೆ ಅಪಘಾತ ಸಂಭವಿಸಿದೆ. ಮೃತರು ಅಂತರಸಂತೆ ಜಿ.ಆರ್.ಕಾಲೋನಿ ನಿವಾಸಿಗಳಾಗಿದ್ದು, ಹುಣಸೂರು ಟೌನ್ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಬದಲಾಗುತ್ತಿರುವ ಮಾರುಕಟ್ಟೆಯ ಹೊಸ ಸವಾಲು ಎದುರಿಸಲು ಸನ್ನದ್ದರಾಗಿ: ಜುವಳಿ ಸಲಹೆ



ಬೆಳಗಾವಿ: ಇಂದಿನ ಜಾಗತಿಕ ಮಾರುಕಟ್ಟೆಯು ಅತೀ ವೇಗವಾಗಿ ಮತ್ತು ಹೊಸ ದಿಕ್ಕಿನಲ್ಲಿ ಬೆಳೆಯುತ್ತಿದ್ದು, ಹೊಸ ಮಾರುಕಟ್ಟೆಯಲ್ಲಿ ಎದುರಾಗುವ ಹೊಸ ಹೊಸ ಸವಾಲುಗಳನ್ನು ಎದುರಿಸಲು ವಿದ್ಯಾರ್ಥಿಗಳು ಸನ್ನದ್ದರಾಗಬೇಕೆಂದು ಬಿಸಿಸಿಐ ಮಾಜಿ ಅಧ್ಯಕ್ಷರು ಹಾಗೂ ರವಿ ಇಂಡಸ್ಟ್ರೀಜ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ರೋಹನ ಜುವಳಿ ಅವರು ಅಭಿಪ್ರಾಯಪಟ್ಟರು.

ಭರತೇಶ ಶಿಕ್ಷಣ ಸಂಸ್ಥೆಯ ಗ್ಲೋಬಲ ಬಿಜಿನೆಸ್ ಸ್ಕೂಲ ಮಹಾವಿದ್ಯಾಲಯದಲ್ಲಿ ಪದವಿ ದಿನ ಅಚರಣೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕಠಿಣ ಪರಿಶ್ರಮ, ಹೊಸ ಸವಾಲು ಸ್ವೀಕರಿಸುವ ಮಾನಸೀಕತೆ, ಉತ್ತಮ ನಿರ್ವಹಣಾ ತಂಡ, ಹಾಗೂ ಗ್ರಾಹಕರೊಂದಿಗೆ ಉತ್ತಮ ಸಂಬಂಧಗಳು ನಿಮ್ಮನ್ನು ಯಶಸ್ವಿಯಾಗಿ ಮಾಡಬಲ್ಲವು. ಈ ಎಲ್ಲ ಗುಣಗಳನ್ನು ವಿದ್ಯಾರ್ಥಿಗಳು ಅಳವಡಿಸಿಕೊಳ್ಳಬೇಕು ಎಂದು ಹೇಳಿದ ಅವರು, ನಿಮ್ಮಲ್ಲಿರುವ ಕೌಶಲ್ಯಗಳ ಸದ್ಬಳಕೆ ಮಾಡಿಕೊಳ್ಳಬೇಕೆಂದು ಅವರು ಹೇಳಿದರು.

ಸಮಾರಂಭಕ್ಕೆ ಮುಖ್ಯ ಅತಿಥಿಯಾಗಿ ಆಗಮಿಸಿದ ಗ್ಲೋ ಕಾಸ್ಪ ಫೌಂಡರ್ಸ್ ವ್ಯವಸ್ಥಾಪಕ ನಿರ್ದೇಶಕ ಆಶಾಲತಾ ಮಾಲಿಯಾ ಅವರು ಮಾತನಾಡಿ, ವಿಭಿನ್ನವಾದ ಮಾರುಕಟ್ಟೆಯ ಸವಾಲುಗಳು ದಿನನಿತ್ಯದ ಹೊಸ ಕಲಿಕಾ ಪಾಠಕೇಂದ್ರವಾಗಿದೆ. ಹಾಗಾಗಿ ಪದವಿ ಪೂರ್ವ ಶೀಕ್ಷಣ ಪೂರೈಸಿದರೂ ಸಹ ನಿರಂತರ ಕಲಿಕೆಯ ಅಭ್ಯಾಸವನ್ನು ರೂಢಿಸಿಕೊಳ್ಳಬೇಕೆಂದು ಅವರು ಹೇಳಿದರು.

ಸಮಾರಂಭದ ಅಧ್ಯಕ್ಷತೆಯನ್ನು ಮಹಾವಿದ್ಯಾಲಯ ಆಡಳಿತ ಮಂಡಳಿಯ ಸದಸ್ಯ ಮಹಾವೀರ ಉಪಾಧ್ಯೆ ಅವರು ಮಾತನಾಡಿ, ಪ್ರಸ್ತುತ ಮಾರುಕಟ್ಟೆ ಹಾಗೂ ಇಂದಿನ ಆಡಳಿತಾತ್ಮಕ ವ್ಯವಹಾರದ ಕುರಿತು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡಿದರು.

ಸಮಾರಂಭದಲ್ಲಿ ಡಾ. ಪದ್ಮಪ್ರೀಯಾ ಕತಗಲ್ ಅವರು ವಾರ್ಷಿಕ ವರದಿ ವಾಚನ ಮಾಡಿದರು. ಮಹಾವಿದ್ಯಾಲಯದ ಆಡಳಿತಾಧಿಕಾರಿ ಡಾ. ಪ್ರಸಾದ ದಡ್ಡಿಕರ ಅವರು ವಿದ್ಯಾರ್ಥಿಗಳಿಗೆ ಪ್ರತಿಜ್ಞಾ ವಿಧಿ ಬೋಧಿಸಿದರು.

ವಿದ್ಯಾರ್ಥಿನಿಗಳಾದ ಸನಮ್ ಮತ್ತು ವರ್ಷಾ ಇವರು 2021-23 ಶೈಕ್ಷಣಿಕ ವರ್ಷದ ಅತ್ಯುತ್ತಮ ವಿದ್ಯಾರ್ಥಿಗಳೆಂದು ಹಾಗೂ ವಿದ್ಯಾರ್ಥಿ ಮಂಜುನಾಥ ಅತ್ಯುತ್ತಮ ಗ್ರಂಥಾಲಯ ಬಳಕೆದಾರ ಆಯ್ಕೆಯಾದ ಹಿನ್ನಲೆಯಲ್ಲಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

# ಗ್ರಾಮಸ್ಥರಲ್ಲಿ ಧೈರ್ಯ ತುಂಬಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್



ಬೆಳಗಾವಿ: ಗಲಾಟೆ ಹಿನ್ನೆಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ನಾವಗೆ ಗ್ರಾಮಕ್ಕೆ ತೆರಳಿ, ಘಟನೆಯ ಸಂಪೂರ್ಣ ಮಾಹಿತಿ ಪಡೆದು, ಗ್ರಾಮಸ್ಥರಲ್ಲಿ ಧೈರ್ಯ ತುಂಬಿದರು.

ಸೋಮವಾರ ರಾತ್ರಿ ಘಟನೆ ನಡೆದಿರುವ ಕುರಿತು ಸುದ್ದಿ ತಿಳಿದ ಲಕ್ಷ್ಮೀ ಹೆಬ್ಬಾಳಕರ್, ಗ್ರಾಮದ ಮನೆ ಮನೆಗೆ ತೆರಳಿ ಎಲ್ಲರಿಂದ ಮಾಹಿತಿ ಸಂಗ್ರಹಿಸಿದರಲ್ಲದೆ, ಅವರಲ್ಲಿ ಧೈರ್ಯ ತುಂಬುವ ಕೆಲಸ ಮಾಡಿದರು. ಘಟನೆಗೆ ಕಾರಣ ಹಾಗೂ ನಂತರ ತೆಗೆದುಕೊಂಡಿರುವ ಕ್ರಮಗಳ ಕುರಿತು ಪೊಲೀಸರಿಂದ ಸಹ ಸಚಿವರು ಮಾಹಿತಿ ಪಡೆದರು.

ನಂತರ ಮಾತನಾಡಿದ ಲಕ್ಷ್ಮೀ ಹೆಬ್ಬಾಳಕರ್, ಶಾಲೆ, ಕಾಲೇಜಿಗೆ ತೆರಳುವ ಅಪ್ರಾಪ್ತ ಮಕ್ಕಳು ಸಿಟ್ಟಿನ ಕೈಯಲ್ಲಿ ಬುದ್ಧಿ ಕೊಟ್ಟಿದ್ದರಿಂದ ಈ ಘಟನೆ ನಡೆದಿದೆ. ಎರಡೂ ಗ್ರಾಮಗಳ ಹಿರಿಯರನ್ನು ಕರೆಸಿ ಮಾತುಕತೆ ನಡೆಸಿ ಮುಂದೆ ಇಂತಹ ಘಟನೆ ನಡೆಯದಂತೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸುದ್ದಿ ತಿಳಿದ ತಕ್ಷಣ ಎಲ್ಲ ಕಾರ್ಯಕ್ರಮಗಳನ್ನು ಬದಿಗಿಟ್ಟು ಇಲ್ಲಿಗೆ ಬದಿದ್ದೇನೆ. ಮಕ್ಕಳ ಭವಿಷ್ಯದ ದೃಷ್ಟಿಯಿಂದ ನಾನೇ ಮುಂದಾಗಿ ನಿಂತು, ಘಟನೆಯ ಸಂಪೂರ್ಣ ಮಾಹಿತಿ ಪಡೆದು ಕಾನೂನಿನ ಚೌಕಟ್ಟಿನಲ್ಲಿ ಬಗೆಹರಿಸಲಾಗುವುದು. ಎರಡೂ ಊರಿನ ಹಿರಿಯರನ್ನು, ಪೊಲೀಸರನ್ನು ಕೂಡ್ರಿಸಿಕೊಂಡು ಪರಸ್ಪರ ದ್ವೇಷ ಉಳಿಯದಂತೆ ಕ್ರಮ ತೆಗೆದುಕೊಳ್ಳಲಾಗುವುದು. ಅಕ್ಕಪಕ್ಕದ ಊರಿನ ಜನರು ಮೊದಲಿನಂತೆ ಪರಸ್ಪರ ನಗು ನಗುತ್ತ ಇರುವಂತೆ ಮಾಡುತ್ತೇನೆ ಎಂದು ಹೆಬ್ಬಾಳಕರ್ ಭರವಸೆ ನೀಡಿದರು.

ಕ್ಷೇತ್ರದಲ್ಲಿ ಎಲ್ಲೂ ಕಾನೂನಿನ ಸಮಸ್ಯೆ ಆಗಿಲ್ಲ. ಘಟನೆ ನಡೆದ ತಕ್ಷಣ ಪೊಲೀಸರು ಸ್ಥಳಕ್ಕೆ ಧಾವಿಸಿ ಕ್ರಮ ತೆಗೆದುಕೊಂಡಿದ್ದಾರೆ. ಡಿ.31ರ ರಾತ್ರಿ ಹೊಸವರ್ಷಾಚರಣೆ ವೇಳೆ ಬಾದರವಾಡಿ ಮತ್ತು ನಾವಗೆ ಗ್ರಾಮದ ಹುಡುಗರ ಮಧ್ಯೆ ಸ್ವಲ್ಪ ಗಲಾಟೆ ಆಗಿದೆ. ಅದರ ಸಿಟ್ಟಿನಿಂದ ಆ್ಯಕ್ಷನ್ ಗೆ ರಿಯಾಕ್ಷನ್ ಆಗಿದೆ. ಕಾನೂನನ್ನು ಯಾರೂ ಕೈಗೆ ತೆಗೆದುಕೊಳ್ಳಬಾರದು ಎಂದು ವಿನಂತಿಸುತ್ತೇನೆ. ಎಲ್ಲರೂ ಸಣ್ಣ ಮಕ್ಕಳು. ಅವರ ಭವಿಷ್ಯದ ದೃಷ್ಟಿಯಿಂದ ಕಾನೂನಿನ ಚೌಕಟ್ಟಿನಲ್ಲಿ ಸರಿಪಡಿಸಲಾಗುವುದು ಎಂದು ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದರು.

# ಇಬ್ಬರು ಮಕ್ಕಳೊಂದಿಗೆ ತಾಯಿ ದುರ್ಮರಣ



ಹಾಸನ: ಮನೆಯೊಂದರಲ್ಲಿ ತಾಯಿ ಹಾಗೂ ಇಬ್ಬರು ಪುಟ್ಟ ಮಕ್ಕಳು ನಿಗೂಢವಾಗಿ ಸಾವನ್ನಪ್ಪಿರುವ ಘಟನೆ ಹಾಸನ ಜಿಲ್ಲೆಯ ಹೊರವಲಯದ ದಾಸರಕೊಪ್ಪಲಿನಲ್ಲಿ ನಡೆದಿದೆ.

ತಾಯಿ ಶಿವಮ್ಮ (37) ಹಾಗೂ ಮಕ್ಕಳಾದ ಸಿಂಚು (7), ಪವನ್ (10) ಮೃತರು. ನಿನ್ನೆ ಶಿವಮ್ಮ ಪತಿ ತೀರ್ಥ ಎಷ್ಟೇ ಫೋನ್ ಮಾಡಿದರೂ ಶಿವಮ್ಮ ಫೋನ್ ಸ್ವೀಕರಿಸಿರಲಿಲ್ಲ. ಗಾಬರಿಯಾದ ಪತಿ ಇಂದು ಬೆಳಿಗ್ಗೆ ದಾಸರಕೊಪ್ಪಲಿನ ಮನೆಗೆ ಬಂದು ನೋಡಿದ್ದಾರೆ.

ಈ ವೇಳೆ ಮನೆ ಬಾಗಿಲು ಹಾಕಿಯೇ ಇತ್ತು. ಎಷ್ಟು ಹೊತ್ತಾದರೂ ಬಾಗಿಲು ತೆರೆದಿರಲಿಲ್ಲ. ಬಾಗಿಲು ಒಡೆದು ಒಳ ನೋಡಿದಾಗ ಪತ್ನಿ ಹಾಗೂ ಇಬ್ಬರು ಮಕ್ಕಳು ಸಾವನ್ನಪ್ಪಿರುವುದು ಬೆಳಕಿಗೆ ಬಂದಿದೆ. ಗ್ಯಾಸ್ ಆನ್ ಮಾಡಿಟ್ಟು ತಾಯಿ ಮಕ್ಕಳೊಂದಿಗೆ ಆತ್ಮಹತ್ಯೆ ಮಾಡಿಕೊಂಡಿರುವ ಶಂಕೆ ವ್ಯಕ್ತವಾಗಿದೆ. ಪೆನ್ಶನ್ ಮೊಹಲ್ಲಾ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಅಕ್ಷರದವ್ವ ಸಾವಿತ್ರಿಬಾಯಿ ಫುಲೆ ಪ್ರಶಸ್ತಿಗೆ ಪ್ರಭಾ ಆಯ್ಕೆ



ಬೆಳಗಾವಿ: ದಲಿತ ವಿದ್ಯಾರ್ಥಿ ಪರಿಷತ್ತಿನ ರಾಜ್ಯ ಘಟಕ ವತಿಯಿಂದ ಮಹಿಳಾ ಸಾಧಕಿಯರಿಗೆ ಪ್ರತಿ ವರ್ಷ ಕೊಡಮಾಡುವ" ಅಕ್ಷರದವ್ವ ಸಾವಿತ್ರಿಬಾಯಿ ಫುಲೆ" ರಾಜ್ಯ ಮಟ್ಟದ ಪ್ರಶಸ್ತಿಗೆ ಬೆಳಗಾವಿ ಜಿಲ್ಲೆಯ ಅಥಣಿಯ ಕವಯಿತ್ರಿ, ಲೇಖಕಿ, ಅನುವಾದಕಿ ಪ್ರಭಾ ಬಾಳಕೃಷ್ಣ ಬೋರಗಾಂವಕರ ಅವರು ಆಯ್ಕೆಯಾಗಿದ್ದಾರೆ.

ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕಿಯಾಗಿ ಸೇವೆ ಸಲ್ಲಿಸುತ್ತ ಶೈಕ್ಷಣಿಕ, ಸಾಹಿತ್ಯ ಸೇವೆ ಜೊತೆಗೆ ಸಮಾಜಮುಖಿ ಕಾರ್ಯಗಳನ್ನು ಪರಿಗಣಿಸಿ ಜ 3 ರಂದು ಅಕ್ಷರದವ್ವ ಸಾವಿತ್ರಿಬಾಯಿ ಫುಲೆ ಪ್ರಶಸ್ತಿಗಾಗಿ ಆಯ್ಕೆ ಮಾಡಿದ್ದಾರೆ.

ಮೂರು ಸೃಜನಶೀಲ ಸಾಹಿತ್ಯ ಹಾಗೂ ಮೂರು ಮರಾಠಿಯಿಂದ ಕನ್ನಡಕ್ಕೆ ಅನುವಾದ ಮಾಡಿದ ಹಿರಿಮೆ ಇವರದು. ಅನೇಕ ಲೇಖನಗಳು ನಾಡಿನ ಹೆಸರಾಂತ ಪತ್ರಿಕೆಗಳಲ್ಲಿ ಪ್ರಕಟಗೊಂಡಿವೆ.ಅವರ ಕೃತಿಗಳಿಗೆ ಕನ್ನಡ ಸಾಹಿತ್ಯ ಪರಿಷತ್ತು, ಬೆಂಗಳೂರು , ಬೆಳಗಾವಿ ಜಿಲ್ಲಾ ಸಾಹಿತ್ಯ ಪ್ರತಿಷ್ಠಾನದಿಂದ ದತ್ತಿ ನಿಧಿ ಪ್ರಶಸ್ತಿ ಲಭಿಸಿವೆ. ಕರ್ನಾಟಕ ರಾಜ್ಯ ಶಿಕ್ಷಕರ ಸಂಘ ಹಾಗೂ ಅನೇಕ ಸಂಘ - ಸಂಸ್ಥೆಗಳು ಪ್ರಶಸ್ತಿ ನೀಡಿ ಗೌರವಿಸಿವೆ.

ಅಕ್ಷರದವ್ವ ಸಾವಿತ್ರಿಬಾಯಿ ಫುಲೆ ಅವರ ಜನ್ಮದಿನಾಚರಣೆ ಅಂಗವಾಗಿ 3 ಜನೆವರಿ 2024 ರಂದು ವಿಜಯಪುರದ ಕಂದಗಲ್ಲ ಹಣಮಂತರಾಯ ರಂಗಮಂದಿರದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಗುವುದು ಎಂದು ದಲಿತ ವಿದ್ಯಾರ್ಥಿ ಪರಿಷತ್ತಿನ ಜಿಲ್ಲಾ ಘಟಕದ ಅಧ್ಯಕ್ಷ ಶ್ರೀ ಬಸವರಾಜ ಗಂಗೂರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಒಂದು ವರ್ಷದಲ್ಲಿ ಎರಡರಿಂದ ಮೂರು ಪಟ್ಟು ಸಿರಿಧಾನ್ಯ ರಫ್ತು ನಮ್ಮ ಗುರಿ: ಸಚಿವ ಚೆಲುವರಾಯ ಸ್ವಾಮಿ

ಬೆಂಗಳೂರು: ರಾಜ್ಯ ಸರ್ಕಾರ ಸಾವಯವ ಕೃಷಿಗೆ ವಿಶೇಷ ಒತ್ತು ನೀಡಿದ್ದು, ಮುಂದಿನ ಒಂದು ವರ್ಷದಲ್ಲಿ ಸಿರಿಧಾನ್ಯ ಉತ್ಪಾದನೆ ಮತ್ತು ರಫ್ತು ಚಟುವಟಿಕೆಯಲ್ಲಿ ಇಡೀ ದೇಶದಲ್ಲಿ ಕರ್ನಾಟಕ ಮೊದಲ ಸ್ಥಾನದಲ್ಲಿರಬೇಕು.

ರಫ್ತು ಪ್ರಮಾಣ ಎರಡರಿಂದ ಮೂರು ಪಟ್ಟು ಏರಿಕೆ ಮಾಡುವುದು ನಮ್ಮ ಗುರಿ ಎಂದು ಕೃಷಿ ಸಚಿವ ಚೆಲುವರಾಯ ಸ್ವಾಮಿ ಹೇಳಿದ್ದಾರೆ.

ಜನವರಿ 5 ರಿಂದ ಮೂರು ದಿನಗಳ ಕಾಲ ಅರಮನೆ ಮೈದಾನದಲ್ಲಿ ನಡೆಯಲಿರುವ ನಡೆಯಲಿರುವ ಅಂತರರಾಷ್ಟ್ರೀಯ ಸಿರಿಧಾನ್ಯ ವಾಣಿಜ್ಯ ಮೇಳದ ಹಿನ್ನೆಲೆಯಲ್ಲಿ "ಸಿರಿಧಾನ್ಯಗಳು ಮತ್ತು ಅದರ ಮೌಲ್ಯ ವರ್ಧಿತ ಉತ್ಪನ್ನಗಳಿಗೆ ಜಾಗತಿಕ ಮಾರುಕಟ್ಟೆಯ ಅನ್ವೇಷಣೆ" ಕುರಿತ ರಫ್ತುದಾರರ ಸಮಾವೇಶದಲ್ಲಿ ಮಾತನಾಡಿದ ಸಚಿವರು, ಮೊದಲ ಬಾರಿಗೆ 2017 ರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಸಿರಿಧಾನ್ಯಕ್ಕೆ ಹೆಚ್ಚಿನ ಮಹತ್ವ ನೀಡಿ ಅಂತರರಾಷ್ಟ್ರೀಯ ಸಮಾವೇಶ ನಡೆಸಿತು.

ನಂತರ ಬರಗಾಲ ಹಿನ್ನೆಲೆಯಲ್ಲಿ ಪರ್ಯಾಯ ಬೆಳೆ ಪದ್ಧತಿ ಕುರಿತು ಚಿಂತನೆ ನಡೆಸಿದ ಪರಿಣಾಮ ಮೊದಲ ಬಾರಿಗೆ 2017ರಲ್ಲಿ ಪರಿಷ್ಕೃತ ಸಾವಯುವ ನೀತಿಯನ್ನು ಹೊರತರಲಾಯಿತು ಎಂದರು. ರಾಜ್ಯ ಸರ್ಕಾರ ಸಾಂಪ್ರದಾಯಿಕ ಮತ್ತು ಸಾವಯವ ಪದ್ಧತಿಯಲ್ಲಿ ಬೆಳೆದ ಸಿರಿಧಾನ್ಯಗಳನ್ನು "ಪುಣ್ಯಾವಂತ ಆಹಾರ" ವಾಗಿ ಉತ್ತೇಜಿಸುತ್ತಿದೆ.

ಒಂದು ಹೆಕ್ಟೇರ್ ಉತ್ಪಾನೆಗೆ ಹತ್ತು ಸಾವಿರ ರೂ ಪ್ರೋತ್ಸಾಹ ಧನ ನೀಡುತ್ತಿದ್ದು, ಬರುವ ದಿನಗಳಲ್ಲಿ ಈ ಮೊತ್ತ ಹೆಚ್ಚಿಸಲು ಕ್ರಮ ತೆಗೆದುಕೊಳ್ಳಲಾಗುವುದು. ಮುಂದಿನ ವರ್ಷದ ವೇಳೆಗೆ ರಫ್ತು ಪ್ರಮಾಣ ದ್ವಿಗುಣ, ತ್ರಿಗುಣಗೊಳಿಸಬೇಕು.

ರಫ್ತು ಮತ್ತು ಉತ್ಪಾದನೆಯಲ್ಲಿ ಕರ್ನಾಟಕ ಮೊದಲ ಸ್ಥಾನಕ್ಕೆ ತಲುಪುವುದು ನಮ್ಮ ಗುರಿ. ರಫ್ತು ಮಾಡುವವರಿಗೆ ಕೆಫೆಕ್ ನಿಂದ ಎಲ್ಲಾ ರೀತಿಯ ನೆರವು ನೀಡಲಾಗುವುದು. ಕಡಿಮೆ ನೀರು, ಹೆಚ್ಚು ಶ್ರಮವಿಲ್ಲದೇ ಬೆಳೆಯಲು ಅವಕಾಶವಿದೆ.

ಇದೀಗ ಪಂಚ ತಾರಾ. ಸಪ್ತತಾರಾ ಹೋಟೆಲ್ ಗಳಲ್ಲೂ ಸಿರಿಧಾನ್ಯಗಳ ಆಹಾರ ದೊರೆಯುತ್ತಿದೆ ಎಂದರು.

ಆಹಾರ ಸಂಸ್ಕರಣೆ ಮತ್ತು ಕಟಾವು ತಂತ್ರಜ್ಞಾನ ಇಲಾಖೆಯ ವಿಶೇಷ ಕಾರ್ಯದರ್ಶಿ, ರೋಹಿಣಿ ಸಿಂಧೂರಿ ಮಾತನಾಡಿ, ರಫ್ತು ಚಟುವಟಿಕೆ ಉದಯೋನ್ಮುಖ ವಲಯವಾಗಿದ್ದು, ಭಾರತದ ಆಹಾರ ಸಂಸ್ಕರಣಾ ವಲಯದಲ್ಲಿ ಶೇ 26 ರಷ್ಟು ಪ್ರಗತಿಯಾಗಿದೆ. ಕರ್ನಾಟಕದಲ್ಲಿ ಹತ್ತು ಕೃಷಿ ಹವಾಮಾನ ವಲಯಗಳಿದ್ದು, ಆರು ವಿಧದ ಮಣ್ಣು ವಿಧಗಳಿವೆ.



ರಾಜ್ಯ 6ನೇ ಅತಿ ದೊಡ್ಡ ರಫ್ತು ರಾಜ್ಯವಾಗಿದೆ. ಸಿರಿಧಾನ್ಯಗಳ ರಫ್ತು ಚಟುಟಿಕೆಗೆ ವಿಶೇಷ ಗಮನಹರಿಸಲಾಗಿದೆ ಎಂದು ಹೇಳಿದರು.

ನಂತರ ಸಿರಿಧಾನ್ಯ ವಿಶೇಷತೆ ಕುರಿತು ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಸಚಿವ ಚೆಲುವರಾಯ ಸ್ವಾಮಿ, ಪ್ರಸ್ತುತ ರಾಜ್ಯದಲ್ಲಿ 15.61 ಲಕ್ಷ ಹೆಕ್ಟೇರ್ ನಲ್ಲಿ ಸಿರಿಧಾನ್ಯ ಬೆಳೆಯಲಾಗುತ್ತಿದೆ. ಸಿರಿಧಾನ್ಯ ಮೇಳಕ್ಕೆ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತು ನಿಗಮ ನಿಯಮಿತ (ಕೆಪೆಕ್) ಸಂಸ್ಥೆಯು ನೋಡೆಲ್ ಸಂಸ್ಥೆಯಾಗಿದೆ.

ಅಂತರಾಷ್ಟ್ರೀಯ ಸಂಶೋಧನಾ ಸಂಸ್ಥೆ ಜಿಐಝಡ್ ಮತ್ತು ಐಐಎಂಆರ್ ಸಹ ಸಹಭಾಗಿ ಸಂಸ್ಥೆಗಳಾಗಿದ್ದು, ಐಸಿಸಿಒಎ ಸಂಸ್ಥೆಯು ವಸ್ತುಪ್ರದರ್ಶನದ ಪಾಲುದಾರ ಸಂಸ್ಥೆ ಎಂದರು.

ವಸ್ತುಪ್ರದರ್ಶನ: ಸಾವಯವ ಮತ್ತು ಸಿರಿಧಾನ್ಯಗಳ ಸಂಸ್ಥೆಗಳು, ಮಾರುಕಟ್ಟೆದಾರರು, ರಫ್ತುದಾರರು, ಚಿಲ್ಲರೆ ಮಾರಾಟಗಾರರು, ರೈತ ಗುಂಪುಗಳು, ಪ್ರಾಂತೀಯ ಒಕ್ಕೂಟಗಳು, ಸಾವಯವ ಪರಿಕರಗಳ ಸಂಸ್ಥೆಗಳು, ರಾಜ್ಯ ಮತ್ತು ಕೇಂದ್ರ ಸರ್ಕಾರದ ಇಲಾಖೆಗಳು ಮತ್ತು ಸಂಸ್ಥೆಗಳು ವಸ್ತು ಪ್ರದರ್ಶನದಲ್ಲಿ ಭಾಗವಹಿಸುತ್ತಿವೆ.

ಮೇಳದಲ್ಲಿ ಉತ್ತರ ಪ್ರುದೇಶ, ಪಂಜಾಬ್, ಆಂಧ್ರ ಪ್ರದೇಶ, ಮಹಾರಾಷ್ಟ್ರ, ಒಡಿಸ್ಸಾ, ತಮಿಳುನಾಡು ಮತ್ತು ಮೇಘಾಲಯ ಮುಂತಾದ ರಾಜ್ಯಗಳು ಭಾಗವಹಿಸುತ್ತಿವೆ. ವಸ್ತು ಪ್ರುದರ್ಶನದಲ್ಲಿ 250ಕ್ಕೂ ಹೆಚ್ಚು ಮಳಿಗೆಗಳಿರುತ್ತವೆ ಎಂದರು.

ಕರ್ನಾಟಕ ಪೆವಿಲಿಯನ್ ನಲ್ಲಿ ಕರ್ನಾಟಕದ ಸಿರಿಧಾನ್ಯ ಮತ್ತು ಸಾವಯವ ಉತ್ಪನ್ನ ಸಂಸ್ಥೆಗಳಿಂದ ಉತ್ತೇಜನಗೊಂಡಿರುವ ಕರ್ನಾಟಕದ ನವೋದ್ಯಮಿಗಳು ತಮ್ಮ ಉತ್ಪನ್ನಗಳನ್ನು ಪ್ರದರ್ಶಿಸಲಿದ್ದಾರೆ.

ಸಿರಿಧಾನ್ಯ, ಸಾವಯವ ರೈತ ಗುಂಪುಗಳು, ಪ್ರಾಂತೀಯ ಒಕ್ಕೂಟಗಳು, ಹಾಗೆಯೇ ರಾಜ್ಯ ಮತ್ತು ಕೇಂದ್ರ ಸರ್ಕಾರದ ಇಲಾಖೆಗಳು ಮತ್ತು ಸಂಸ್ಥೆಗಳು ಸೇರಿದಂತೆ ಒಟ್ಟು 100 ಮಳಿಗೆಗಳನ್ನು ತೆರೆಯಲಾಗಿದೆ.

ಉತ್ಪಾದಕರು, ಮಾರುಕಟ್ಟೆದಾರರ ಸಮಾಲೋಚನಾ ಸಭೆಗಳನ್ನು ಏರ್ಪಡಿಸಲಾಗುತ್ತದೆ. ಎಂದು ಹೇಳಿದರು.

ಸಾವಯವ ಮತ್ತು ಸಿರಿಧಾನ್ಯ ಬೆಳೆಯುವ ರೈತರಿಗಾಗಿ ಕನ್ನಡ ಭಾಷೆಯಲ್ಲಿ ಮೂರು ದಿನಗಳ ಕಾರ್ಯಗಾರವನ್ನು ಕೃ.ವಿ.ವಿ ಸಂಶೋಧನಾ ವಿಭಾಗದಿಂದ ಆಯೋಜಿಸಲಾಗಿದೆ. 10 ವಿವಿಧ ಸಿರಿಧಾನ್ಯ ಹೋಟಲ್, ರೆಸ್ಟೋರೆಂಟ್‌ಗಳ ಮಳಿಗೆಗಳ ಮೂಲಕ ವೈವಿದ್ಯಮಯ ಮತ್ತು ರುಚಿಕರವಾದ ಸಿರಿಧಾನ್ಯಗಳ ಊಟ ಮತ್ತು ಉಪಹಾರಗಳನ್ನು ಸವಿಯಲು ಸಾರ್ವಜನಿಕರಿಗೆ ಅವಕಾಶ ಕಲ್ಪಿಸಿಕೊಡಲಾಗಿದೆ ಎಂದರು.

ರಾಜ್ಯ ಮಿಡಿಸೌತೆ, ಗುಲಾಬಿ, ಈರುಳ್ಳಿ ಮತ್ತು ಕಾಫಿ ರಫ್ತಿನಲ್ಲಿ ದೇಶದಲ್ಲಿಯೇ ಮುಂಚೂಣಿಯಲ್ಲಿದೆ.

ಸಿರಿಧಾನ್ಯಗಳು, ದಾಳಿಂಬೆ, ಕರಿಮೆಣಸು, ಅರಿಶಿನ, ಮೆಣಸಿನಕಾಯಿ, ಹಸಿರು ಮೆಣಸಿನಕಾಯಿ, ಮಾವು, ಬಾಳೆಹಣ್ಣು, ಬೆಲ್ಲ, ನೆಲಗಡಲೆ, ಒಣದ್ರಾಕ್ಷಿ, ಜಿಐಉತ್ಪನ್ನಗಳು, ಸಂಸ್ಕರಿಸಿದ ಆಹಾರಗಳು, ತರಕಾರಿ ಸೇರಿದಂತೆ ಹಲವಾರು ಕೃಷಿ ಮತ್ತು ತೋಟಗಾರಿಕಾ ಉತ್ಪನ್ನಗಳನ್ನು ರಫ್ತು ಮಾಡಲು ರಾಜ್ಯವು ಗಮನಾರ್ಹ ಸಾಮರ್ಥ್ಯವನ್ನು ಹೊಂದಿದೆ ಎಂದರು.

ಕೃಷಿ ಆಯುಕ್ತರಾದ ಎನ್.ವೈ. ಪಾಟೀಲ್. ಕಾರ್ಯದರ್ಶಿ ಅನ್ಬು ಕುಮಾರ್, ಕೃಷಿ ಇಲಾಖೆ ನಿರ್ದೇಶಕರಾದ ಡಾ. ಜಿ.ಟಿ. ಪುತ್ರ ಮತ್ತಿತರರು ಉಪಸ್ಥಿತರಿದ್ದರು.

# ಕ್ರೀಡೆಯಿಂದ ಮನೋಲ್ಲಾಸ, ಆರೋಗ್ಯ ಲಭ್ಯ: ಅಭೀಜಿತ್ ಬಂಡಿ

ಬೆಳಗಾವಿ:ದೈಹಿಕ, ಮಾನಸಿಕ, ಮನೋಲ್ಲಾಸಕ್ಕಾಗಿ ಕ್ರೀಡೆಗಳು ಹಾಗೂ ಸಂಗೀತ ಕಾರ್ಯಕ್ರಮ ಪೂರಕವಾಗಿದೆ.

ಪ್ರತಿ ದಿನವೂ ಆಟದ ಮೈದಾನದಲ್ಲಿದ್ದು ದೈಹಿಕ ಕಸರತ್ತುಗಳನ್ನು ಮಾಡಬೇಕೆಂದು ಕಂಪನಿಯ ಮುಖ್ಯ ನಿರ್ವಾಹಕರಾದ ಅಭೀಜಿತ್ ಬಂಡಿ ಹೇಳಿದರು.

ಇಲ್ಲಿನ ಹಿಂಡಾಲ್ಕೋ ಇಂಡಸ್ಟ್ರೀಸ್ ಲಿಮಿಟೆಡ್ ಕಂಪನಿಯ ವತಿಯಿಂದ ಕಂಪನಿಯ ಸಿಬ್ಬಂದಿಗಳಿಗಾಗಿ ಹಿಂಡಾಲ್ಕೋ ಮೈದಾನದಲ್ಲಿ ಆಯೋಜಿಸಲಾದ ಹೊನಲು ಬೆಳಕಿನ ಕ್ರಿಕೆಟ್ ಪಂದ್ಯಾವಳಿಯಲ್ಲಿ ವಿಜೇತರಾದ ಪಂದ್ಯಕ್ಕೆ ಕಂಪನಿಯ ಮುಖ್ಯ ನಿರ್ವಾಹಕರಾದ ಅಭೀಜಿತ್ ಬಂಡಿ, ಮಾನವ ಸಂಪನ್ಮೂಲ ಮುಖ್ಯಸ್ಥರಾದ ಮಯೂರ್ ಕೃಷ್ಣರವರು ಬಹುಮಾನ ವಿತರಿಸಿ, ಅವರು ಮಾತನಾಡಿದರು.




ಕ್ರೀಡೆ ಗಳಲ್ಲಿ ಭಾಗವಹಿಸುವುದರಿಂದ ಆರೋಗ್ಯವು ಸಹ ಹತ್ತೋಟಿಯಲ್ಲಿ ಇರುತ್ತದೆ ಎಂದು ತಿಳಿಸಿದರು.

ಸಮಾಜ ಸೇವೆಯಲ್ಲಿ ತೊಡಗಿರುವ ಪೌಂಡೇಶನ್ ಗಳಿಗೆ ಸಹಾಯ–ಸಹಕಾರ ಮಾಡುವ ಉದ್ದೇಶದಿಂದ ಹಿಂಡಾಲ್ಕೋ ಕಂಪನಿಯಿಂದ ಕ್ರಿಕೆಟ್ ಪಂದ್ಯಾವಳಿಗಳನ್ನು ಆಯೋಜಿಸಲಾಗಿದೆ.

ಕ್ರಿಕೆಟ್ ನಲ್ಲಿ ಕಂಪನಿಯ ಸಿಬ್ಬಂದಿ ಉತ್ತಮ ಪ್ರದರ್ಶನ ನೀಡಿದ್ದಾರೆ. ಮುಂದಿನ ದಿನಗಳಲ್ಲಿ ಹೆಚ್ಚೆಚು ಕ್ರೀಡೆಗಳನ್ನು ಆಯೋಜನೆ ಮಾಡಲಾಗುವುದು ಎಂದು ಹೇಳಿದರು.

ಮನಮೋಹಕ ದೃಶ್ಯ: ಹಿಂಡಾಲ್ಕೋ ಇಂಡಸ್ಟ್ರೀಸ್ ಆವರಣದಲ್ಲಿ ನಡೆದ ಕ್ರಿಕೆಟ್ ಪಂದ್ಯಾವಳಿಗಳನ್ನು ವೀಕ್ಷಿಸಲು ಸಾವಿರಾರು ಕ್ರಿಕೆಟ್ ಅಭಿಮಾನಿಗಳು ಆಗಮಿಸಿದರು. ಪಂದ್ಯದ ರೋಮಾಂಚನಕಾರಿ ಕ್ಷಣಗಳನ್ನು ಕಣ್ತುಂಬಿಕೊಂಡು, ಅಪಾರ ಮೆಚ್ಚುಗೆ ವ್ಯಕ್ತಪಡಿಸಿದರು.

ಕ್ರಿಕೆಟ್ ಪಂದ್ಯಾವಳಿಯಲ್ಲಿ ಉತ್ತಮ ಪ್ರದರ್ಶನ ನೀಡಿದ ತಂಡಕ್ಕೆ ಹಾಗೂ ಆಟಗಾರರಿಗೆ ಹಿಂಡಾಲ್ಕೋ ಕಂಪನಿಂದ 1.75 ಸಾವಿರ ರೂ. ಹಣವನ್ನು ನೀಡಲಾಗಿದೆ.

ಈ ನಿರ್ಧರಿತ ಹಣವನ್ನು ಸಾಮಾಜ ಸೇವೆ ಮಾಡುತ್ತಿರುವ ಜಿಲ್ಲೆಯ ಪ್ರತಿ ಪೌಂಡೇಶನ್ ಗಳಿಗೆ ತಲಾ 25 ಸಾವಿರ ರೂ. ನೀಡುವುದಾಗಿ ಕಂಪನಿಯ ಮಾನವ ಸಂಪನ್ಮೂಲ ಮುಖ್ಯಸ್ಥರಾದ ಮಯೂರ್ ಕೃಷ್ಣ ರವರು ತಿಳಿಸಿದರು.

7 ಸಂಸ್ಥೆಗಳಾದ, ಡಾಟರ್ಸ ಆಫ್ ಆಶ್ರಯ ಫೌಂಡೇಶನ್, ನಂದನ ಮಕ್ಕಳ ಧಾಮ, ಕ್ಯಾನ್ಸರ್ ಹಾಸ್ಪಿಟಲ್ ಬೆಳಗಾವಿ, ಸ್ಪಂದನ ನೆಟ್ವರ್ಕ್ ಆಫ್ ಪಾಸಿಟಿವ್ ಪೀಪಲ್, ಸಮೃದ್ಧ ಫೌಂಡೇಶನ್ ಫಾರ್ ಡಿಸೇಬಲ್ಸ್, ಸ್ಟುಡೆಂಟ್ಸ್ ಗವರ್ನ್‌ಮೆಂಟ್ ಸ್ಕೂಲ್, ಶಾಂತ ತಾಯಿ ವೃದ್ಧಾಶ್ರಮ ಗಳಿಗೆ 1. 75 ರೂ.ನಗದನ್ನು ನೀಡಲಾಗುವುದು ಎಂದರು.

ಈ ಸಂದರ್ಭದಲ್ಲಿ ಆಶ್ರಮ ಪೌಂಡೇಶನ್ ನಾಗರತ್ನಾ ರಾಮಗೌಡ, ವಿಜಯ ಮೋರೆ, ಕಸ್ತೂರಿ ಬಂಗೇರ್, ಶಿವನಗೌಡ ಪಾಟೀಲ, ದಿನೇಶ ನಾಯ್ಕ ಇತರರು ಇದ್ದರು.

ಲೋಕೋಪಯೋಗಿ ಇಲಾಖೆಯ ಹೊಸ ಎಂಜಿನಿಯರ್ ಗಳಿಗೆ ತರಬೇತಿ ಶಿಬಿರ

# ವೃತ್ತಿಯಲ್ಲಿ ಕೌಶಲ್ಯ ಬೆಳೆಸಿಕೊಳ್ಳಲು ಸಚಿವ ಸತೀಶ್ ಜಾರಕಿಹೊಳಿ ಕರೆ

ಬೆಳಗಾವಿ: ಹೊಸದಾಗಿ ನೇಮಕಗೊಂಡ ಸಹಾಯಕ ಇಂಜಿನಿಯರ್, ಕಿರಿಯ ಇಂಜಿನಿಯರಗಳಿಗೆ ಸುವರ್ಣ ವಿಧಾನ ಸೌಧದಲ್ಲಿ ಅಯೋಜಿಸಲಾಗಿರುವ ಎರಡು ದಿನಗಳ ಓರಿಯಂಟೇಶನ್ ತರಬೇತಿ ಶಿಬಿರವನ್ನು ಮಂಗಳವಾರ (ಜ.02) ನಡೆದ ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಎಲ್ ಜಾರಕಿಹೊಳಿ ಅವರು ಉದ್ಘಾಟಿಸಿದರು.

ಜನವರಿ 2 ಹಾಗೂ ಜ.3 ರಂದು ನಡೆಯಲಿರುವ ತರಬೇತಿಯ ಸದುಪಯೋಗವನ್ನು ಹೊಸದಾಗಿ ನೇಮಕಗೊಂಡ ಇಂಜಿನಿಯರಗಳು ಪಡೆದುಕೊಳ್ಳಬೇಕು. ಸದರಿ ತರಬೇತಿಯ ಅಂಶಗಳನ್ನು ತಮ್ಮ ಕಾರ್ಯನಿರ್ವಹಣೆಯಲ್ಲಿ ಅಳವಡಿಸಿಕೊಳಬೇಕು ಎಂದು ಹೇಳಿದರು.




ಅದರಂತೆ ಇಂಜಿನಿಯರ್ ಗಳು ಸರ್ಕಾರದ ಯೋಜನೆಗಳನ್ನು ಸಾರ್ವಜನಿಕರಿಗೆ ವ್ಯವಸ್ಥಿತವಾಗಿ ತಲುಪಿಸುವ ಮಹತ್ವದ ಪಾತ್ರ ವಹಿಸಿಕೊಳ್ಳಬೇಕು ಸಚಿವ ಸತೀಶ್ ಜಾರಕಿಹೊಳಿ ಅವರು ಸೂಚಿಸಿದರು.

ಮುಖ್ಯ ಇಂಜಿನಿಯರ್ ಸುರೇಶ್ ಹೆಚ್, ಬೆಳಗಾವಿ ವಿಭಾಗದ ಅಧೀಕ್ಷಕ ಎಂಜಿನಿಯರ್ ಅರುಣಕುಮಾರ ಪಾಟೀಲ, ಧಾರವಾಡ ವಿಭಾಗದ ಅಧೀಕ್ಷಕ ಇಂಜಿನಿಯರ್ ಸಂಜೀವ ಹುಲಿಕಾಯಿ, ಚಿಕ್ಕೋಡಿ ಕಾರ್ಯ ನಿರ್ವಾಹಕ ಇಂಜಿನಿಯರ್ ಬಲೊಲ್, ಬೆಳಗಾವಿ ಕಾರ್ಯನಿರ್ವಹಕ ಎಸ್. ಎಸ್ ಸೊಬರದ, ಸೇರಿದಂತೆ ಮತ್ತಿತರ ಅಧಿಕಾರಿಗಳು ತರಬೇತಿ ಶಿಬಿರದಲ್ಲಿ ಪಾಲ್ಗೊಂಡಿದ್ದರು.

# ಶರಣರ ದಾಸೋಹ ತತ್ವ ಸಾರ್ವಕಾಲಿಕ ಶ್ರೇಷ್ಠ ತತ್ವ: ಗುರುಸಿದ್ಧ ಸ್ವಾಮೀಜಿ




ಬೆಳಗಾವಿ: ಬಸವಾದಿ ಶರಣರು ಕಟ್ಟ ಬಯಸಿದ ಹೊಸ ಸಮಾಜದಲ್ಲಿ ಕಾಯಕ ಮತ್ತು ದಾಸೋಹ ತತ್ವಗಳ ಪರಿಕಲ್ಪನೆ ವಿನೂತನ ಪ್ರಯೋಗವಾಗಿದೆ ಎಂದು ಕಾರಂಜಿಮಠದ ಪೂಜ್ಯ ಶ್ರೀ ಗುರುಸಿದ್ಧ ಸ್ವಾಮಿಗಳು ಹೇಳಿದರು.

ಬೆಳಗಾವಿ ಕಾರಂಜಿಮಠದಲ್ಲಿ ದಿನಾಂಕ 1 ಜನೆವರಿ 2024ರಂದು ಜರುಗಿದ 270ನೇ ಮಾಸಿಕ ಶಿವಾನುಭವ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಕೆಲಸ ಮತ್ತು ದಾನ ಎಂಬ ಪರಿಕಲ್ಪನೆಗಳನ್ನು ಅಪವರ್ಗೀಕರಣ ಮಾಡಿ ಕಾಯಕ ಮತ್ತು ದಾಸೋಹ ಎಂಬ ತತ್ವಗಳನ್ನು ಅನುಷ್ಠಾನಕ್ಕೆ ತಂದರು ಎಂದು ಹೇಳಿದರು.

ಪ್ರಾಧ್ಯಾಪಕ ಎಸ್. ಆರ್. ಕಲಹಾಳ ಅವರು ಶರಣರ ದಾಸೋಹ ಪರಿಕಲ್ಪನೆ ಎಂಬ ವಿಷಯ ಕುರಿತು ಉಪನ್ಯಾಸ ನೀಡಿದರು. ಆತ್ಮೋದ್ಧಾರ, ಸಮ ಸಮಾಜ, ಕಾಯಕ ಮತ್ತು ದಾಸೋಹ ಈ ನಾಲ್ಕು ಮೂಲ ತತ್ವಗಳ ಮೇಲೆ ಶರಣ ಧರ್ಮ ಅಸ್ತಿತ್ವಕ್ಕೆ ಬಂದಿತು.

ಕಾಲಘಟ್ಟದ ಒತ್ತಡ ಪರಿಣಾಮವಾಗಿ ಕಾಯಕ ಮತ್ತು ದಾಸೋಹ ತತ್ವಗಳು ಜಾರಿಗೆ ಬಂದವು ಎಂದು ಉಪನ್ಯಾಸದಲ್ಲಿ ತಿಳಿಸಿದರು. ಪ್ರಾಚಾರ್ಯ ಪ್ರೊ. ನಿರ್ಮಲಾ ಬಟ್ಟಲ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಇದೇ ಸಂದರ್ಭದಲ್ಲಿ ವಿಶೇಷ ಶಿಕ್ಷಕ ರಾಜ್ಯ ಪ್ರಶಸ್ತಿ ವಿಜೇತ ಮಹೇಶ್ವರಿ ಅಂಧ ಮಕ್ಕಳ ಶಾಲೆಯ ಶಿಕ್ಷಕಿ ಶ್ರೀಮತಿ ಸುಮಿತಾ ಮಿಟಗಾರ ಅವರನ್ನು ಪೂಜ್ಯರು ಸನ್ಮಾನಿಸಿದರು.

ಪೂಜ್ಯ ಶ್ರೀ ಮೃತ್ಯುಂಜಯ ಸ್ವಾಮಿಗಳು ಸ್ವಾಗತಿಸಿದರು. ಪ್ರೊ. ಎ.ಕೆ.ಪಾಟೀಲ ನಿರೂಪಿಸಿದರು. ಶ್ರೀ ವಿ.ಕೆ.ಪಾಟೀಲ ವಂದಿಸಿದರು. ಕಾರಂಜಿಮಠದ ಸಂಗೀತ ಶಾಲೆಯ ಮಕ್ಕಳು ವಚನ ಪ್ರಾರ್ಥನೆ ಸಲ್ಲಿಸಿದರು.

# ಖಾನಾಪುರ: ತಾಳಿ ಕಟ್ಟುವ ವೇಳೆ ಮುರಿದು ಬಿದ್ದ ಮದುವೆ, ವರ ಹಿಂಡಲಗಾ ಜೈಲಿಗೆ



ಖಾನಾಪುರ: ಕೊನೇ ಕ್ಷಣದಲ್ಲಿ ಮದುವೆಯೊಂದು ಮುರಿದು ಬಿದ್ದು ವರ ಹಿಂಡಲಗಾ ಜೈಲುಪಾಲಾದ ವಿಚಿತ್ರ ವಿದ್ಯಮಾನವೊಂದು ಖಾನಾಪುರ ಪಟ್ಟಣದಲ್ಲಿ ನಡೆದಿದೆ.

ಅಷ್ಟಕ್ಕೂ ಮದುವೆ ಮುರಿದು ಬೀಳಲು, ವರ ಜೈಲುಪಾಲಾಗಲು ಕಾರಣವಾಗಿದ್ದು ಮತ್ತೇನೂ ಅಲ್ಲ, ವರದಕ್ಷಿಣೆ ಬೇಡಿಕೆ.

ಪಟ್ಟು ಹಿಡಿದು ವರದಕ್ಷಿಣೆ ಬೇಡಿಕೆ ಇಟ್ಟಿದ್ದಕ್ಕೆ ಮದುವೆ ಮುರಿದುಬಿದ್ದ ವಿದ್ಯಮಾನ ಮೂರು ದಿನಗಳ ಹಿಂದೆ ನಡೆದಿದ್ದು, ಇದೀಗ ಬೆಳಕಿಗೆ ಬಂದಿದೆ.

ನಡೆದಿದ್ದೇನು?: ಖಾನಾಪುರ ಪಟ್ಟಣದ ಲೋಕಮಾನ್ಯ ಕಲ್ಯಾಣ ಮಂಟಪದಲ್ಲಿ ಮದುವೆ ಸಮಾರಂಭ ಆಯೋಜನೆಯಾಗಿತ್ತು.

ಈ ಮದುವೆಯ ನಿಶ್ಚಿತಾರ್ಥ ಸಂದರ್ಭದಲ್ಲಿ 50 ಗ್ರಾಂ ಬಂಗಾರ, ಒಂದು ಲಕ್ಷ ವರೋಪಚಾರ ನೀಡುವ ಮಾತುಕತೆ ನಡೆದಿತ್ತು.

ಆದರೆ, ವರನ ಕಡೆಯವರು 100 ಗ್ರಾಂ ಚಿನ್ನ, 10 ಲಕ್ಷ ರೂಪಾಯಿ ವರದಕ್ಷಿಣೆ ನೀಡಲು ಬೇಡಿಕೆ ಇಟ್ಟಿದ್ದಾರೆ. ಇದಕ್ಕೆ ವಧುವಿನ ಕುಟುಂಬದವರು ಒಪ್ಪದ ಕಾರಣ ಮದುವೆ ಆಗಲು ಹಳೆ ಹುಬ್ಬಳ್ಳಿ ನಿವಾಸಿ ವರ ಸಚಿನ್ ಪಾಟೀಲ್ ನಿರಾಕರಿಸಿದ್ದ.

ಇದರಿಂದ ಬೇಸತ್ತು ವಧುವಿನ ಕುಟುಂಬಸ್ಥರು ಖಾನಾಪುರ ಪೊಲೀಸರಿಗೆ ದೂರು ನೀಡಿದ್ದರು. ಖಾನಾಪುರ ಪೊಲೀಸ್ ಠಾಣೆಯಲ್ಲಿ ವರನ ವಿರುದ್ಧ ವಧು ದೂರು ದಾಖಲಾಗಿತ್ತು.

ವಧುವಿನ ಕುಟುಂಬದವರು ನೀಡಿದ ದೂರಿನ ಮೇರೆಗೆ ಕ್ರಮ ಕೈಗೊಂಡಿರುವ ಪೊಲೀಸರು, ವರ ಸಚಿನ್ ಪಾಟೀಲ್ನನ್ನು ಬಂಧಿಸಿ ಹಿಂಡಲಗಾ ಜೈಲಿಗೆ ಕಳುಹಿಸಿದ್ದಾರೆ.

## ಬೆಳಗಾವಿ; ಸ್ಕೂಟಿಗೆ ಕಾರು ಡಿಕ್ಕಿ

# 50 ಮೀಟರ್ ಹಾರಿ ಬಿದ್ದ ಯುವತಿ

ಬೆಳಗಾವಿ: ವೇಗವಾಗಿ ಬಂದ ಕಾರೊಂದು ಹಿಂಬದಿಯಿಂದ ಸ್ಕೂಟಿಗೆ ಡಿಕ್ಕಿ ಹೊಡೆದ ಪರಿಣಾಮ ಸ್ಕೂಟಿಯಲ್ಲಿದ್ದ ಯುವತಿ 50 ಮೀಟರ್ ಹಾರಿ ಬಿದ್ದು ಗಂಭೀರ ಗಾಯಗೊಂಡ ಘಟನೆ ಬೆಳಗಾವಿಯಲ್ಲಿ ನಡೆದಿದೆ.

ಬೆಳಗಾವಿಯ ಬ್ರಹ್ಮನಗರ ನಿವಾಸಿ ದಿವ್ಯಾ ಸುಜಯ್ ಪಾಟೀಲ್ (23) ಅಪಘಾತದಲ್ಲಿ ಗಂಭೀರ ಗಾಯಗೊಂಡ ಯುವತಿ. ವೇಗವಾಗಿ ಬಂದ ಕಾರು ಹಿಂಬದಿಯಿಂದ ಸ್ಕೂಟಿಗೆ ಡಿಕ್ಕಿ ಹೊಡೆದಿದ್ದು, ಸ್ಕೂಟಿ ಜೊತೆಗೆ ಮುಂದಿದ್ದ ಮತ್ತರೆಡು ಕಾರುಗಳಿಗೂ ಗುದ್ದಿದೆ. ಸರಣಿ ಅಪಘಾತದ ಪರಿಣಾಮ ಸ್ಕೂಟಿ ಪೀಸ್ ಪೀಸ್ ಆಗಿದ್ದು, ಮೂರೂ ಕಾರುಗಳು ಜಖಂಗೊಂಡಿದೆ.

ಗಾಯಾಳು ದಿವ್ಯಾ ಬೆಳಗಾವಿಯ ಮಜಂಗಾವ ಕಡೆಯಿಂದ ಪೀರನವಾಡಿ ಕಡೆಗೆ ಹೊರಟಿದ್ದರು. ಈ ವೇಳೆ ಕಾರು ಚಾಲಕ ಭರತ್ ಚೌಗಲೆ ಎಂಬಾತನಿಂದ ಸರಣಿ ಅಪಘಾತ ನಡೆದಿದೆ.

ಸ್ಕೂಟಿ ಹಾಗೂ ಕಾರುಗಳ ನಡುವಿನ ಸರಣಿ ಅಪಘಾತದ ಭಯಾನಕ ದೃಶ್ಯ ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಅಪಘಾತದಲ್ಲಿ ಗಂಭೀರ ಗಾಯಗೊಂಡ ದಿವ್ಯಾ ಪಾಟೀಲ್ ಅವರನ್ನು ಸ್ಥಳೀಯರು ತಕ್ಷಣವೇ ಆಸ್ಪತ್ರೆಗೆ ದಾಖಲಿಸಿದ್ದಾರೆ. ಈ ಕುರಿತು ಬೆಳಗಾವಿ ದಕ್ಷಿಣ ಸಂಚಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸಿಬಿಡಿ ಕಲ್ಲಿನ ತೊಂದರೆಯಿಂದ ಬಳಲುತ್ತಿದ್ದ 60 ವರ್ಷದ ವ್ಯಕ್ತಿಗೆ ಚಿಕಿತ್ಸೆ

ಹುಬ್ಬಳ್ಳಿ: ಉತ್ತರ ಕರ್ನಾಟಕದ ಪ್ರಮುಖ ಬಹುವಿಶೇಷತೆಗಳ ಆಸ್ಪತ್ರೆಯಾದ ಎಚ್‌ಸಿಜಿ ಕೆಎಲ್‌ಇ ಸುಚಿರಾಯು ಆಸ್ಪತ್ರೆ ಇತ್ತೀಚೆಗೆ 60 ವರ್ಷದ ಇರ್ಫಾನ್ (ಹೆಸರು ಬದಲಾಯಿಸಲಾಗಿದೆ) ಎಂಬ ವ್ಯಕ್ತಿಗೆ ಸವಾಲೆಸೆಯುವಂತಹ ಹಾಗೂ ಸಂಕೀರ್ಣವಾದ ಸ್ಪೈ ಚೋಲ್ ಎಂಜಿಯೋಸ್ಕೋಪಿ ಕ್ರಮದ ಮೂಲಕ ಯಶಸ್ವಿಯಾಗಿ ಚಿಕಿತ್ಸೆ ನೀಡುವುದರೊಂದಿಗೆ ಗ್ಯಾಸ್ಟ್ರೋಎಂಟರಾಲಜಿಯಲ್ಲಿ ಮೈಲಿಗಲ್ಲಾಗುವಂತಹ ಸಾಧನೆಗೈದಿದೆ. ರೋಗಿಯನ್ನು ಆಸ್ಪತ್ರೆಯಲ್ಲಿ ಸಂಕೀರ್ಣ ತೊಂದರೆಯ ಪರಿಸ್ಥಿತಿಯಲ್ಲಿ ಆಸ್ಪತ್ರೆಗೆ ಕರೆತರಲಾಯಿತು. ರೋಗಿಯು ಬಹಳ ಕಠಿಣವಾದ ಸಾಮಾನ್ಯ ಪಿತ್ತರಸ ನಾಳ (ಸಿಬಿಡಿ) ಕಲ್ಲಿನ ತೊಂದರೆಯಿಂದ ಬಳಲುತ್ತಿದ್ದನು. ಅಪರೂಪದ ಮತ್ತು ಚಿಕಿತ್ಸೆ ನೀಡುವಲ್ಲಿ ಕಷ್ಟಕರವಾದ ಪಿತ್ತರಸ ನಾಳದ ಸಮಸ್ಯೆಯಲ್ಲಿ ಎರಡು ಗಟ್ಟಿಯಾದ ಕಲ್ಲುಗಳು ಅಂಟಿಕೊಂಡಿದ್ದವು. ಜೊತೆಗೆ ಇದು ಎಡ ಹೆಪಾಟಿಕ್ ನಾಳದಲ್ಲೂ ಕಲ್ಲುಗಳಿದ್ದವು.

ಹುಬ್ಬಳ್ಳಿಯ ಸರ್ಕಾರಿ ವೃತ್ತಿಯಲ್ಲಿದ್ದ ಇರ್ಫಾನ್ (ಹೆಸರು ಬದಲಾಯಿಸಲಾಗಿದೆ) ನಾಲ್ಕು ತಿಂಗಳ ಹಿಂದೆ ಸಂಕೀರ್ಣವಾದ ವೈದ್ಯಕೀಯ ಸವಾಲನ್ನು ಎದುರಿಸಿದ್ದರಲ್ಲದೇ ಆಗಾಗ್ಗೆ ತೀವ್ರ ಹೊಟ್ಟೆ ನೋವಿನಿಂದ ಬಳಲುತ್ತಿದ್ದರು. ತಜ್ಞರನ್ನು ಸಂಪರ್ಕಿಸಿದಾಗ ಅವರು ಸಿಬಿಡಿ ಕಲ್ಲಿನಿಂದ ಬಳಲುತ್ತಿದ್ದಾರೆ ಎಂದು ರೋಗನಿರ್ಣಯದಲ್ಲಿ ಕಂಡುಬಂದಿತ್ತು. ಅವರು ಮತ್ತೊಂದು ಖಾಸಗಿ ಆಸ್ಪತ್ರೆಯಲ್ಲಿ ವಿವಿಧ ಪರೀಕ್ಷೆಗಳು ಮತ್ತು ಇಆರ್‌ಸಿಪಿ ಕ್ರಮಗಳಿಗೆ ಒಳಗಾದರು, ಆದರೆ ಸಾಮಾನ್ಯ ಪಿತ್ತರಸ ನಾಳ (ಸಿಬಿಡಿ) ಕಲ್ಲುಗಳನ್ನು ಹೊರತೆಗೆಯಲು ಸಾಧ್ಯವಾಗಿರಲಿಲ್ಲ. ಹೆಚ್ಚಿನ ಚಿಕಿತ್ಸೆಗಾಗಿ ರೋಗಿಗೆ ಬೆಂಗಳೂರಿಗೆ ಹೋಗುವಂತೆ ಸೂಚಿಸಲಾಗಿತ್ತು. ಆದರೆ ಡಾ. ವಿಶ್ವಾಸ್ ಪೈ ಅವರ ಸಲಹೆಯಂತೆ ರೋಗಿಯು ಎಚ್‌ಸಿಜಿ ಕೆಎಲ್‌ಇ ಸುಚಿರಾಯು ಆಸ್ಪತ್ರೆಗೆ ಹೋಗಲು ನಿರ್ಧರಿಸಿದರು. ಪ್ರಕರಣವನ್ನು ವಿವರವಾಗಿ ಮೌಲ್ಯೀಕರಿಸಿದ ನಂತರ, ಅವರನ್ನು ಡಾ. ಸಂದೀಪ್ ಕುಂಬಾರ್ ಅವರನ್ನು ಸಂಪರ್ಕಿಸುವಂತೆ ಸೂಚಿಸಲಾಯಿತು. ಅವರು ನಿಖರವಾದ ಒಂದು ಗಂಟೆಯ ಅವಧಿಯ ಸ್ಪೈ ಚೋಲ್ ಆಂಜಿಯೋಸ್ಕೋಪಿ ಕ್ರಮ ನಡೆಸಲು ನಿರ್ಧರಿಸಿದರು.

ರೋಗಿಯ ಸಮಸ್ಯೆಯಲ್ಲಿನ ಸಂಕೀರ್ಣತೆಗಳನ್ನು ಗಮನಿಸಿ, ಇಆರ್‌ಸಿಪಿ ಮತ್ತು ಸ್ಪೈ ಚೋಲ್ ಎಂಜಿಯೋಸ್ಕೋಪಿ ಕ್ರಮಗಳನ್ನು ಕೈಗೊಳ್ಳಲಾಯಿತು. ತಜ್ಞರ ತಂಡವು ಕಲ್ಲುಗಳ ಸ್ಥಾನವನ್ನು ಪತ್ತೆಹಚ್ಚಲು ಸುಧಾರಿತ ಇಮೇಜಿಂಗ್ ಪರೀಕ್ಷೆಗಳನ್ನು ಬಳಸಿತು. ರೋಗಿಯ ಸ್ಥಿತಿಯನ್ನು ಗಮನಿಸಿ ಅತ್ಯಂತ ಕಡಿಮೆ ಆಕ್ರಮಣಕಾರಿ, ಹೆಚ್ಚು ನಿಖರ ಕ್ರಮ ನಡೆಸಲಾಯಿತು. ಈ ಪ್ರಕ್ರಿಯೆ ಇರ್ಫಾನ್‌ಗೆ ಹೊಸ ಭರವಸೆಯ ಭಾವ ಮೂಡಿಸಿತ್ತು. ಸಂಕೀರ್ಣ ಪಚನಾಂಗ ವ್ಯವಸ್ಥೆ ಸಂಬಂಧಿತ ಪ್ರಕರಣಗಳನ್ನು ನಿರ್ವಹಿಸುವಲ್ಲಿ ಆಸ್ಪತ್ರೆಯ ಪರಿಣತಿಗೆ ಸಾಕ್ಷಿಯಾಗಿದೆ. ಈ ವೈದ್ಯಕೀಯ ಕ್ರಮವನ್ನು ಡಾ. ಕುಂಬಾರ್ ಮತ್ತು ಡಾ. ಚಂಟಿ ಅವರು ಯಶಸ್ವಿಯಾಗಿ ನಿರ್ವಹಿಸಿದರು.



ಹುಬ್ಬಳ್ಳಿಯ ಎಚ್‌ಸಿಜಿ ಕೆಎಲ್‌ಇ ಸುಚಿರಾಯು ಆಸ್ಪತ್ರೆಯ ಪಚನಾಂಗ ರೋಗಶಾಸ್ತ್ರ ಸಲಹಾತಜ್ಞರಾದ ಡಾ. ಸಂದೀಪ್ ಕುಂಬಾರ್ ಅವರು ಪ್ರಕರಣ ಕುರಿತಂತೆ ತಮ್ಮ ಆಲೋಚನೆ ಹಂಚಿಕೊಂಡು ಮಾತನಾಡಿ, "ಶ್ರೀ ಇರ್ಫಾನ್ ಅವರನ್ನು ಸಂಕೀರ್ಣ ವೈದ್ಯಕೀಯ ಸ್ಥಿತಿಯೊಂದಿಗೆ ಎಚ್‌ಸಿಜಿಗೆ ಕರೆತರಲಾಯಿತು. ಅವರು ಎರಡು ಪಿತ್ತಜನಕಾಂಗದ ಕಲ್ಲುಗಳನ್ನು ಹೊಂದಿದ್ದರು, ಒಂದನ್ನು ಸಿಬಿಡಿಯಲ್ಲಿ ಇನ್ನೊಂದು ಎಡ ಯಕೃತ್ತಿನ ನಾಳದೊಳಗೆ ಆಳವಾಗಿ ಸೇರಿಕೊಂಡಿತ್ತು. ಇದು ಅಪರೂಪದ ಸಂಯೋಜನೆಯಾಗಿತ್ತಲ್ಲದೇ ಕೇವಲ ಶೇ. 1ರಿಂದ 5ರಷ್ಟು ಪ್ರಕರಣಗಳಲ್ಲಿ ಕಂಡುಬರುತ್ತದೆ. ಇದು ನಮಗೆ ಒಂದು ಅನನ್ಯ ಸವಾಲು ಒಡ್ಡುವಂಥದ್ದಾಗಿತ್ತು. ಕಲ್ಲುಗಳ ಸಂಕೀರ್ಣ ಮತ್ತು ಅಡಗಿದ್ದ ಸ್ಥಾನಗಳ ಕಾರಣದಿಂದಾಗಿ ಸಾಂಪ್ರದಾಯಿಕ ಇಆರ್‌ಸಿಪಿ ಒಂದು ಆಯ್ಕೆಯಾಗಿರಲಿಲ್ಲ. ಇಆರ್‌ಸಿಪಿಯ ಮಿತಿಗಳನ್ನು ಗುರುತಿಸಿ, ನಾವು ಅತ್ಯಾಧುನಿಕ ಸ್ಪೈ ಚೋಲ್ ಎಂಜಿಯೋಸ್ಕೋಪಿ ಆರಿಸಿಕೊಂಡಿದ್ದೇವೆ. ಇದು ಒಂದು ಸಂಕೀರ್ಣ ಕಾರ್ಯವಿಧಾನವಾಗಿದ್ದು ಅದನ್ನು ನಿರ್ವಹಿಸುವಾಗ ಹೆಚ್ಚಿನ ನಿಖರತೆಯ ಅಗತ್ಯವಿರುತ್ತದೆ. ಶ್ರೀ ಇರ್ಫಾನ್ ಈಗ ಸಂಪೂರ್ಣವಾಗಿ ಚೇತರಿಸಿಕೊಂಡಿದ್ದು ಸಾಮಾನ್ಯ ಸ್ಥಿತಿಗೆ ಮರಳಿದ್ದಾರೆ" ಎಂದರು.

ಹುಬ್ಬಳ್ಳಿಯ ಎಚ್‌ಸಿಜಿ ಕೆಎಲ್‌ಇ ಸುಚಿರಾಯು ಆಸ್ಪತ್ರೆಯ ಪಚನಾಂಗ ರೋಗಶಾಸ್ತ್ರ ಸಲಹಾತಜ್ಞರಾದ ಡಾ. ಸಂಜೀವ್ ಚಟ್ನಿ ಅವರು ಪ್ರಕರಣ ಕುರಿತಂತೆ ತಮ್ಮ ಅಭಿಪ್ರಾಯ ಹಂಚಿಕೊಂಡು ಮಾತನಾಡಿ, "ನಾವು ಎದುರಿಸಿದ ಅತ್ಯಂತ ಜಟಿಲವಾದ ಪ್ರಕರಣ ಇರ್ಫಾನ್ ಅವರದ್ದು ಸ್ಪೈ ಚೋಲ್ ಆಂಜಿಯೋಸ್ಕೋಪಿಯನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲು ನಿಖರ ಕೌಶಲ್ಯ ಮತ್ತು ನಿಖರತೆಯ ಅಗತ್ಯವಿರುತ್ತದೆ.

ಇಆರ್‌ಸಿಪಿ ಜೊತೆಗೆ ಈ ತಂತ್ರವನ್ನು ಯಶಸ್ವಿಯಾಗಿ ಬಳಕೆಯು ನಮ್ಮ ಸಂಯುಕ್ತ ಪರಿಣತಿಯ ಬಲ ಹಾಗೂ ರೋಗಿಗಳ ಅತ್ಯುತ್ತಮ ಆರೈಕೆಗೆ ಬದ್ಧತೆಗಳನ್ನು ಪ್ರದರ್ಶಿಸಿದೆ. ನಮ್ಮ ಅತ್ಯಾಧುನಿಕ ರೋಗನಿರ್ಣಯ ವ್ಯವಸ್ಥೆ ಮತ್ತು ಚಿಕಿತ್ಸಾ ಸಾಧನಗಳ ಬೆಂಬಲದೊಂದಿಗೆ, ನಾವು ಗಮನಾರ್ಹವಾದ ಪ್ರಗತಿ ಸಾಧಿಸಿದ್ದೇವೆ ಎಂದು ನಾವು ನಂಬುತ್ತೇವೆ" ಎಂದರು.

ಇರ್ಫಾನ್ ತಮ್ಮ ಹೃತ್ಪೂರ್ವಕ ಕೃತಜ್ಞತೆಯನ್ನು ವ್ಯಕ್ತಪಡಿಸಿ ಮಾತನಾಡಿ, "ನನ್ನ ಸವಾಲಿನ ವೈದ್ಯಕೀಯ ಸ್ಥಿತಿಯನ್ನು ಪರಿಹರಿಸಲು ನನಗೆ ಸಹಾಯ ಮಾಡಿದ ಎಚ್‌ಸಿಜಿ ಕೆಎಲ್‌ಇ ಸುಚಿರಾಯು ಆಸ್ಪತ್ರೆ ಮತ್ತು ಇಲ್ಲಿನ ವೈದ್ಯರ ತಂಡಕ್ಕೆ ನಾನು ಹೃದಯದಾಳದಿಂದ ಕೃತಜ್ಞತೆ ವ್ಯಕ್ತಪಡಿಸುತ್ತೇನೆ. ವೈದ್ಯಕೀಯ ತಂಡದ ಅಸಾಧಾರಣ ಕಾಳಜಿ ಮತ್ತು ದೃಢವಾದ ಬೆಂಬಲಗಳು ಈ ಕಷ್ಟದ ಸಮಯದಲ್ಲಿ ಸಾಂತ್ವನ ತಂದಿತು. ನಾನು ಪ್ರಾಮಾಣಿಕವಾಗಿ ಅವರ ಬದ್ಧತೆಯನ್ನು ಶ್ಲಾಘಿಸಿಸುತ್ತೇನಲ್ಲದೇ, ಇದು ಆರೋಗ್ಯಸೇವಾ ವ್ಯವಸ್ಥೆಯಲ್ಲಿ ನನ್ನ ನಂಬಿಕೆಯನ್ನು ಪುನಃಸ್ಥಾಪಿಸಿದೆ" ಎಂದರು.

ರೋಗಗಳಿಗೆ ಅತ್ಯಾಧುನಿಕ ಚಿಕಿತ್ಸೆಗಳನ್ನು ನೀಡುವ ಬದ್ಧತೆ ಮತ್ತು ಅದರ ರೋಗನಿರ್ಣಯದ ಪರಿಣತಿ ಮತ್ತು ಅತ್ಯಾಧುನಿಕ ತಂತ್ರಜ್ಞಾನಗಳಿಂದಾಗಿ ಅತ್ಯಂತ ಸಂಕೀರ್ಣವಾದ ವೈದ್ಯಕೀಯ ಪ್ರಕರಣಗಳನ್ನು ಸಹ ನಿಭಾಯಿಸುವುದನ್ನು ಮುಂದುವರಿಸಲು ಎಚ್‌ಸಿಜಿ ಕೆಎಲ್‌ಇ ಸುಚಿರಾಯು ಆಸ್ಪತ್ರೆಗೆ ಸಾಧ್ಯವಾಗಿದೆಯಲ್ಲದೇ ಇದು ಸತತವಾಗಿ ರೋಗಿಗಳ ಆರೈಕೆ ಮತ್ತು ಚಿಕಿತ್ಸೆಯಲ್ಲಿ ಆಸ್ಪತ್ರೆಯ ಸ್ಥಾನಮಾನವನ್ನು ಪುನರ್ ದೃಢೀಕರಿಸುತ್ತದೆ.



## ಚಾಲಕನ ನಿಯಂತ್ರಣ ತಪ್ಪಿ ಸ್ಕೂಲ್ ಬಸ್ ಪಲ್ಟಿ

ಚಿತ್ರದುರ್ಗ: ಶಾಲಾ ಬಸ್ ಪಲ್ಟಿ ಹೊಡೆದು 10ಕ್ಕೂ ಹೆಚ್ಚು ಮಕ್ಕಳು ಗಾಯಗೊಂಡಿರುವ ಘಟನೆ ಚಿತ್ರದುರ್ಗ ಜಿಲ್ಲೆ ಹೊಸದುರ್ಗ ತಾಲೂಕಿನ ಮಲ್ಲಪ್ಪನಹಳ್ಳಿ ಬಳಿ ನಡೆದಿದೆ.

ಚಾಲಕನ ನಿಯಂತ್ರಣ ತಪ್ಪಿ ಶಾಲಾ ಬಸ್ ಪಲ್ಟಿಯಾಗಿದೆ ಎಂದು ತಿಳಿದುಬಂದಿದೆ.

ಮಲ್ಲಪ್ಪನಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಬಸ್ ಇದಾಗಿದ್ದು, ಗಾಯಾಳು ವಿದ್ಯಾರ್ಥಿಗಳು ಹೊಸದುರ್ಗ ಆಸ್ಪತ್ರೆಗೆ ದಾಖಲಿಸಲಾಗಿದೆ.

ಅದೃಷ್ಟವಶಾತ್ ವಿದ್ಯಾರ್ಥಿಗಳು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಹೊಸದುರ್ಗ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದ ಪ್ರಕರಣ ನಡೆದಿದೆ.

VOL. 04 ISSUE. 282 RNI. KARKAN/2020/79084 REG.NO.G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka. Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089